**2006 ರ ಕರ್ನಾಟಕ ಅಧಿನಿಯಮ ಸಂಖ್ಯೆ 08**

**ಕರ್ನಾಟಕ ವೃತ್ತಿ ಶಿಕ್ಷಣ ಸಂಸ್ಥೆಗಳ (ಪ್ರವೇಶ ನಿಯಂತ್ರಣ ಮತ್ತು ಶುಲ್ಕ ನಿಗದಿ) ಅಧಿನಿಯಮ, 2006**

**ಪ್ರಕರಣಗಳ ಕ್ರಮ ಪಟ್ಟಿ**


ಉದ್ದೇಶಗಳು ಮತ್ತು ಕಾರಣಗಳ ಹೇಳಿಕೆ

ಪ್ರಕರಣಗಳು:

1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ
2. ಪರಿಭಾಷೆಗಳು
3. ರಾಜ್ಯ ಸಾಮಾನ್ಯ ಪ್ರವೇಶ ಪರೀಕ್ಷಾ ಸಮಿತಿ
4. ಅನುದಾನಿತವಲ್ಲದ ವೃತ್ತಿ ಶಿಕ್ಷಣ ಸಂಸ್ಥೆಗಳಲ್ಲಿ ಪ್ರವೇಶದ ವಿಧಾನ

4ಎ. ಸಮ್ಮತಾಭಿಪ್ರಾಯದ ಒಪ್ಪಂದದ ಸಂದರ್ಭದಲ್ಲಿ ಪ್ರವೇಶ ವಿಧಾನ

4ಬಿ. ಡೀಮ್ಡ್ ವಿಶ್ವವಿದ್ಯಾಲಯ ಸಂಸ್ಥೆಗಳಲ್ಲಿ ಪ್ರವೇಶ ವಿಧಾನ

5. ಪ್ರವೇಶ ಮೇಲ್ವಿಚಾರಣಾ ಸಮಿತಿ
6. ಶುಲ್ಕ ನಿಯಂತ್ರಣ ಸಮಿತಿ
7. ಶುಲ್ಕ ನಿಗದಿಗೆ ಪರಿಗಣನೆಯ ಅಂಶಗಳು
8. ಅರ್ಹತೆ
9. ಸೀಟುಗಳ ಹಂಚಿಕೆ ಮತ್ತು ಮೀಸಲಾತಿ
10. ಅಧಿನಿಯಮವನ್ನು ಉಲ್ಲಂಘಿಸಿ ಮಾಡಿದ ಪ್ರವೇಶಗಳನ್ನು ಅಸಿಂಧುಗೊಳಿಸುವುದು
11. ರಾಜ್ಯ ಸಾಮಾನ್ಯ ಪ್ರವೇಶ ಪರೀಕ್ಷಾ ಸಮಿತಿಯ ನಿಧಿ
12. ರಾಜ್ಯ ಸರ್ಕಾರದಿಂದ ಅನುದಾನಗಳು
13. ಸಾಲಪಡೆಯಲು ಅಧಿಕಾರ
14. ಲೆಕ್ಕ ಪತ್ರಗಳು ಮತ್ತು ಲೆಕ್ಕ ಪರಿಶೋಧನೆ
15. ಸಮಿತಿಯ ಆಯವ್ಯಯ ಪತ್ರ
16. ವರದಿ
17. ಸದ್ಭಾವನೆಯಿಂದ ಕೈಗೊಂಡ ಕ್ರಮಕ್ಕೆ ರಕ್ಷಣೆ
18. ನಿರ್ದೇಶನಗಳನ್ನು ನೀಡಲು ರಾಜ್ಯ ಸರ್ಕಾರದ ಅಧಿಕಾರ
19. ದಂಡಗಳು
20. ಪ್ರವೇಶಿಸುವ ಮತ್ತು ಪರಿಶೋಧಿಸುವ ಅಧಿಕಾರ
21. ಇತರ ಕಾನೂನುಗಳ ಮೇಲೆ ಅಧಿನಿಯಮದ ಅಧ್ಯಾರೋಹಿ ಪರಿಣಾಮ
22. ತೊಂದರೆಗಳನ್ನು ನಿವಾರಿಸುವ ಅಧಿಕಾರ
23. ನಿಯಮಗಳ ರಚನಾಧಿಕಾರ
24. ತಾತ್ಕಾಲಿಕ ಉಪಬಂಧಗಳು

## ಉದ್ದೇಶಗಳು ಮತ್ತು ಕಾರಣಗಳ ಹೇಳಿಕೆ

I

**2006 ಸಂಖ್ಯೆ 8**: ಕರ್ನಾಟಕ ರಾಜ್ಯದಲ್ಲಿನ ವೃತ್ತಿ ಶಿಕ್ಷಣ ಸಂಸ್ಥೆಗಳಿಗೆ ಪ್ರವೇಶವನ್ನು ನಿಯಂತ್ರಿಸುವುದಕ್ಕಾಗಿ ಮತ್ತು ಶುಲ್ಕವನ್ನು ನಿಗದಿಪಡಿಸುವುದಕ್ಕಾಗಿ ಉಪಬಂಧಕಲ್ಪಿಸುವುದು ಮತ್ತು ಅನುಸೂಚಿತ ಜಾತಿ, ಅನುಸೂಚಿತ ಬುಡಕಟ್ಟು ಹಾಗೂ ಇತರ ಹಿಂದುಳಿದ ವರ್ಗಗಳಿಗೆ ಸೇರಿದ ವ್ಯಕ್ತಿಗಳಿಗೆ, ವೃತ್ತಿಶಿಕ್ಷಣ ಸಂಸ್ಥೆಗಳಲ್ಲಿ ಸೀಟುಗಳನ್ನು ಮೀಸಲಿಡುವುದಕ್ಕಾಗಿ ಉಪಬಂಧಕಲ್ಪಿಸುವುದು ಅವಶ್ಯಕವೆಂದು ಪರಿಗಣಿಸಲಾಗಿದೆ.

(2003) 6 ಎಸ್‌ಸಿಸಿ 697 ರಲ್ಲಿ ವರದಿಯಾಗಿರುವ ಇಸ್ಲಾಮಿಕ್ ಅಕಾಡೆಮಿ ಆಫ್ ಎಜುಕೇಷನ್ ಮತ್ತು ಇತರರು–ವಿರುದ್ಧ–ಕರ್ನಾಟಕ ರಾಜ್ಯ, ಈ ಪ್ರಕರಣದಲ್ಲಿ ಸನ್ಮಾನ್ಯ ಸರ್ವೋಚ್ಚ ನ್ಯಾಯಾಲಯವು ನೀಡಿದ ತನ್ನ ತೀರ್ಪಿನಲ್ಲಿ ವೃತ್ತಿ ಶಿಕ್ಷಣ ವ್ಯಾಸಂಗ ಕ್ರಮಗಳಿಗೆ ಪ್ರವೇಶವನ್ನು, ಸಂಸತ್ತು ಆ ಬಗ್ಗೆ ಸೂಕ್ತ ಕಾನೂನನ್ನು ಅಧಿನಿಯಮವಾಗಿ ತರುವವರೆಗೆ, ವೃತ್ತಿ ಶಿಕ್ಷಣ ಸಂಸ್ಥೆಗಳಿಗೆ ಪ್ರವೇಶಗಳ ಮೇಲ್ವಿಚಾರಣೆ ನಡೆಸಲು ಒಂದು ಸಮಿತಿ ಹಾಗೂ ಶುಲ್ಕ ವ್ಯವಸ್ಥೆಯನ್ನು ಅನುಮೋದಿಸಲು ಇನ್ನೊಂದು ಸಮಿತಿ, ಹೀಗೆ ಎರಡು ಸಮಿತಿಗಳ ಮೂಲಕ ನಿಯಂತ್ರಿಸಲು ಆದೇಶಿಸಿದೆ.

(2005) 6 ಎಸ್‌ಸಿಸಿ 537 ರಲ್ಲಿ ವರದಿಯಾದ, ಪಿ.ಎ. ಇನಾಂದಾರ್ ಮತ್ತು ಇತರರು–ವಿರುದ್ಧ–ಮಹಾರಾಷ್ಟ್ರ ರಾಜ್ಯ, ಈ ಪ್ರಕರಣದಲ್ಲಿ, ಸರ್ವೋಚ್ಚನ್ಯಾಯಾಲಯವು, ರಾಜ್ಯದಲ್ಲಿ ಯಾವುದೇ ಒಂದು ವ್ಯಾಸಂಗ ವಿಷಯದಲ್ಲಿ ಶಿಕ್ಷಣವನ್ನು ಅಲ್ಪಸಂಖ್ಯಾತ ಅಥವಾ ಅಲ್ಪಸಂಖ್ಯಾತವಲ್ಲದ ಅಥವಾ ಅಂತಹವೇ ಒಂದಕ್ಕಿಂತ ಹೆಚ್ಚು ಸಂಸ್ಥೆಗಳು ನೀಡುತ್ತಿದ್ದಲ್ಲಿ, ಆಗ ಪಾರದರ್ಶಕತೆ ಮತ್ತು ಮೆರಿಟ್, ಈ ಎರಡೂ ಉದ್ದೇಶಗಳನ್ನು ಈಡೇರಿಸಬೇಕಾದರೆ ಒಂದೇ ಸಾಮಾನ್ಯ ಪ್ರವೇಶ ಪರೀಕ್ಷೆ ನಡೆಸಿ ತರುವಾಯ ಕೇಂದ್ರಿಯ ಕೌನ್ಸೆಲಿಂಗ್ ವ್ಯವಸ್ಥೆ ಮಾಡಬೇಕೆಂದು ಅಥವಾ ಇದನ್ನೇ ಬೇರೆ ರೀತಿಯಲ್ಲಿ ಹೇಳುವುದಾದರೆ, ಪ್ರವೇಶಕ್ಕಾಗಿ ಏಕ ಗವಾಕ್ಷಿ ವ್ಯವಸ್ಥೆ ಅಗತ್ಯವಿದೆ ಎಂದು ತೀರ್ಮಾನ ನೀಡಿದೆ. ಆದ್ದರಿಂದ ಒಂದೇ ಸ್ವರೂಪದ ಅಥವಾ ಸಮಾನ ಸ್ವರೂಪದ ಎಲ್ಲ ಸಂಸ್ಥೆಗಳು ಅವು ಅಲ್ಪಸಂಖ್ಯಾತರ ಸಂಸ್ಥೆಯಾಗಿರಲಿ ಅಥವಾ ಅಲ್ಪಸಂಖ್ಯಾತವಲ್ಲದ ಸಂಸ್ಥೆಯಾಗಿರಲಿ ಒಂದೇ ಸಾಮಾನ್ಯ ಪ್ರವೇಶ ಪರೀಕ್ಷೆ ನಡೆಸಿ ತರುವಾಯ ಕೇಂದ್ರಿಯ ಕೌನ್ಸಲಿಂಗ್ ವ್ಯವಸ್ಥೆ ಮೂಲಕ ತಮ್ಮಲ್ಲಿನ ಸೀಟು ಭರ್ತಿ ಮಾಡಿಕೊಳ್ಳಬೇಕೆಂದು ತೀರ್ಪು ನೀಡಿದೆ. ಅಲ್ಲದೇ ಸರ್ವೋಚ್ಚ ನ್ಯಾಯಾಲಯವು, ಅದೇ ತೀರ್ಪಿನಲ್ಲಿ ರಾಜ್ಯವು, ಪ್ರವೇಶಗಳು ನ್ಯಾಯಯುತವಾಗಿ ಮತ್ತು ಮೆರಿಟ್ ಆಧಾರದ ಮೇಲೆ ನಡೆಯುವಂತೆ ನೋಡಿಕೊಳ್ಳುವ ಸಲುವಾಗಿ ಹಾಗೂ ದುರಾಡಳಿತ ತಡೆಯುವ ಸಲುವಾಗಿ ಒಂದು ಕೇಂದ್ರೀಯ ಮತ್ತು ಏಕಗವಾಕ್ಷಿ ಕಾರ್ಯವಿಧಾನವನ್ನು ಏರ್ಪಡಿಸಿ ಪ್ರವೇಶವನ್ನು ನಿಯಂತ್ರಿಸಬಹುದೆಂದು, ಖಾಸಗಿ ಶಿಕ್ಷಣ ಸಂಸ್ಥೆಗಳು ಅನುಸರಿಸುವ ಪ್ರವೇಶ ಪ್ರಕ್ರಿಯೆಯು, ನ್ಯಾಯಾಲಯವು ನಿಯಮಿಸಿದ ಮೂರು ಬಗೆಯ ಪರೀಕ್ಷೆಗಳಲ್ಲಿ ಎಲ್ಲ ಅಥವಾ ಯಾವುದೊಂದನ್ನು ಯಶಸ್ವಿಗೊಳಿಸಲು ವಿಫಲವಾದರೆ, ಆಗ ರಾಜ್ಯವು ಪ್ರವೇಶ ಪ್ರಕ್ರಿಯೆಯನ್ನು ತಾನೇ ಕೈಗೆತ್ತಿಕೊಂಡು ತನ್ನದೇ ಆದ ಪ್ರಕ್ರಿಯೆಯನ್ನು ಅಳವಡಿಸಬಹುದೆಂದು ತೀರ್ಮಾನ ನೀಡಿದೆ. ಈ ಸಂಸ್ಥೆಗಳಲ್ಲಿ ಅಲ್ಪಸಂಖ್ಯಾತರಲ್ಲದ ಸಮುದಾಯಗಳ ವಿದ್ಯಾರ್ಥಿಗಳ ಸಂಖ್ಯೆ "ಕನಿಷ್ಠ" ಪ್ರಮಾಣಕ್ಕಿಂತ ಹೆಚ್ಚಿದ್ದರೆ ಆಗ ಅಲ್ಪಸಂಖ್ಯಾತ ಸಂಸ್ಥೆಗಳು ತಮ್ಮ ಅಲ್ಪಸಂಖ್ಯಾತ ಸ್ವರೂಪವನ್ನು ಕಳೆದು ಕೊಳ್ಳುತ್ತವೆ ಎಂದು ಸ್ಪಷ್ಟಪಡಿಸಲಾಗಿದೆ. ಸರ್ವೋಚ್ಚ ನ್ಯಾಯಾಲಯವೂ, ಅಲ್ಪಸಂಖ್ಯಾತ 3 ವಿದ್ಯಾರ್ಥಿಗಳು ರಾಜ್ಯದೊಳಗಿನವರೇ ಆಗಿರತಕ್ಕದ್ದೆಂದು ಸ್ಪಷ್ಟವಾಗಿ ತಿಳಿಸಿದೆ. ಇದನ್ನು ಪರಿಗಣಿಸಿ, ರಾಜ್ಯದೊಳಗಿರುವ ಆ, ಅಲ್ಪಸಂಖ್ಯಾತ ಸಮುದಾಯಗಳ ವಿದ್ಯಾರ್ಥಿಗಳಿಗಾಗಿ ಅಲ್ಪಸಂಖ್ಯಾತರ ಸಂಸ್ಥೆಗಳಲ್ಲಿ ಶೇಕಡಾ ಅರವತ್ತಾರರಷ್ಟು ಮೀಸಲಾತಿಗೆ ಈ ವಿಧೇಯಕವು ಉಪಬಂಧಕಲ್ಪಿಸುತ್ತದೆ.

ಅನುಸೂಚಿತ ಜಾತಿ ಮತ್ತು ಅನುಸೂಚಿತ ಬುಡಕಟ್ಟುಗಳ ಜನ ಸಂಖ್ಯೆಯು ರಾಜ್ಯದಲ್ಲಿಯ ಒಟ್ಟು ಜನಸಂಖ್ಯೆಯ ಶೇಕಡಾ ಐವತ್ತನ್ನು ಮೀರಿದ್ದರೂ. ಸರ್ವೋಚ್ಚ ನ್ಯಾಯಾಲಯವು, ಎಐಆರ್ 1993 ಎಸ್.ಸಿ. 477 ರಲ್ಲಿ ವರದಿಯಾದ, ಇಂದಿರಾ ಸಹ್ವಾನಿ–ವಿರುದ್ಧ–ಭಾರತ ಸರ್ಕಾರ ಮೊಕದ್ದಮೆಯಲ್ಲಿ ಎಲ್ಲ ಪ್ರವರ್ಗಗಳಿಗೆ ಮಾಡಲಾದ ಮೀಸಲಾತಿಯು, ಶೇಕಡಾ ಐವತ್ತನ್ನು ಮೀರತಕ್ಕದ್ದಲ್ಲ ಎಂದು ತೀರ್ಪು ನೀಡಿದೆ. ಇದನ್ನು ಗಮನದಲ್ಲಿಟ್ಟುಕೊಂಡು ರಾಜ್ಯಸರ್ಕಾರವು, ಅನುಸೂಚಿತ ಜಾತಿಗಳಿಗೆ, ಅನುಸೂಚಿತ ಬುಡಕಟ್ಟುಗಳಿಗೆ ಮತ್ತು ಇತರ ಹಿಂದುಳಿದ ವರ್ಗಗಳಿಗೆ ಶೇಕಡಾ ಐವತ್ತರವರೆಗೆ ಮೀಸಲಾತಿಯನ್ನು ಒದಗಿಸುವುದಕ್ಕಾಗಿ ಸಂವಿಧಾನದ 15(4)ನೇ ಅನುಚ್ಛೇದದ ಅಡಿಯಲ್ಲಿ ಆದೇಶಗಳನ್ನು ಹೊರಡಿಸಿದೆ.

ಸಂವಿಧಾನದ 15(5)ನೇ ಅನುಚ್ಛೇದದಲ್ಲಿ (ಸಂವಿಧಾನ (ತೊಂಬತ್ತೂರನೇ ತಿದ್ದುಪಡಿ) ಅಧಿನಿಯಮ, 2005 ರ ಮೂಲಕ ಸೇರಿಸಿದಂತೆ) ಅಲ್ಪಸಂಖ್ಯಾತ ಶಿಕ್ಷಣ ಸಂಸ್ಥೆಗಳ ಹೊರತಾಗಿ ಅನುದಾನಿತವಾಗಿರುವ ಅಥವಾ ಅನುದಾನಿತವಾಗಿಲ್ಲದ, ಖಾಸಗಿ ಶಿಕ್ಷಣ ಸಂಸ್ಥೆಗಳೂ ಸೇರಿದಂತೆ ಎಲ್ಲ ಶಿಕ್ಷಣ ಸಂಸ್ಥೆಗಳಿಗೆ, ಪ್ರವೇಶಕ್ಕೆ ಸಂಬಂಧಪಟ್ಟಂತೆ ಸಂವಿಧಾನದ 15ನೇ ಅನುಚ್ಛೇದದಲ್ಲಿ ಮತ್ತು 19ನೇ ಅನುಚ್ಛೇದದ (ಜಿ) ಉಪಖಂಡದಲ್ಲಿ ಏನೇ ಇದ್ದರೂ ಯಾವುದೇ ಸಾಮಾಜಿಕವಾಗಿ ಅಥವಾ ಶೈಕ್ಷಣಿಕವಾಗಿ ಹಿಂದುಳಿದ ನಾಗರಿಕ ವರ್ಗಗಳ ಪುರೋಭಿವೃದ್ಧಿಗಾಗಿ ಅಥವಾ ಅನುಸೂಚಿತ ಜಾತಿಗಳು ಅಥವಾ ಅನುಸೂಚಿತ ಪಂಗಡಗಳಿಗಾಗಿ ರಾಜ್ಯ ಸರ್ಕಾರವು ಕಾನೂನಿನ ಮೂಲಕ ವಿಶೇಷ ಉಪಬಂಧಗಳನ್ನು ರಚಿಸುವುದಕ್ಕೆ, ಉಪಬಂಧಕಲ್ಪಿಸಿದೆ.

ಮೇಲ್ಕಂಡ ಕಾರ್ಯನೀತಿಯ ಆಧಾರದ ಮೇಲೆ, ಸಾಮಾಜಿಕವಾಗಿ ಮತ್ತು ಶೈಕ್ಷಣಿಕವಾಗಿ ಹಿಂದುಳಿದಿರುವ, ಅನುಸೂಚಿತ ಜಾತಿಗಳಿಗೆ, ಅನುಸೂಚಿತ ಬುಡಕಟ್ಟುಗಳಿಗೆ ಮತ್ತು ಇತರ ಹಿಂದುಳಿದ ವರ್ಗಗಳಿಗೆ ಶೇಕಡಾ ಐವತ್ತರ ವರೆಗೆ ಸರ್ಕಾರಿ, ಅನುದಾನಿತ ಮತ್ತು ಅನುದಾನಿತವಲ್ಲದ ಶಿಕ್ಷಣ ಸಂಸ್ಥೆಗಳಲ್ಲಿ ಮೀಸಲಾತಿಗಾಗಿ ಉಪಬಂಧಕಲ್ಪಿಸುವುದು ಅವಶ್ಯಕವೆಂದು ಪರಿಗಣಿಸಲಾಗಿದೆ. ಆದ್ದರಿಂದ ಈ ವಿಧೇಯಕ.

[2006ರ ವಿಧಾನಸಭೆಯ ವಿಧೇಯಕ ಸಂಖ್ಯೆ 1]

## II

**2015ರ ತಿದ್ದುಪಡಿ ಅಧಿನಿಯಮ ಸಂಖ್ಯೆ 39.–** ಈ ಮುಂದಿನವುಗಳಿಗಾಗಿ ಉಪಬಂಧಗಳನ್ನು ಕಲ್ಪಿಸುವುದಕ್ಕಾಗಿ ಕರ್ನಾಟಕ ವೃತ್ತಿ ಶಿಕ್ಷಣ ಸಂಸ್ಥೆಗಳ (ಪ್ರವೇಶ ನಿಯಂತ್ರಣ ಮತ್ತು ಶುಲ್ಕ ನಿಗದಿ) ಅಧಿನಿಯಮ, 2006ನ್ನು ತಿದ್ದುಪಡಿ ಮಾಡುವುದು ಅವಶ್ಯವೆಂದು ಪರಿಗಣಿಸಲಾಗಿದೆ, ಎಂದರೆ:–

**(1)** ಅಲ್ಪಸಂಖ್ಯಾತೇತರ ಅಥವಾ ಅಲ್ಪಸಂಖ್ಯಾತ ಖಾಸಗಿ ಅನುದಾನಿತವಲ್ಲದ ವೃತ್ತಿ ಶಿಕ್ಷಣ ಸಂಸ್ಥೆಗಳ ಸಂಘಟನೆಯೊಂದಿಗೆ ಸಮ್ಮತಾಭಿಪ್ರಾಯದ ಒಪ್ಪಂದವನ್ನು ಮಾಡಿಕೊಳ್ಳಲು ರಾಜ್ಯ ಸರ್ಕಾರಕ್ಕೆ ಅಧಿಕಾರವನ್ನು ನೀಡುವುದಕ್ಕೆ ಹಾಗೂ ಬಹುಪಾಲು ವೃತ್ತಿ ಶಿಕ್ಷಣ ಸಂಸ್ಥೆಗಳು ಸ್ವೀಕರಿಸಬಹುದಾದ ಒಂದು ಕಾನೂನಾತ್ಮಕ ಚೌಕಟ್ಟನ್ನು ನೀಡಲು; ರಾಜ್ಯವು ರಚಿಸಿರುವ ಸಾಮಾನ್ಯ ಪ್ರವೇಶ ಪರೀಕ್ಷೆ ಸಮಿತಿಯ ಮೂಲಕ ಖಾಸಗಿ ಶೈಕ್ಷಣಿಕ ಸಂಸ್ಥೆಗಳಲ್ಲಿ ತುಂಬಬೇಕಾದ ಸರ್ಕಾರಿ ಸೀಟುಗಳ ಕೋಟಾವನ್ನು ಸಮ್ಮತಾಭಿಪ್ರಾಯದ ಒಪ್ಪಂದದ ಮೂಲಕ ಕಲ್ಪಿಸಿ ರಾಜ್ಯದ ಪ್ರತಿಭಾನ್ವಿತ ವಿದ್ಯಾರ್ಥಿಗಳ ಮತ್ತು ಸಂಸ್ಥೆಗಳ ಹಿತಾಸಕ್ತಿಯನ್ನು ಕಾಪಾಡುವುದಕ್ಕಾಗಿ; ಮತ್ತು ಖಾಸಗಿ ಶಿಕ್ಷಣ ಸಂಸ್ಥೆಗಳೊಂದಿಗೆ ಸಮ್ಮತಾಭಿಪ್ರಾಯದ ಒಪ್ಪಂದವನ್ನು ಮಾಡಿಕೊಳ್ಳುವಾಗ ಸಾಮಾನ್ಯ ಪ್ರವೇಶ ಪರೀಕ್ಷಾ ಸಮಿತಿಯ ಮೂಲಕ ಆಯ್ಕೆಯಾದ ಯಾವೊಬ್ಬ ವಿದ್ಯಾರ್ಥಿಗೂ ಹೆಚ್ಚಿನ ಹೊರೆ ಬೀಳದಂತೆ ನೋಡಿಕೊಳ್ಳುವುದು ಅಥವಾ ರಿಯಾಯಿತಿಗಳು ಮತ್ತು ವಿದ್ಯಾರ್ಥಿ ವೇತನವನ್ನು ಒದಗಿಸುವ ಮೂಲಕ ಕರ್ನಾಟಕ ವಿದ್ಯಾರ್ಥಿಯ ಹಿತಾಸಕ್ತಿಯನ್ನು ಕಾಪಾಡಲು;

(2) ಖಾಸಗಿ ವೃತ್ತಿ ಶಿಕ್ಷಣ ಸಂಸ್ಥೆಗಳ ಸಂಘಟನೆಯೊಂದಿಗೆ ಸಮ್ಮತಾಭಿಪ್ರಾಯಕ್ಕೆ ಸೇರುವಲ್ಲಿ ಸರ್ಕಾರದಿಂದ ಕೈಗೊಳ್ಳಲಾದ ಕ್ರಮವನ್ನು ಮತ್ತು 2015-16ನೇ ಶೈಕ್ಷಣಿಕ ಸಾಲಿನಲ್ಲಿ ಈ ಕುರಿತು ಹೊರಡಿಸಲಾದ ಅಧಿಸೂಚನೆಗಳನ್ನು ಮತ್ತು ಕೈಗೊಂಡ ಆನುಷಂಗಿಕ ಕ್ರಮವನ್ನು ಉಳಿಸಲು;

(3) ಯಾವೊಬ್ಬ ವಿದ್ಯಾರ್ಥಿಗೂ ಹೆಚ್ಚಿನ ಹೊರೆ ಬೀಳದಂತೆ ಸರ್ವೋಚ್ಚ ನ್ಯಾಯಾಲಯವು ಕಡ್ಡಾಯಪಡಿಸಿದಂತೆ ಕೈಗೆಟಕುವ ದರದಲ್ಲಿ ಯುಕ್ತ ಶುಲ್ಕವನ್ನು ನಿಗದಿಪಡಿಸಲು ಶುಲ್ಕ ನಿಯಂತ್ರಣ ಸಮಿತಿಗೆ ಮಾರ್ಗಸೂಚಿಗಳನ್ನು ನೀಡಲು ಹಾಗೂ ಪರಿಸ್ಥಿತಿಯ ಕಾರ್ಯಸಾಧ್ಯತೆಯನ್ನು ನಿರ್ವಹಿಸಲು ಅನುವಾಗುವಂತೆ ಮಾಡಲು; ಮತ್ತು

(4) ಕೆಲವು ಆನುಷಂಗಿಕ ತಿದ್ದುಪಡಿಗಳನ್ನು ಸಹ ಮಾಡಲಾಗಿದೆ.

ಆದ್ದರಿಂದ ಈ ವಿಧೇಯಕ.

(2015ರ ವಿಧಾನಸಭೆಯ ವಿಧೇಯಕ ಸಂಖ್ಯೆ 22:, ಕಡತ ಸಂಖ್ಯೆ:ಸಂವ್ಯಶಾಇ 28 ಶಾಸನ 2015)

(ಭಾರತ ಸಂವಿಧಾನದ 7ನೇ ಅನುಸೂಚಿಯ 3ನೇ ಪಟ್ಟಿಯ 25ನೆಯ ನಮೂದನೆಯಡಿಗಳಲ್ಲಿ ಬರುತ್ತದೆ.)

# III

**2017ರ ಅಧಿನಿಯಮ ಸಂಖ್ಯೆ 22.–** ಕರ್ನಾಟಕ ವೃತ್ತಿ ಶಿಕ್ಷಣ ಸಂಸ್ಥೆಗಳ (ಪ್ರವೇಶ ನಿಯಂತ್ರಣ ಮತ್ತು ಶುಲ್ಕ ನಿಗದಿ) ಅಧಿನಿಯಮ, 2006ನ್ನು (2006ರ ಕರ್ನಾಟಕ ಅಧಿನಿಯಮ 8) ಈ ಮುಂದಿನವುಗಳಿಗಾಗಿ ಉಪಬಂಧ ಕಲ್ಪಿಸಲು ತಿದ್ದುಪಡಿ ಮಾಡುವುದು ಅವಶ್ಯವೆಂದು ಪರಿಗಣಿಸಲಾಗಿದೆ, ಎಂದರೆ:–

(ಎ) ರಾಜ್ಯ ಸರ್ಕಾರವು ಸಾಮಾನ್ಯ ಪ್ರವೇಶ ಪರೀಕ್ಷೆಯನ್ನು ನಡೆಸುವುದು;

(ಬಿ) ಭಾರತ ಸರ್ಕಾರ ಅಥವಾ ಅದರ ಏಜೆನ್ಸಿಯು ಸಾಮಾನ್ಯ ಪ್ರವೇಶ ಪರೀಕ್ಷೆಯನ್ನು ನಡೆಸುವ ಸಂದರ್ಭದಲ್ಲಿ, ಅಂಥ ಸಾಮಾನ್ಯ ಪ್ರವೇಶ ಪರೀಕ್ಷೆಯಿಂದ ಅಭ್ಯರ್ಥಿಗಳ ರ್‍ಯಾಂಕಿಂಗ್ ಅನ್ನು ಪಡೆಯುವುದು;

(ಸಿ) ಡೀಮ್ಡ್ ವಿಶ್ವವಿದ್ಯಾಲಯಗಳಲ್ಲೂ ಸಹಾ ಸಾಮಾನ್ಯ ಪ್ರವೇಶ ಪರೀಕ್ಷೆ ಅಥವಾ ಭಾರತ ಸರ್ಕಾರ ಅಥವಾ ಅದರ ಏಜೆನ್ಸಿಯ ಮೂಲಕ ಸೀಟುಗಳನ್ನು ತುಂಬುವುದು;

(ಡಿ) ಖಾಸಗಿ ಶೈಕ್ಷಣಿಕ ಸಂಸ್ಥೆಗಳು ಸರ್ಕಾರದೊಂದಿಗೆ ಪರಸ್ಪರ ಒಪ್ಪಂದಕ್ಕೆ ಒಪ್ಪಿದಲ್ಲಿ ಆಗ ಸಾಮಾನ್ಯ ಪ್ರವೇಶ ಪರೀಕ್ಷೆಯನ್ನು ಅಂಥ ಒಪ್ಪಂದದ ಅನುಸಾರವಾಗಿ ನಡೆಸುವುದು;

(ಇ) ರಾಜ್ಯ ಸರ್ಕಾರವು ತಾನು ಅಥವಾ ತನ್ನ ಏಜೆನ್ಸಿಯ ಮೂಲಕ ನಡೆಸುವ ಕೇಂದ್ರೀಕೃತ ಕೌನ್ಸಿಲಿಂಗ್‌ಗಾಗಿ ನಿಯಮಗಳನ್ನು ನಿಯಮಿಸಬಹುದಾದ ಅಂಥ ರೀತಿಯಲ್ಲಿ ರಚಿಸುವುದು;

(ಎಫ್) "ವೃತ್ತಿ ಶಿಕ್ಷಣ ಸಂಸ್ಥೆ" ಎಂಬ ಪರಿಭಾಷೆಯಲ್ಲಿ ಖಾಸಗಿ ವಿಶ್ವವಿದ್ಯಾಲಯಗಳನ್ನು ಸೇರಿಸುವುದು;

(ಜಿ) ಇತರ ಪ್ರಾಸಂಗಿಕ ತಿದ್ದುಪಡಿಗಳನ್ನು ಕೂಡಾ ಮಾಡಲಾಗಿದೆ.

ಆದುದರಿಂದ ಈ ವಿಧೇಯಕ

(2017ರ ವಿಧಾನಸಭೆಯ ವಿಧೇಯಕ ಸಂಖ್ಯೆ:14 ಕಡತ ಸಂಖ್ಯೆ:ಸಂವ್ಯಶಾಇ 15 ಶಾಸನ 2017)
(ಭಾರತ ಸಂವಿಧಾನದ 7ನೇ ಅನುಸೂಚಿಯ 3ನೇ ಪಟ್ಟಿಯ 25ನೆಯ ನಮೂದನೆಯಡಿಯಲ್ಲಿ ಬರುತ್ತದೆ.)

## 2006 ರ ಕರ್ನಾಟಕ ಅಧಿನಿಯಮ ಸಂಖ್ಯೆ 08

(2006 ರ ಏಪ್ರಿಲ್ 25ನೇ ದಿನಾಂಕದಂದು ಕರ್ನಾಟಕ ರಾಜ್ಯಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದೆ)

## ಕರ್ನಾಟಕ ವೃತ್ತಿ ಶಿಕ್ಷಣ ಸಂಸ್ಥೆಗಳ (ಪ್ರವೇಶ ನಿಯಂತ್ರಣ ಮತ್ತು ಶುಲ್ಕ ನಿಗದಿ) ಅಧಿನಿಯಮ, 2006

(2006ರ ಏಪ್ರಿಲ್ 24ನೇ ದಿನಾಂಕದಂದು ರಾಜ್ಯಪಾಲರಿಂದ ಅನುಮೋದನೆ ಪಡೆಯಲಾಗಿದೆ)

(2015ರ ತಿದ್ದುಪಡಿ ಅಧಿನಿಯಮ ಸಂಖ್ಯೆ 39ರ ಮತ್ತು 2017ರ ಅಧಿನಿಯಮ ಸಂಖ್ಯೆ 22ರ ಮೂಲಕ ತಿದ್ದುಪಡಿಯಾಗಿರುತ್ತದೆ.)

ಕರ್ನಾಟಕ ರಾಜ್ಯದಲ್ಲಿನ ವೃತ್ತಿ ಶಿಕ್ಷಣ ಸಂಸ್ಥೆಗಳಿಗೆ ಪ್ರವೇಶವನ್ನು ನಿಯಂತ್ರಿಸುವುದಕ್ಕಾಗಿ ಮತ್ತು ಶುಲ್ಕವನ್ನು ನಿಗದಿಪಡಿಸುವುದಕ್ಕಾಗಿ ಉಪಬಂಧಕಲ್ಪಿಸಲು ಮತ್ತು ಅನುಸೂಚಿತ ಜಾತಿ, ಅನುಸೂಚಿತ ಬುಡಕಟ್ಟು ಹಾಗೂ ಇತರ ಹಿಂದುಳಿದ ವರ್ಗಗಳಿಗೆ ಸೇರಿದ ವ್ಯಕ್ತಿಗಳಿಗೆ, ವೃತ್ತಿಶಿಕ್ಷಣ ಸಂಸ್ಥೆಗಳಲ್ಲಿ ಸೀಟುಗಳನ್ನು ಮೀಸಲಿಡುವುದಕ್ಕಾಗಿ ಉಪಬಂಧಕಲ್ಪಿಸಲು ಒಂದು ಅಧಿನಿಯಮ.

(2003) 6 ಎಸ್‌ಸಿಸಿ 697 ರಲ್ಲಿ ವರದಿಯಾಗಿರುವ **ಇಸ್ಲಾಮಿಕ್ ಅಕಾಡೆಮಿ ಆಫ್ ಎಜುಕೇಷನ್ ಮತ್ತು ಇತರರು–ವಿರುದ್ಧ–ಕರ್ನಾಟಕ ರಾಜ್ಯ,** ಈ ಪ್ರಕರಣದಲ್ಲಿ ಸನ್ಮಾನ್ಯ ಸರ್ವೋಚ್ಚ ನ್ಯಾಯಾಲಯವು ನೀಡಿದ ತನ್ನ ತೀರ್ಪಿನಲ್ಲಿ, ವೃತ್ತಿ ಶಿಕ್ಷಣ ವ್ಯಾಸಂಗ ಕ್ರಮಗಳಿಗೆ ಪ್ರವೇಶವನ್ನು, ಸಂಸತ್ತು ಆ ಬಗ್ಗೆ ಸೂಕ್ತ ಕಾನೂನನ್ನು ಅಧಿನಿಯಮವಾಗಿ ತರುವವರೆಗೆ, ವೃತ್ತಿ ಶಿಕ್ಷಣ ಸಂಸ್ಥೆಗಳಿಗೆ ಪ್ರವೇಶಗಳ ಮೇಲ್ವಿಚಾರಣೆ ನಡೆಸಲು ಒಂದು ಸಮಿತಿ ಹಾಗೂ ಶುಲ್ಕ ವ್ಯವಸ್ಥೆಯನ್ನು ಅನುಮೋದಿಸಲು ಇನ್ನೊಂದು ಸಮಿತಿ, ಹೀಗೆ ಎರಡು ಸಮಿತಿಗಳ ಮೂಲಕ ನಿಯಂತ್ರಿಸಲು ಆದೇಶಿಸಿರುವುದರಿಂದ;

(2005) 6 ಎಸ್‌ಸಿಸಿ 537 ರಲ್ಲಿ ವರದಿಯಾದ, ***ಪಿ.ಎ. ಇನಾಂದಾರ್ ಮತ್ತು ಇತರರು–ವಿರುದ್ಧ–ಮಹಾರಾಷ್ಟ್ರ ರಾಜ್ಯ,*** ಈ ಪ್ರಕರಣದಲ್ಲಿ, ಸರ್ವೋಚ್ಚನ್ಯಾಯಾಲಯವು, ರಾಜ್ಯದಲ್ಲಿ ಯಾವುದೇ ಒಂದು ವ್ಯಾಸಂಗ ವಿಷಯದಲ್ಲಿ ಶಿಕ್ಷಣವನ್ನು ಅಲ್ಪಸಂಖ್ಯಾತ ಅಥವಾ ಅಲ್ಪಸಂಖ್ಯಾತವಲ್ಲದ ಸಂಸ್ಥೆಗಳು ಅಥವಾ ಅಂತಹವೇ ಒಂದಕ್ಕಿಂತ ಹೆಚ್ಚು ಸಂಸ್ಥೆಗಳು ನೀಡುತ್ತಿದ್ದಲ್ಲಿ, ಆಗ ಪಾರದರ್ಶಕತೆ ಮತ್ತು ಮೆರಿಟ್, ಈ ಎರಡೂ ಉದ್ದೇಶಗಳನ್ನು ಈಡೇರಿಸಬೇಕಾದರೆ ಒಂದೇ ಸಾಮಾನ್ಯ ಪ್ರವೇಶ ಪರೀಕ್ಷೆ ನಡೆಸಿ ತರುವಾಯ ಕೇಂದ್ರಿಯ ಕೌನ್ಸೆಲಿಂಗ್ ವ್ಯವಸ್ಥೆ ಮಾಡಬೇಕೆಂದು ಅಥವಾ ಇದನ್ನೇ ಬೇರೆ ರೀತಿಯಲ್ಲಿ ಹೇಳುವುದಾದರೆ, ಪ್ರವೇಶಕ್ಕಾಗಿ ಏಕ ಗವಾಕ್ಷಿ ವ್ಯವಸ್ಥೆ ಅಗತ್ಯವಿದೆ ಎಂದು ತೀರ್ಪು ನೀಡಿದೆ. ಆದ್ದರಿಂದ ಒಂದೇ ಸ್ವರೂಪದ ಅಥವಾ ಸಮಾನ ಸ್ವರೂಪದ ಎಲ್ಲ ಸಂಸ್ಥೆಗಳು ಅವು ಅಲ್ಪಸಂಖ್ಯಾತರ ಸಂಸ್ಥೆಯಾಗಿರಲಿ ಅಥವಾ ಅಲ್ಪಸಂಖ್ಯಾತವಲ್ಲದ ಸಂಸ್ಥೆಯಾಗಿರಲಿ ಒಂದೇ ಸಾಮಾನ್ಯ ಪ್ರವೇಶ ಪರೀಕ್ಷೆ ನಡೆಸಿ ತರುವಾಯ ಕೇಂದ್ರಿಯ ಕೌನ್ಸಲಿಂಗ್ ವ್ಯವಸ್ಥೆ ಮೂಲಕ ತಮ್ಮಲ್ಲಿನ ಸೀಟು ಭರ್ತಿ ಮಾಡಿಕೊಳ್ಳಬೇಕಾಗಿರುವುದರಿಂದ;

ಅಲ್ಲದೇ ಸರ್ವೋಚ್ಚ ನ್ಯಾಯಾಲಯವು, ಅದೇ ತೀರ್ಪಿನಲ್ಲಿ ರಾಜ್ಯವು, ಪ್ರವೇಶಗಳು ನ್ಯಾಯಯುತವಾಗಿ ಮತ್ತು ಮೆರಿಟ್ ಆಧಾರದ ಮೇಲೆ ನಡೆಯುವಂತೆ ನೋಡಿಕೊಳ್ಳುವ ಸಲುವಾಗಿ ಹಾಗೂ ದುರಾಡಳಿತ ತಡೆಯುವ ಸಲುವಾಗಿ ಒಂದು ಕೇಂದ್ರೀಯ ಮತ್ತು ಏಕಗವಾಕ್ಷಿ ಕಾರ್ಯವಿಧಾನವನ್ನು ಏರ್ಪಡಿಸಿ ಪ್ರವೇಶವನ್ನು ನಿಯಂತ್ರಿಸಬಹುದೆಂದು, ಖಾಸಗಿ ಶಿಕ್ಷಣ ಸಂಸ್ಥೆಗಳು ಅನುಸರಿಸುವ ಪ್ರವೇಶ ಪ್ರಕ್ರಿಯೆಯು, ನ್ಯಾಯಾಲಯವು ನಿಯಮಿಸಿದ ಮೂರು ಬಗೆಯ ಪರೀಕ್ಷೆಗಳಲ್ಲಿ ಎಲ್ಲ ಅಥವಾ ಯಾವುದೊಂದನ್ನು ಯಶಸ್ವಿಗೊಳಿಸಲು ವಿಫಲವಾದರೆ, ಆಗ ರಾಜ್ಯವು ಪ್ರವೇಶ ಪ್ರಕ್ರಿಯೆಯನ್ನು ತಾನೇ ಕೈಗೆತ್ತಿಕೊಂಡು ತನ್ನದೇ ಆದ ಪ್ರಕ್ರಿಯೆಯನ್ನು ಅಳವಡಿಸಬಹುದೆಂದು ತೀರ್ಮಾನ ನೀಡಿರುವುದರಿಂದ,

ಮತ್ತು, ಸಂವಿಧಾನ (ತೊಂಬತ್ತೊಂರನೇ ತಿದ್ದುಪಡಿ) ಅಧಿನಿಯಮ, 2005 ರಲ್ಲಿ 15(5)ನೇ ಅನುಚ್ಛೇದದ ಅಡಿಯಲ್ಲಿ ಈ ಮುಂದಿನಂತೆ ಒಂದು ಉಪಬಂಧವನ್ನು ಕಲ್ಪಿಸಿರುವುದರಿಂದ, ಎಂದರೆ:–

"(5) ಈ ಅನುಚ್ಛೇದದಲ್ಲಿ ಅಥವಾ 19ನೇ ಅನುಚ್ಛೇದದ (1)ನೇ ಖಂಡದ (ಜಿ) ಉಪಖಂಡದಲ್ಲಿರುವುದಾವುದೂ, ರಾಜ್ಯವು ಯಾವುದೇ ಸಾಮಾಜಿಕವಾಗಿ ಅಥವಾ ಶೈಕ್ಷಣಿಕವಾಗಿ ಹಿಂದುಳಿದ ನಾಗರಿಕ ವರ್ಗಗಳ ಪುರೋಭಿವೃದ್ಧಿಗಾಗಿ ಅಥವಾ ಅನುಸೂಚಿತ ಜಾತಿಗಳು ಅಥವಾ ಅನುಸೂಚಿತ ಬುಡಕಟ್ಟುಗಳಿಗಾಗಿ ವಿಶೇಷ ಉಪಬಂಧಗಳನ್ನು ರಚಿಸುವುದನ್ನು, ಅಂಥ ವಿಶೇಷ ಉಪಬಂಧಗಳು, 30ನೇ ಅನುಚ್ಛೇದದ (1)ನೇ ಖಂಡದಲ್ಲಿ ಉಲ್ಲೇಖಿಸಲಾದ ಅಲ್ಪಸಂಖ್ಯಾತ ಶಿಕ್ಷಣ ಸಂಸ್ಥೆಗಳಲ್ಲದ ರಾಜ್ಯದಿಂದ

ಅನುದಾನ ಪಡೆಯುವ ಅಥವಾ ಅನುದಾನ ಪಡೆಯದ, ಖಾಸಗಿ ಶಿಕ್ಷಣ ಸಂಸ್ಥೆಗಳೂ ಸೇರಿದಂತೆ ಶಿಕ್ಷಣ ಸಂಸ್ಥೆಗಳಿಗೆ ಅವರಿಗೆ ಪ್ರವೇಶ ನೀಡುವುದಕ್ಕೆ ಸಂಬಂಧಪಡುವಷ್ಟರ ಮಟ್ಟಿಗೆ ತಡೆಯತಕ್ಕದ್ದಲ್ಲ."

ಮೇಲ್ಕಂಡ ಉದ್ದೇಶವನ್ನು ಈಡೇರಿಸುವುದಕ್ಕಾಗಿ ಮತ್ತು ಇದರಲ್ಲಿ ಇನ್ನು ಮುಂದೆ ಕಂಡುಬರುವ ಉದ್ದೇಶಗಳಿಗಾಗಿ ಈ ಮುಂದಿನವುಗಳಿಗಾಗಿ ಉಪಬಂಧ ಕಲ್ಪಿಸುವುದು ಅವಶ್ಯವೆಂದು ಮತ್ತು ಯುಕ್ತವೆಂದು ಪರಿಗಣಿಸಲಾಗಿದೆ.

ಇದು ಭಾರತ ಗಣರಾಜ್ಯದ ಐವತ್ತೇಳನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನ ಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ, ಎಂದರೆ:-

**1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ.-** (1) ಈ ಅಧಿನಿಯಮವನ್ನು ಕರ್ನಾಟಕ ವೃತ್ತಿ ಶಿಕ್ಷಣ ಸಂಸ್ಥೆಗಳ (ಪ್ರವೇಶ ನಿಯಂತ್ರಣ ಮತ್ತು ಶುಲ್ಕ ನಿಗದಿ) ಅಧಿನಿಯಮ, 2006 ಎಂದು ಕರೆಯತಕ್ಕದ್ದು.

(2) ಇದು ರಾಜ್ಯ ಸರ್ಕಾರವು ಗೊತ್ತುಪಡಿಸಬಹುದಾದಂಥ ದಿನಾಂಕದಂದು ಜಾರಿಗೆ ಬರತಕ್ಕದ್ದು.

**1. ಈ ಅಧಿನಿಯಮವು ಅಧಿಸೂಚನೆ ಸಂಖ್ಯೆ: ಇಡಿ 26 ಟಿಇಸಿ 2006(ಭಾಗ-2), ಬೆಂಗಳೂರು, ದಿನಾಂಕ:25.04.2006ರ ಮೂಲಕ ದಿನಾಂಕ: 25.04.2006 ರಿಂದ ಜಾರಿಗೆ ಬಂದಿದೆ. (ಈ ಅಧಿಸೂಚನೆಯನ್ನು ಅಧಿನಿಯಮದ ಕೊನೆಯಲ್ಲಿ ನೋಡಬಹುದು)**

**2. ಈ ಅಧಿನಿಯಮವನ್ನು 2006-07ರಿಂದ 2013-14 ರ ವರೆಗೆ ತಡೆಹಿಡಿಯಲಾಗಿತ್ತು ಮತ್ತು ಅಧಿಸೂಚನೆ ಸಂಖ್ಯೆ: ಇಡಿ 162 ಟಿಇಸಿ 2013 ದಿನಾಂಕ: 18.11.2013ರಲ್ಲಿ ಜಾರಿಗೆ ತರಲಾಯಿತು. (ಅಧಿನಿಯಮದ ಕೊನೆಯಲ್ಲಿ ಅಧಿಸೂಚನೆಯ ಪತ್ರವನ್ನು ನೋಡುವುದು).**

**2. ಪರಿಭಾಷೆಗಳು.-** (1) ಈ ಅಧಿನಿಯಮದಲ್ಲಿ ಸಂದರ್ಭವು ಅನ್ಯಥಾ ಅಗತ್ಯಪಡಿಸಿದ ಹೊರತು,-

[1][(ಎ) "ಪ್ರವೇಶ" ಎಂದರೆ, ಪ್ರತಿಭೆಯನ್ನು ಆಧರಿಸಿದ ಸಾಮಾನ್ಯ ಪ್ರವೇಶ ಪರೀಕ್ಷೆಯ ಮೂಲಕ ಪ್ರವೇಶ ಕೇಂದ್ರದಲ್ಲಿ ವೃತ್ತಿ ಶಿಕ್ಷಣ ವ್ಯಾಸಂಗಕ್ರಮಗಳಿಗೆ ಮಾಡಲಾದ ಪ್ರವೇಶ;][1]

1. 2015ರ ಅಧಿನಿಯಮ ಸಂಖ್ಯೆ 39ರ ಮೂಲಕ ದಿನಾಂಕ: 11.09.2015ರಿಂದ ಪ್ರತಿಯೋಜಿಸಲಾಗಿದೆ.

(ಬಿ) "ಪ್ರವೇಶ ಕೇಂದ್ರ" ಎಂದರೆ, ಸಾಮಾನ್ಯ ಪ್ರವೇಶ ಪರೀಕ್ಷೆಯ ಮೂಲಕ ವೃತ್ತಿ ಶಿಕ್ಷಣ ಸಂಸ್ಥೆಗಳಲ್ಲಿ ವಿವಿಧ ವ್ಯಾಸಂಗ ಕ್ರಮಗಳಿಗೆ ವಿದ್ಯಾರ್ಥಿಗಳ ಆಯ್ಕೆ ಮಾಡುವ ಮತ್ತು ಅವರಿಗೆ ಸೀಟು ಹಂಚಿಕೆ ಮಾಡುವ ಕೇಂದ್ರ;

(ಸಿ) "ಪ್ರವೇಶ ಮೇಲ್ವಿಚಾರಣಾ ಸಮಿತಿ" ಎಂದರೆ, ರಾಜ್ಯ ಸರ್ಕಾರವು, [1][ಅನುದಾನಿತ ಅಥವಾ ಅನುದಾನಿತವಲ್ಲದ][1] ಖಾಸಗಿ ವೃತ್ತಿ ಶಿಕ್ಷಣ ಸಂಸ್ಥೆಗಳಲ್ಲಿ ಪ್ರವೇಶವನ್ನು ನಿಯಂತ್ರಿಸುವುದಕ್ಕಾಗಿ 5ನೇ ಪ್ರಕರಣದ ಅಡಿಯಲ್ಲಿ ರಚಿಸಿದ ಸಮಿತಿ;

1. 2015ರ ಅಧಿನಿಯಮ ಸಂಖ್ಯೆ 39ರ ಮೂಲಕ ದಿನಾಂಕ: 11.09.2015ರಿಂದ ಪ್ರತಿಯೋಜಿಸಲಾಗಿದೆ.

(ಡಿ) "ಅನುದಾನಿತ ಸಂಸ್ಥೆ" ಎಂದರೆ, ರಾಜ್ಯ ಸರ್ಕಾರದಿಂದ ಆರ್ಥಿಕ ಅನುದಾನವನ್ನು ಅಥವಾ ಸಹಾಯಾನುದಾನವನ್ನು ಸ್ವೀಕರಿಸುತ್ತಿರುವ ಒಂದು ಖಾಸಗಿ ವೃತ್ತಿಶಿಕ್ಷಣ ಸಂಸ್ಥೆ ಮತ್ತು ಇದರಲ್ಲಿ ಅಂಥ ಆರ್ಥಿಕ ನೆರವನ್ನು ಅಥವಾ ಅನುದಾನವನ್ನು ಸ್ವೀಕರಿಸುತ್ತಿರುವ ಅಲ್ಪಸಂಖ್ಯಾತ ಮತ್ತು ಅಲ್ಪಸಂಖ್ಯಾತವಲ್ಲದ ಶಿಕ್ಷಣ ಸಂಸ್ಥೆಗಳೂ ಒಳಗೊಳ್ಳುತ್ತವೆ;

(ಇ) "ಸಾಮಾನ್ಯ ಪ್ರವೇಶ ಪರೀಕ್ಷೆ" ಎಂದರೆ, ಏಕಗವಾಕ್ಷಿ ಪ್ರಕ್ರಿಯೆಯ ಮೂಲಕ ವೃತ್ತಿ ಶಿಕ್ಷಣ ವ್ಯಾಸಂಗ ಕ್ರಮಗಳಿಗೆ ಪ್ರವೇಶ ನೀಡುವ ಉದ್ದೇಶಕ್ಕಾಗಿ ಅಭ್ಯರ್ಥಿಗಳ ಮೆರಿಟ್ ಅನ್ನು ನಿರ್ಧರಿಸುವುದಕ್ಕಾಗಿ ನಡೆಸಲಾಗುವ ಪರೀಕ್ಷೆ ಮತ್ತು ತರುವಾಯದ ಕೇಂದ್ರೀಯ ಕೌನ್ಸೆಲಿಂಗ್ ವ್ಯವಸ್ಥೆ;

[1][(ಎಫ್)" ಸಾಮಾನ್ಯ ಪ್ರವೇಶ ಪರೀಕ್ಷಾ ಘಟಕ ಅಥವಾ ಸಮಿತಿ" ಎಂದರೆ, ಸಾಮಾನ್ಯ ಪ್ರವೇಶ ಪರೀಕ್ಷೆಯನ್ನು ನಡೆಸುವ, 3ನೇ ಪ್ರಕರಣದ ಅಡಿಯಲ್ಲಿ ರಚಿತವಾದ ರಾಜ್ಯ ಸರ್ಕಾರದ ಏಜೆನ್ಸಿ.][1]

1. 2015ರ ಅಧಿನಿಯಮ ಸಂಖ್ಯೆ 39ರ ಮೂಲಕ ದಿನಾಂಕ: 11.09.2015ರಿಂದ ಪ್ರತಿಯೋಜಿಸಲಾಗಿದೆ.

[1][ಪರಂತು, ಯಾವುದೇ ಕೋರ್ಸಿಗೆ ಭಾರತ ಸರ್ಕಾರ ಅಥವಾ ಅದರ ಏಜೆನ್ಸಿಯು ಸಾಮಾನ್ಯ ಪ್ರವೇಶ ಪರೀಕ್ಷೆಯನ್ನು ನಡೆಸುವ ಸಂದರ್ಭದಲ್ಲಿ ಅಂಥ ಕೋರ್ಸಿಗೆ ಪ್ರವೇಶವನ್ನು ಕಲ್ಪಿಸುವುದಕ್ಕಾಗಿ ಅಂಥ ಪರೀಕ್ಷೆಯಲ್ಲಿ ನಿರ್ಧರಿಸಲಾದ ಮೆರಿಟ್ ಅನ್ನು ಪರಿಗಣಿಸತಕ್ಕದ್ದು.][1]

1. 2017ರ ಅಧಿನಿಯಮ ಸಂಖ್ಯೆ 22ರ ಮೂಲಕ ದಿನಾಂಕ: 20.04.2017ರಿಂದ ಸೇರಿಸಲಾಗಿದೆ.

[1][(ಎಫ್‌ಎಫ್) "ಡೀಮ್ಡ್ ವಿಶ್ವವಿದ್ಯಾಲಯ ಸಂಸ್ಥೆಗಳು" ಎಂದರೆ, ಕರ್ನಾಟಕ ರಾಜ್ಯದಲ್ಲಿ ಇರುವ ಡೀಮ್ಡ್ ವಿಶ್ವವಿದ್ಯಾಲಯಗಳು ಸ್ಥಾಪಿಸಿ ನಿರ್ವಹಿಸುತ್ತಿರುವ ವೃತ್ತಿ ಶಿಕ್ಷಣ ವ್ಯಾಸಂಗ ಕ್ರಮಗಳ ಸಂಸ್ಥೆಗಳು.][1]

1. 2015ರ ಅಧಿನಿಯಮ ಸಂಖ್ಯೆ 39ರ ಮೂಲಕ ದಿನಾಂಕ: 11.09.2015ರಿಂದ ಸೇರಿಸಲಾಗಿದೆ.

(ಜಿ) "ಶುಲ್ಕ ನಿಯಂತ್ರಣ ಸಮಿತಿ" ಎಂದರೆ, ಅನುದಾನಿತವಲ್ಲದ ಖಾಸಗಿ ವೃತ್ತಿ ಶಿಕ್ಷಣ ಸಂಸ್ಥೆಗಳಿಗೆ ಪ್ರವೇಶಕ್ಕಾಗಿ ಶುಲ್ಕವನ್ನು ನಿಗದಿಪಡಿಸಲು ಮತ್ತು ನಿಯಂತ್ರಿಸಲು 6ನೇ ಪ್ರಕರಣದ ಅಡಿಯಲ್ಲಿ ರಚಿತವಾದ ಒಂದು ಸಮಿತಿ;

(ಎಚ್) "ಸರ್ಕಾರ" ಎಂದರೆ, ರಾಜ್ಯ ಸರ್ಕಾರ;

[1][(ಐ) "ಸರ್ಕಾರಿ ಸೀಟುಗಳು" ಎಂದರೆ, ಸರ್ಕಾರಿ ಕಾಲೇಜುಗಳಲ್ಲಿ, ವಿಶ್ವವಿದ್ಯಾಲಯ ಘಟಕ ಕಾಲೇಜುಗಳಲ್ಲಿ ಇರುವ ಎಲ್ಲಾ ಸೀಟುಗಳು, ರಾಜ್ಯ ಸರ್ಕಾರವು ಅಧಿಸೂಚಿಸಬಹುದಾದಂಥ ಖಾಸಗಿ ಅನುದಾನಿತ ವೃತ್ತಿ ಶಿಕ್ಷಣ ಸಂಸ್ಥೆಗಳಲ್ಲಿನ ಅಂಥ ಸಂಖ್ಯೆಯ ಸೀಟುಗಳು, ಮತ್ತು ಅನುದಾನಿತವಲ್ಲದ ಅಲ್ಪಸಂಖ್ಯಾತ ಮತ್ತು ಅಲ್ಪಸಂಖ್ಯಾತೇತರ ವೃತ್ತಿ ಶಿಕ್ಷಣ ಸಂಸ್ಥೆಗಳಲ್ಲಿನ ಅಂಥ ಸಂಖ್ಯೆಯ ಸೀಟುಗಳು ಮತ್ತು ಖಾಸಗಿ ವೃತ್ತಿ ಶಿಕ್ಷಣ ಸಂಸ್ಥೆಗಳು, ಖಾಸಗಿ ವಿಶ್ವವಿದ್ಯಾಲಯಗಳು, ಡೀಮ್ಡ್ ವಿಶ್ವವಿದ್ಯಾಲಯಗಳು ಹಾಗೂ ರಾಜ್ಯ ಸರ್ಕಾರದ ನಡುವೆ ಮೂಡಿಬಂದ ಸಮ್ಮತಾಭಿಪ್ರಾಯಕ್ಕೆ ಅನುಸಾರವಾಗಿ ರಾಜ್ಯ ಸರ್ಕಾರವು ಅಧಿಸೂಚಿಸಬಹುದಾದಂಥ ಖಾಸಗಿ ವಿಶ್ವವಿದ್ಯಾಲಯಗಳು ಮತ್ತು ಡೀಮ್ಡ್ ವಿಶ್ವವಿದ್ಯಾಲಯಗಳಲ್ಲಿನ ಸೀಟುಗಳು;][1]

1. 2015ರ ಅಧಿನಿಯಮ ಸಂಖ್ಯೆ 39ರ ಮೂಲಕ ದಿನಾಂಕ: 11.09.2015ರಿಂದ ಪ್ರತಿಯೋಜಿಸಲಾಗಿದೆ.

(ಜೆ) "ಸಾಮಾನ್ಯ ಪ್ರವರ್ಗದ ಸೀಟುಗಳು" ಎಂದರೆ, ಮೀಸಲು ಸೀಟುಗಳನ್ನು ಬಿಟ್ಟು ಉಳಿದ ಸೀಟುಗಳು;

[1][(ಜೆಜೆ) "ಸಂಸ್ಥೆಯ ಸೀಟುಗಳು" ಎಂದರೆ, [2][XXX][2] ಸಾಮಾನ್ಯ ಪ್ರವೇಶ ಪರೀಕ್ಷೆಯ ಮೂಲಕ ಖಾಸಗಿ ಅನುದಾನಿತವಲ್ಲದ ವೃತ್ತಿ ಶಿಕ್ಷಣ ಸಂಸ್ಥೆಗಳು ತುಂಬುವ, ಸರ್ಕಾರಿ ಸೀಟುಗಳನ್ನು ಹೊರತುಪಡಿಸಿದ, ಸೀಟುಗಳು.][1]

[3][ಪರಂತು, ಭಾರತ ಸರ್ಕಾರ ಅಥವಾ ಅದರ ಏಜೆನ್ಸಿಯು ಅಂಥ ಸಾಮಾನ್ಯ ಪ್ರವೇಶ ಪರೀಕ್ಷೆಯನ್ನು ನಡೆಸುವ ಸಂದರ್ಭದಲ್ಲಿ ನಿಯಮಿಸಬಹುದಾದ ಅಂಥ ಏಜೆನ್ಸಿಯು ಮತ್ತು ಅಂಥ ವಿಧಾನದಲ್ಲಿ ಕೇಂದ್ರಿಕೃತ ಕೌನ್ಸಿಲಿಂಗ್ ಅನ್ನು ನಡೆಸತಕ್ಕದ್ದು.][3]

1. 2015ರ ಅಧಿನಿಯಮ ಸಂಖ್ಯೆ 39ರ ಮೂಲಕ ದಿನಾಂಕ: 11.09.2015ರಿಂದ ಸೇರಿಸಲಾಗಿದೆ.
2. 2017ರ ಅಧಿನಿಯಮ ಸಂಖ್ಯೆ 22ರ ಮೂಲಕ ದಿನಾಂಕ 20.04.2017ರಿಂದ ಬಿಟ್ಟುಬಿಡಲಾಗಿದೆ.
3. 2017ರ ಅಧಿನಿಯಮ ಸಂಖ್ಯೆ 22ರ ಮೂಲಕ ದಿನಾಂಖ 20.04.2017ರಿಂದ ಸೇರಿಸಲಾಗಿದೆ.

(ಕೆ) "ಮಂಜೂರಾದ ಸೀಟುಗಳು" ಎಂದರೆ, ಒಂದು ವೃತ್ತಿ ಶಿಕ್ಷಣ ಸಂಸ್ಥೆಯಲ್ಲಿ ಪ್ರತಿಯೊಂದು ವ್ಯಾಸಂಗ ಕ್ರಮಕ್ಕೆ, ವಿದ್ಯಾರ್ಥಿಗಳ ಪ್ರವೇಶಕ್ಕಾಗಿ ಸಕ್ಷಮ ಪ್ರಾಧಿಕಾರವು ಮಂಜೂರ್ಮಾಡಿದ ಒಟ್ಟು ಸೀಟುಗಳು ಎಂದು ಅರ್ಥ.

[1][(ಕೆಕೆ) "ಕರ್ನಾಟಕದ ವಿದ್ಯಾರ್ಥಿ" ಎಂದರೆ, ಸರ್ಕಾರವು ನಡೆಸುವ ಅಥವಾ ಮಾನ್ಯತೆ ನೀಡಿರುವ ಕರ್ನಾಟಕ ರಾಜ್ಯದಲ್ಲಿನ ಅಂಥ ಶೈಕ್ಷಣಿಕ ಸಂಸ್ಥೆಗಳಲ್ಲಿ ಮತ್ತು ನಿಯಮಿಸಬಹುದಾದಷ್ಟು ವರ್ಷಗಳು ವ್ಯಾಸಂಗ ಮಾಡಿರುವ ವ್ಯಕ್ತಿಗಳು.][1]

1. 2015ರ ಅಧಿನಿಯಮ ಸಂಖ್ಯೆ 39ರ ಮೂಲಕ ದಿನಾಂಕ: 11.09.2015ರಿಂದ ಸೇರಿಸಲಾಗಿದೆ.

(ಎಲ್) "ಅಲ್ಪಸಂಖ್ಯಾತ" ಎಂದರೆ, ರಾಜ್ಯ ಸರ್ಕಾರವು ಅಧಿಸೂಚಿಸಬಹುದಾದ, ಧಾರ್ಮಿಕ ಮತ್ತು ಭಾಷಾ ಅಲ್ಪಸಂಖ್ಯಾತರು ಎಂದರ್ಥ ಮತ್ತು ಅದು ಅವರುಗಳನ್ನು ಒಳಗೊಳ್ಳುತ್ತದೆ;

(ಎಮ್) "ಅಲ್ಪಸಂಖ್ಯಾತ ಶಿಕ್ಷಣ ಸಂಸ್ಥೆ" ಎಂದರೆ, ನಿಯಮಿಸಬಹುದಾದಂಥ ಷರತ್ತುಗಳಿಗೊಳಪಟ್ಟು, ರಾಜ್ಯ ಸರ್ಕಾರವು ಹಾಗೆಂದು ಮಾನ್ಯತೆ ನೀಡಿದ ಅಥವಾ ಅಧಿಸೂಚಿಸಿದ ಶಿಕ್ಷಣ ಸಂಸ್ಥೆಗಳು;

(ಎನ್) "ಅನಿವಾಸಿ-ಭಾರತೀಯ" ಎಂದರೆ, ಭಾರತೀಯ ಮೂಲದ ತಂದೆ ಅಥವಾ ತಾಯಿಗೆ ಜನಿಸಿದ ಮತ್ತು ದೇಶದ ಹೊರಗೆ ವಾಸಿಸುತ್ತಿರುವ ಮತ್ತು ಸಮಾನ ಅರ್ಹತಾ ಪರೀಕ್ಷೆಯಲ್ಲಿ ಭಾರತದ ಹೊರಗೆ ಉತ್ತೀರ್ಣನಾದ ಒಬ್ಬ ವಿದ್ಯಾರ್ಥಿ; [1][ಮತ್ತು ಇದು ಭಾರತೀಯ ಮೂಲದ ವ್ಯಕ್ತಿಗಳು ಮತ್ತು ಭಾರತದ ಸಾಗರೋತ್ತರ ನಾಗರಿಕರು ಇವರನ್ನು ಒಳಗೊಳ್ಳುತ್ತದೆ.][1]

1. 2017ರ ಅಧಿನಿಯಮ ಸಂಖ್ಯೆ 22ರ ಮೂಲಕ ದಿನಾಂಕ: 20.04.2017ರಿಂದ ಸೇರಿಸಲಾಗಿದೆ.

(ಓ) "ಇತರ ಹಿಂದುಳಿದ ವರ್ಗಗಳು" ಎಂದರೆ, ರಾಜ್ಯಸರ್ಕಾರವು ಅಧಿಸೂಚಿಸಬಹುದಾದ ಸಾಮಾಜಿಕವಾಗಿ ಮತ್ತು ಶೈಕ್ಷಣಿಕವಾಗಿ ಹಿಂದುಳಿದ ನಾಗರಿಕ ವರ್ಗ ಅಥವಾ ವರ್ಗಗಳು;

(ಪಿ) "ವೃತ್ತಿ ಶಿಕ್ಷಣ ವ್ಯಾಸಂಗಕ್ರಮಗಳು" ಎಂದರೆ,-

(I) ವೈದ್ಯಕೀಯ ಮತ್ತು ದಂತ ವೈದ್ಯ ಶಿಕ್ಷಣ ಸಂಸ್ಥೆಗಳಲ್ಲಿ

(i) ಬ್ಯಾಚುಲರ್ ಆಫ್ ಮೆಡಿಸಿನ್ ಮತ್ತು ಬ್ಯಾಚುಲರ್ ಆಫ್ ಸರ್ಜರಿಯ ಮತ್ತು

(ii) ಬ್ಯಾಚುಲರ್ ಆಫ್ ಡೆಂಟಲ್ ಸರ್ಜರಿಯ

- ಪ್ರಥಮ ವರ್ಷ

(II) ಭಾರತೀಯ ವೈದ್ಯಪದ್ಧತಿ ಮತ್ತು ಹೋಮಿಯೋಪತಿ ಶಿಕ್ಷಣ ಸಂಸ್ಥೆಗಳಲ್ಲಿ,-

(i) ಬ್ಯಾಚುಲರ್ ಆಫ್ ಆಯುರ್ವೇದಿಕ್ ಮೆಡಿಸಿನ್ ಮತ್ತು ಸರ್ಜರಿ

(ii) ಬ್ಯಾಚುಲರ್ ಆಫ್ ಯುನಾನಿ ಮೆಡಿಸಿನ್ ಮತ್ತು ಸರ್ಜರಿ

(iii) ಬ್ಯಾಚುಲರ್ ಆಫ್ ನ್ಯಾಚುರೋಪತಿ ಮತ್ತು ಯೋಗ ಮತ್ತು

(iv) ಬ್ಯಾಚುಲರ್ ಆಫ್ ಹೋಮಿಯೋಪತಿ ಮೆಡಿಸಿನ್ ಮತ್ತು ಸರ್ಜರಿಯ

- ಪ್ರಥಮ ವರ್ಷ.

(III) ಇಂಜಿನಿಯರ್ ಸಂಸ್ಥೆಗಳಲ್ಲಿ,

(i) ಬ್ಯಾಚುಲರ್ ಆಫ್ ಇಂಜಿನಿಯರಿಂಗ್;

(ii) ಬ್ಯಾಚುಲರ್ ಆಫ್ ಟೆಕ್ನಾಲಜಿ ಮತ್ತು

(iii) ಬ್ಯಾಚುಲರ್ ಆಫ್ ಆರ್ಕಿಟೆಕ್ಚರ್‌ನಲ್ಲಿ,

- ಪೂರ್ಣಕಾಲಿಕ ಮತ್ತು ಅರೆಕಾಲಿಕ ವ್ಯಾಸಂಗ ಕ್ರಮಗಳೆರಡರಲ್ಲೂ, ಪ್ರಥಮ ವರ್ಷ- ಪ್ರಥಮ ಸೆಮಿಸ್ಟರ್ ಮತ್ತು ಡಿಪ್ಲೊಮಾದಾರರ ಸಂಬಂಧದಲ್ಲಿ ಎರಡನೇ ವರ್ಷ- ಮೂರನೇ ಸೆಮಿಸ್ಟರ್ (ಆರ್ಕಿಟೆಕ್ಚರ್ ವ್ಯಾಸಂಗ ಕ್ರಮದ ಸಂಬಂಧದಲ್ಲಿ ಪ್ರಥಮ ವರ್ಷ, ಪ್ರಥಮ ಸೆಮಿಸ್ಟರ್);

ಮತ್ತು ಇದರಲ್ಲಿ ಪದವಿ ಮತ್ತು ಸ್ನಾತಕೋತ್ತರ ಹಂತಗಳಲ್ಲಿ ಯಾವುದೇ ಇತರ ವೃತ್ತಿ ಶಿಕ್ಷಣ ವ್ಯಾಸಂಗ ಕ್ರಮಗಳು ಮತ್ತು ಈ ಸಂಬಂಧದಲ್ಲಿ ರಾಜ್ಯ ಸರ್ಕಾರವು ಅಧಿಸೂಚಿಸಬಹುದಾದ, ಬಹುವಿಶಿಷ್ಟ ಜ್ಞಾನ ವ್ಯಾಸಂಗ ಕ್ರಮಗಳು ಒಳಗೊಳ್ಳುತ್ತವೆ.

(ಕ್ಯೂ) "ವೃತ್ತಿ ಶಿಕ್ಷಣ ಸಂಸ್ಥೆ" ಎಂದರೆ, ಸಕ್ಷಮ ಶಾಸನಬದ್ಧ ನಿಕಾಯವು ಅನುಮೋದಿಸಿದ ಅಥವಾ ಮಾನ್ಯತೆ ನೀಡಿದ ಪದವಿಯನ್ನು, ಡಿಪ್ಲೋಮಾವನ್ನು ಅಥವಾ ಯಾವುದೇ ಹೆಸರಿನಿಂದ ಕರೆಯಲಾಗುವ ಒಂದು ಪ್ರಮಾಣ ಪತ್ರವನ್ನು ಪಡೆಯಲು ಅವಕಾಶಮಾಡಿಕೊಡುವಂಥ ವೃತ್ತಿ ಶಿಕ್ಷಣವನ್ನು ನೀಡುತ್ತಿರುವ ಅಥವಾ ವೃತ್ತಿ ಶಿಕ್ಷಣ ವ್ಯಾಸಂಗಕ್ರಮಗಳನ್ನು ನಡೆಸುತ್ತಿರುವ ಮತ್ತು [1][ಒಂದು ವಿಶ್ವವಿದ್ಯಾಲಯಕ್ಕೆ ಸಂಯೋಜಿತವಾದ ಹಾಗೂ ರಾಜ್ಯದ ಖಾಸಗಿ ವಿಶ್ವವಿದ್ಯಾಲಯಗಳನ್ನು ಒಳಗೊಂಡಂತೆ][1] ಯಾವುದೇ ಹೆಸರನ್ನುಳ್ಳ ಒಂದು ಕಾಲೇಜು ಅಥವಾ ಶಾಲೆ ಅಥವಾ ಒಂದು ಸಂಸ್ಥೆ;

1. 2017ರ ಅಧಿನಿಯಮ ಸಂಖ್ಯೆ 22ರ ಮೂಲಕ ದಿನಾಂಕ: 20.04.2017ರಿಂದ ಪ್ರತಿಯೋಜಿಸಲಾಗಿದೆ.

(ಆರ್) "ಅರ್ಹತಾ ಪರೀಕ್ಷೆ" ಎಂದರೆ, ನಿಯಮಿಸಬಹುದಾದಂಥ ಒಂದು ಪರೀಕ್ಷೆ;

[1][(ಎಸ್) "ಮೀಸಲಿಟ್ಟ ಸೀಟುಗಳು" ಎಂದರೆ, ಸರ್ಕಾರಿ ಕಾಲೇಜುಗಳಲ್ಲಿ, ವಿಶ್ವವಿದ್ಯಾನಿಲಯಗಳ ಘಟಕ ಕಾಲೇಜುಗಳಲ್ಲಿ, ಖಾಸಗಿ ಅನುದಾನಿತ ಮತ್ತು ಅನುದಾನಿತವಲ್ಲದ ವೃತ್ತಿ ಶಿಕ್ಷಣ ಸಂಸ್ಥೆಗಳಲ್ಲಿ, ಖಾಸಗಿ ವಿಶ್ವವಿದ್ಯಾಯಲಗಳಲ್ಲಿ, ರಾಜ್ಯ ಸರ್ಕಾರವು ಅಧಿಸೂಚಿಸಬಹುದಾದಂತೆ ಅನುಸೂಚಿತ ಜಾತಿಗಳು, ಅನುಸೂಚಿತ ಬುಡಕಟ್ಟುಗಳು ಮತ್ತು ಇತರ ಹಿಂದುಳಿದ ವರ್ಗಗಳಿಗೆ ಸೇರಿದ ವ್ಯಕ್ತಿಗಳಿಗಾಗಿ ಅಥವಾ ಕರ್ನಾಟಕ ವಿದ್ಯಾರ್ಥಿಗಳಿಗಾಗಿ ಮೀಸಲಿಟ್ಟ ಸೀಟುಗಳು;][1]

1.2017ರ ಅಧಿನಿಯಮ ಸಂಖ್ಯೆ 22ರ ಮೂಲಕ ದಿನಾಂಕ: 20.04.2017ರಿಂದ ಪ್ರತಿಯೋಜಿಸಲಾಗಿದೆ.

(ಟಿ) "ರಾಜ್ಯ ಸಾಮಾನ್ಯ ಪ್ರವೇಶ ಪರೀಕ್ಷಾ ಸಮಿತಿ" ಎಂದರೆ, 3ನೇ ಪ್ರಕರಣದ ಅಡಿಯಲ್ಲಿ ರಚಿತವಾದ, ಸಾಮಾನ್ಯ ಪ್ರವೇಶ ಪರೀಕ್ಷೆಯನ್ನು ನಡೆಸುವ ಮತ್ತು ವೃತ್ತಿ ಶಿಕ್ಷಣ ಕಾಲೇಜುಗಳಲ್ಲಿ ಸರ್ಕಾರಿ ಸೀಟುಗಳಿಗೆ ಪ್ರವೇಶ ನೀಡುವ ಸಮಿತಿ; ಮತ್ತು

(ಯು) "ಅನುದಾನಿತವಲ್ಲದ ಸಂಸ್ಥೆ" ಎಂದರೆ, ರಾಜ್ಯ ಸರ್ಕಾರದಿಂದ ಯಾವುದೇ ಅನುದಾನವನ್ನು ಅಥವಾ ಸಹಾಯಾನುದಾನವನ್ನು ಸ್ವೀಕರಿಸದ ಯಾವುದೇ ಖಾಸಗಿ ಆಡಳಿತವುಳ್ಳ ವೃತ್ತಿಶಿಕ್ಷಣ ಸಂಸ್ಥೆ.

(2) ಇದರಲ್ಲಿ ಬಳಸಲಾದ ಆದರೆ ಪರಿಭಾಷಿಸದಿರುವ ಪದಗಳು ಮತ್ತು ಪದಾವಳಿಗಳು ಕರ್ನಾಟಕ ಶಿಕ್ಷಣ ಸಂಸ್ಥೆಗಳು (ಕ್ಯಾಪಿಟೇಷನ್ ಶುಲ್ಕ ನಿಷೇಧ) ಅಧಿನಿಯಮ, 1984 ರಲ್ಲಿ (1984ರ ಕರ್ನಾಟಕ ಅಧಿನಿಯಮ 37) ಮತ್ತು ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನಲ್ಲಿ ಅವುಗಳಿಗೆ ಕೊಡಲಾದ ಅರ್ಥವನ್ನೇ ಹೊಂದಿರತಕ್ಕದ್ದು.

**3. ರಾಜ್ಯ ಸಾಮಾನ್ಯ ಪ್ರವೇಶ ಪರೀಕ್ಷಾ ಸಮಿತಿ.–** (1) ಈ ಮುಂದಿನವರನ್ನೊಳಗೊಂಡ ಒಂದು ರಾಜ್ಯ ಸಾಮಾನ್ಯ ಪ್ರವೇಶ ಪರೀಕ್ಷಾ ಸಮಿತಿ ಇರತಕ್ಕದ್ದು.

| | | |
|---|---|---|
| [1][(ಎ) | ಸರ್ಕಾರದ ಪ್ರಧಾನ ಕಾರ್ಯದರ್ಶಿ, ಉನ್ನತ ಶಿಕ್ಷಣ ಇಲಾಖೆ | ಅಧ್ಯಕ್ಷರು |
| (ಎ1) | ಸರ್ಕಾರದ ಕಾರ್ಯದರ್ಶಿ, ವೈದ್ಯಕೀಯ ಶಿಕ್ಷಣ ಇಲಾಖೆ | ಸಹ ಅಧ್ಯಕ್ಷರು |
| (ಎ2) | ರಾಜ್ಯ ಸರ್ಕಾರವು ನಾಮ ನಿರ್ದೇಶಿಸಿದ, ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ ಅಥವಾ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ ಇವೆರಡರಲ್ಲಿ ಒಂದರ ಕುಲಪತಿ | ಸದಸ್ಯರು][1] |
| (ಬಿ) | ವೈದ್ಯಕೀಯ ಶಿಕ್ಷಣದ ನಿರ್ದೇಶಕರು | ಸದಸ್ಯರು |
| (ಸಿ) | ತಾಂತ್ರಿಕ ಶಿಕ್ಷಣದ ನಿರ್ದೇಶಕರು | ಸದಸ್ಯರು |
| (ಡಿ) | ಭಾರತೀಯ ವೈದ್ಯ ಪದ್ಧತಿ ಮತ್ತು ಹೋಮಿಯೋಪತಿ ನಿರ್ದೇಶಕರು | ಸದಸ್ಯರು |
| (ಇ) | ಅನುದಾನಿತ ಅಥವಾ ಅನುದಾನಿತವಲ್ಲದ ಕಾಲೇಜುಗಳ ಪ್ರಾಂಶುಪಾಲರ ಪೈಕಿಯಿಂದ [1][ರಾಜ್ಯ ಸರ್ಕಾರವು][1] ನಾಮನಿರ್ದೇಶಿಸುವ ಮೂವರು ವ್ಯಕ್ತಿಗಳು | ಸದಸ್ಯರು |

| | | |
|---|---|---|
| | (i) ವೈದ್ಯಕೀಯ ಕಾಲೇಜುಗಳಿಂದ ಒಬ್ಬರು.<br>(ii) ದಂತ ವೈದ್ಯಕೀಯ ಕಾಲೇಜುಗಳಿಂದ ಒಬ್ಬರು<br>(iii) ಇಂಜಿನಿಯರಿಂಗ್ ಕಾಲೇಜುಗಳಿಂದ ಒಬ್ಬರು. | |
| (ಎಫ್) | ವಿಶೇಷ ಅಧಿಕಾರಿ, ಸಾಮಾನ್ಯ ಪ್ರವೇಶ ಪರೀಕ್ಷಾ ಘಟಕ | ಸದಸ್ಯ ಕಾರ್ಯದರ್ಶಿ |

ಪರಂತು, ಎಲ್ಲಾ ಅನುದಾನಿತವಲ್ಲದ ಖಾಸಗಿ ವೃತ್ತಿ ಶಿಕ್ಷಣ ಸಂಸ್ಥೆಗಳು [3][ಮತ್ತು ಡೀಮ್ಡ್ ವಿಶ್ವವಿದ್ಯಾಲಯಗಳು][3], ಅನಿವಾಸಿ ಭಾರತೀಯ ವಿದ್ಯಾರ್ಥಿಗಳಿಗಾಗಿ ಮೀಸಲಿಟ್ಟ ಸೀಟುಗಳ ಹೊರತಾಗಿ, ತಮ್ಮ ಎಲ್ಲ ಸೀಟುಗಳನ್ನು ರಾಜ್ಯ ಸಾಮಾನ್ಯ ಪ್ರವೇಶ ಪರೀಕ್ಷಾ ಘಟಕದ ಮೂಲಕ ಭರ್ತಿಮಾಡಲು ಒಪ್ಪಿಕೊಂಡರೆ ಮತ್ತು ಆಯ್ಕೆ ಮಾಡಿಕೊಂಡರೆ, ಆಗ ರಾಜ್ಯ ಸರ್ಕಾರವು ಅಧಿಸೂಚನೆಯ ಮೂಲಕ, ವೈದ್ಯಕೀಯ, ದಂತವೈದ್ಯ, ಇಂಜಿನಿಯರಿಂಗ್ ಮತ್ತು ಇತರ ಫ್ಯಾಕಲ್ಟಿಗಳಲ್ಲಿ ಶಿಕ್ಷಣ ನೀಡುತ್ತಿರುವ ಖಾಸಗಿ ಅನುದಾನಿತವಲ್ಲದ ವೃತ್ತಿ ಶಿಕ್ಷಣ ಸಂಸ್ಥೆಗಳ [3][ಮತ್ತು ಡೀಮ್ಡ್ ವಿಶ್ವವಿದ್ಯಾಲಯಗಳ][3] ಆಡಳಿತ ವರ್ಗದ ಪ್ರತಿನಿಧಿಗಳನ್ನು ಒಳಗೊಂಡಂತೆ, ತಾನು ಸೂಕ್ತವೆಂದು ಭಾವಿಸುವಷ್ಟು ಸಂಖ್ಯೆಯ ಸದಸ್ಯರು ಇರುವ ರಾಜ್ಯ ಸಾಮಾನ್ಯ ಪ್ರವೇಶ ಪರೀಕ್ಷಾ ಸಮಿತಿಯನ್ನು ಪುನರ್‌ರಚಿಸಬಹುದು.

(2) ಸಮಿತಿಯು, ವೃತ್ತಿ ಶಿಕ್ಷಣ ಸಂಸ್ಥೆಗಳಲ್ಲಿ [4][ಎಲ್ಲ ಸೀಟುಗಳಿಗೆ][4] ವಿದ್ಯಾರ್ಥಿಗಳ ಪ್ರವೇಶಕ್ಕಾಗಿ ಸಾಮಾನ್ಯ ಪ್ರವೇಶ ಪರೀಕ್ಷೆಯನ್ನು ನಡೆಸತಕ್ಕದ್ದು. ಪರೀಕ್ಷೆ ಸುಗಮವಾಗಿ ಆಗುವಂತೆ ನೋಡಿಕೊಳ್ಳುವುದಕ್ಕಾಗಿ ರಾಜ್ಯ ಸರ್ಕಾರವು, ಅಗತ್ಯವಾಗಬಹುದಾದಷ್ಟು ಸಂಖ್ಯೆಯ ಅಧಿಕಾರಿಗಳನ್ನು ಮತ್ತು ನೌಕರರನ್ನು ಸಾಮಾನ್ಯ ಪ್ರವೇಶ ಪರೀಕ್ಷಾ ಘಟಕಕ್ಕೆ ಒದಗಿಸತಕ್ಕದ್ದು.

[3][ಪರಂತು, ಭಾರತ ಸರ್ಕಾರ ಅಥವಾ ಅದರ ಯಾವುದೇ ಏಜೆನ್ಸಿಯು ಯಾವುದೇ ವೃತ್ತಿಪರ ಕೋರ್ಸುಗಳ ಸಂಬಂಧದಲ್ಲಿ ಸಾಮಾನ್ಯ ಪ್ರವೇಶ ಪರೀಕ್ಷೆಯ ನಡೆಸಿದರೆ, ಆಗ ಸಾಮಾನ್ಯ ಪ್ರವೇಶ ಪರೀಕ್ಷೆಯಲ್ಲಿ ಅಭ್ಯರ್ಥಿಗಳು ಪಡೆದ ಅಂಕಗಳ ಆಧಾರದ ಮೇಲೆ ಎಲ್ಲಾ ಸರ್ಕಾರಿ ಸೀಟುಗಳಿಗಾಗಿ ಅಥವಾ ಖಾಸಗಿ ಅನುದಾನಿತವಲ್ಲದ ವೃತ್ತಿ ಶಿಕ್ಷಣ ಸಂಸ್ಥೆಗಳ ಸೀಟುಗಳಿಗಾಗಿ ಮತ್ತು ಡೀಮ್ಡ್ ವಿಶ್ವವಿದ್ಯಾಲಯಗಳ ವೃತ್ತಿಪರ ಕೋರ್ಸುಗಳಿಗಾಗಿ ರಾಜ್ಯ ಸರ್ಕಾರವು ಅಧಿಸೂಚಿಸಬಹುದಾದ ಅಂಥ ಏಜೆನ್ಸಿಯು ಕೇಂದ್ರೀಕೃತ ಕೌನ್ಸಿಲಿಂಗ್ ಅನ್ನು ನಡೆಸತಕ್ಕದ್ದು.][3]

(3) ಅಧ್ಯಕ್ಷರು ಸಭೆಯ ಅಧ್ಯಕ್ಷತೆ ವಹಿಸತಕ್ಕದ್ದು ಮತ್ತು ಸಮಿತಿಯು, ತಾನು ಸೂಕ್ತವೆಂದು ಭಾವಿಸುವಂಥ ಕಾರ್ಯವಿಧಾನವನ್ನು ಅನುಸರಿಸತಕ್ಕದ್ದು.

(4) ಸಮಿತಿಯು, ನಿಯಮಿಸಬಹುದಾದಂಥ ಅಧಿಕಾರಗಳನ್ನು ಹೊಂದಿರತಕ್ಕದ್ದು ಮತ್ತು ಅಂಥ ಪ್ರಕಾರ್ಯಗಳನ್ನು ನೆರವೇರಿಸತಕ್ಕದ್ದು ಮತ್ತು ಅಂಥ ರೀತಿಯಲ್ಲಿ ಪರೀಕ್ಷೆಗಳನ್ನು ನಡೆಸತಕ್ಕದ್ದು.

(5) ನಾಮನಿರ್ದೇಶಿಸಲು ಸಕ್ಷಮವಾಗಿರುವ ಪ್ರಾಧಿಕಾರದ ಇಚ್ಛೆಗೊಳಪಟ್ಟು ಸಮಿತಿಯ ನಾಮನಿರ್ದೇಶಿತ ಸದಸ್ಯರು ತಮ್ಮ ನಾಮನಿರ್ದೇಶನದ ದಿನಾಂಕದಿಂದ ಎರಡು ವರ್ಷಗಳ ಅವಧಿಯವರೆಗೆ ಅಧಿಕಾರ ಸ್ಥಾನದಲ್ಲಿರತಕ್ಕದ್ದು. ಯಾವುದೇ ಕಾರಣಕ್ಕಾಗಿ ಅದಕ್ಕೆ ಮೊದಲೇ ಯಾವುದೇ ಖಾಲಿ ಸ್ಥಾನ ಉಂಟಾದ ಸಂದರ್ಭದಲ್ಲಿ, ಅಂಥ ಖಾಲಿ ಸ್ಥಾನವನ್ನು, ಉಳಿದ ಅವಧಿಗಾಗಿ ಮೇಲೆ ನಿರ್ದಿಷ್ಟಪಡಿಸಿದ ವಿಧಾನದಲ್ಲಿ ತುಂಬತಕ್ಕದ್ದು. ಅಧಿಕಾರೇತರ ಸದಸ್ಯರು, ನಿಯಮಿಸಬಹುದಾದಂಥ ದರದಲ್ಲಿ ಉಪವೇಶನ ಶುಲ್ಕ ಮತ್ತು ಪ್ರಯಾಣ ಭತ್ಯಗಳನ್ನು ಪಡೆಯಲು ಅರ್ಹರಾಗಿರತಕ್ಕದ್ದು.

[2][(5ಎ) ಸಮಿತಿಯ ರಚನೆಯಲ್ಲಿನ ಯಾವುದೇ ಖಾಲಿಸ್ಥಾನವು ಸಮಿತಿಯ ವ್ಯವಹರಣೆಗಳನ್ನು ಅಸಿಂಧುಗೊಳಿಸತಕ್ಕದ್ದಲ್ಲ.][2]

(6) ಪ್ರತಿಯೊಂದು [5][XXX][5] ಸೀಟಿಗೆ ಪ್ರವೇಶವನ್ನು, ರಾಜ್ಯ ಸಾಮಾನ್ಯ ಪ್ರವೇಶ ಪರೀಕ್ಷಾ ಸಮಿತಿಯು ನಡೆಸಿದ ಸಾಮಾನ್ಯ ಪ್ರವೇಶ ಪರೀಕ್ಷೆಯಲ್ಲಿ ಪಡೆದ ಮೆರಿಟ್ ಆಧಾರದ ಮೇಲೆ ಹಾಗೂ ಆ ತರುವಾಯದ ಕೇಂದ್ರೀಯ ಕೌನ್ಸಿಲಿಂಗ್ ಮೂಲಕ ರಾಜ್ಯದ ಮೀಸಲಾತಿ ನೀತಿಗೊಳಪಟ್ಟು ಮಾಡತಕ್ಕದ್ದು.

[3][ಪರಂತು, ಭಾರತ ಸರ್ಕಾರ ಅಥವಾ ಅದರ ಯಾವುದೇ ಏಜೆನ್ಸಿಯು ಯಾವುದೇ ಕೋರ್ಸುಗಳಿಗೆ ಸಾಮಾನ್ಯ ಪ್ರವೇಶ ಪರೀಕ್ಷೆಯನ್ನು ನಡೆಸಿದರೆ, ಆಗ ರಾಜ್ಯ ಸಾಮಾನ್ಯ ಪ್ರವೇಶ ಪರೀಕ್ಷಾ ಸಮಿತಿಯು ಸಾಮಾನ್ಯ ಪ್ರವೇಶ ಪರೀಕ್ಷೆಯನ್ನು ನಡೆಸುವ ಅಗತ್ಯವಿರುವುದಿಲ್ಲ, ಆದರೆ ಸರ್ಕಾರಿ ಅಥವಾ ಖಾಸಗಿ ಅನುದಾನಿತವಲ್ಲದ

ಮತ್ತು ಡೀಮ್ಡ್ ವಿಶ್ವವಿದ್ಯಾಲಯ ಸಂಸ್ಥೆಗಳ ಎಲ್ಲಾ ವೃತ್ತಿಪರ ಕೋರ್ಸುಗಳಿಗೆ ಪ್ರವೇಶವನ್ನು ನೀಡುವುದಕ್ಕಾಗಿ ಕೇಂದ್ರಿಕೃತ ಕೌನ್ಸಿಲಿಂಗ್ ಅನ್ನು ನಿಯಮಿಸಬಹುದಾದ ಅಂಥ ಏಜೆನ್ಸಿಯ ಮೂಲಕ ಮತ್ತು ಅಂಥ ವಿಧಾನದಲ್ಲಿ ನಡೆಸತಕ್ಕದ್ದು.][3]

1. 2015ರ ಅಧಿನಿಯಮ ಸಂಖ್ಯೆ 39ರ ಮೂಲಕ ದಿನಾಂಕ: 11.09.2015ರಿಂದ ಪ್ರತಿಯೋಜಿಸಲಾಗಿದೆ.
2. 2015ರ ಅಧಿನಿಯಮ ಸಂಖ್ಯೆ 39ರ ಮೂಲಕ ದಿನಾಂಕ: 11.09.2015ರಿಂದ ಸೇರಿಸಲಾಗಿದೆ.
3. 2017ರ ಅಧಿನಿಯಮ ಸಂಖ್ಯೆ 22ರ ಮೂಲಕ ದಿನಾಂಕ: 20.04.2017ರಿಂದ ಸೇರಿಸಲಾಗಿದೆ.
4. 2017ರ ಅಧಿನಿಯಮ ಸಂಖ್ಯೆ 22ರ ಮೂಲಕ ದಿನಾಂಕ: 20.04.2017ರಿಂದ ಪ್ರತಿಯೋಜಿಸಲಾಗಿದೆ.
5. 2017ರ ಅಧಿನಿಯಮ ಸಂಖ್ಯೆ 22ರ ಮೂಲಕ ದಿನಾಂಕ: 20.04.2017ರಿಂದ ಬಿಟ್ಟುಬಿಡಲಾಗಿದೆ.

[2][[1][**4. ಅನುದಾನಿತವಲ್ಲದ ವೃತ್ತಿ ಶಿಕ್ಷಣ ಸಂಸ್ಥೆಗಳಲ್ಲಿ ಪ್ರವೇಶ ವಿಧಾನ.–** ಯಾವುದೇ ವ್ಯಾಸಂಗಕ್ರಮದಲ್ಲಿ ವೃತ್ತಿಪರ ಶಿಕ್ಷಣವನ್ನು ನೀಡುವ ಅಲ್ಪಸಂಖ್ಯಾತ ಅಥವಾ ಅಲ್ಪಸಂಖ್ಯಾತವಲ್ಲದ ಅನುದಾನಿತವಲ್ಲದ ವೃತ್ತಿ ಶಿಕ್ಷಣ ಸಂಸ್ಥೆಗಳಲ್ಲಿ ಎಲ್ಲಾ ಸೀಟುಗಳಿಗೆ ರಾಜ್ಯ ಸಾಮಾನ್ಯ ಪ್ರವೇಶ ಪರೀಕ್ಷಾ ಸಮಿತಿಯು ನಡೆಸುವ ಸಾಮಾನ್ಯ ಪ್ರವೇಶ ಪರೀಕ್ಷೆಯ ಮೂಲಕ ಪ್ರವೇಶವನ್ನು ನೀಡತಕ್ಕದ್ದು:

ಪರಂತು, ಭಾರತ ಸರ್ಕಾರ ಅಥವಾ ಅದರ ಏಜೆನ್ಸಿಯು ಯಾವುದೇ ವೃತ್ತಿಪರ ಕೋರ್ಸಿಗೆ ಸಾಮಾನ್ಯ ಪ್ರವೇಶ ಪರೀಕ್ಷೆಯನ್ನು ನಡೆಸಿದ ಸಂದರ್ಭದಲ್ಲಿ, ಆಗ ಅಂಥ ಕೋರ್ಸುಗಳ ಪ್ರವೇಶಕ್ಕಾಗಿ ಕೇಂದ್ರಿಕೃತ ಕೌನ್ಸಿಲಿಂಗ್ ಅನ್ನು ನಿಯಮಿಸಬಹುದಾದ ಅಂಥ ಏಜೆನ್ಸಿಯ ಮೂಲಕ ಮತ್ತು ಅಂಥ ವಿಧಾನದಲ್ಲಿ ನಡೆಸತಕ್ಕದ್ದು.][1]][2]

1. 2015ರ ಅಧಿನಿಯಮ ಸಂಖ್ಯೆ 39ರ ಮೂಲಕ ದಿನಾಂಕ: 11.09.2015ರಿಂದ ಪ್ರತಿಯೋಜಿಸಲಾಗಿದೆ.
2. 2017ರ ಅಧಿನಿಯಮ ಸಂಖ್ಯೆ 22ರ ಮೂಲಕ ದಿನಾಂಕ: 20.04.2017ರಿಂದ ಪ್ರತಿಯೋಜಿಸಲಾಗಿದೆ

[1][**4ಎ. ಸಮ್ಮತಾಭಿಪ್ರಾಯದ ಒಪ್ಪಂದದ ಸಂದರ್ಭದಲ್ಲಿ ಪ್ರವೇಶ ವಿಧಾನ.–** (1) ಈ ಅಧಿನಿಯಮದಲ್ಲಿ ಏನೇ ಇದ್ದರೂ, ರಾಜ್ಯ ಸರ್ಕಾರ ಮತ್ತು ಅಲ್ಪಸಂಖ್ಯಾತ ಅಥವಾ ಅಲ್ಪಸಂಖ್ಯಾತೇತರ ಅನುದಾನಿತವಲ್ಲದ ವೃತ್ತಿ ಶಿಕ್ಷಣ ಸಂಸ್ಥೆಗಳು, ಸದರಿ ಅನುದಾನಿತವಲ್ಲದ ವೃತ್ತಿ ಶಿಕ್ಷಣ ಸಂಸ್ಥೆಗಳಲ್ಲಿ ಅಂಥ ಸೀಟುಗಳ ಸಂಬಂಧದಲ್ಲಿ, ಸೀಟುಗಳ ಹಂಚಿಕೆ ಮತ್ತು ಶುಲ್ಕ ನಿಗದಿಯ ಕುರಿತು ಸಮ್ಮತಾಭಿಪ್ರಾಯ ವ್ಯವಸ್ಥೆ ಅಥವಾ ಒಪ್ಪಂದಕ್ಕೆ ಬರಲು, ರಾಜ್ಯ ಸರ್ಕಾರ ಮತ್ತು ಅಲ್ಪಸಂಖ್ಯಾತ ಅಥವಾ ಅಲ್ಪಸಂಖ್ಯಾತೇತರ ಅನುದಾನಿತವಲ್ಲದ ವೃತ್ತಿ ಶಿಕ್ಷಣ ಸಂಸ್ಥೆಗಳು ಒಪ್ಪಿದ ಸಂದರ್ಭದಲ್ಲಿ, ಅಂಥ ವರ್ಷದಲ್ಲಿ, ರಾಜ್ಯ ಸರ್ಕಾರ ಮತ್ತು ಖಾಸಗಿ ವೃತ್ತಿ ಶಿಕ್ಷಣ ಸಂಸ್ಥೆಗಳ ಮೂಲಕ ಒಪ್ಪಿಗೆಯಾದಂಥ ಸಂಖ್ಯೆಯ ಸೀಟುಗಳಿಗೆ ಪ್ರವೇಶವನ್ನು, ವೃತ್ತಿ ಶಿಕ್ಷಣ ಸಂಸ್ಥೆಗಳಲ್ಲಿನ ಸರ್ಕಾರಿ ಸೀಟುಗಳಿಗೆ ಪ್ರವೇಶಕ್ಕಾಗಿ ಆಯ್ಕೆಯ ಕುರಿತು ಸರ್ಕಾರವು ನಿಯಮಿಸಬಹುದಾದಂಥ ನಿಯಮಗಳಿಗೆ ಮತ್ತು 371ಜೆ ಅನುಚ್ಛೇದದ ಅಡಿಯಲ್ಲಿನ ಮೀಸಲಾತಿಯನ್ನು ಒಳಗೊಂಡಂತೆ ರಾಜ್ಯದ ಮೀಸಲಾತಿ ಕಾರ್ಯನೀತಿಗೆ ಅನುಸಾರವಾಗಿ ಸರ್ಕಾರಿ ಸೀಟುಗಳಂತೆ, ಸಾಮಾನ್ಯ ಪ್ರವೇಶ ಪರೀಕ್ಷಾ ಸಮಿತಿಯ ಮೂಲಕ ಮಾಡತಕ್ಕದ್ದು. ಉಳಿದ ಸೀಟುಗಳನ್ನು, ಖಾಸಗಿ ವೃತ್ತಿ ಶಿಕ್ಷಣ ಸಂಸ್ಥೆಗಳ ಸಂಘಟನೆ ಅಥವಾ ಧಾರ್ಮಿಕ ಹಾಗೂ ಭಾಷಾ ಅಲ್ಪಸಂಖ್ಯಾತ ಸಂಸ್ಥೆಗಳ ಸಂಘಟನೆಯು, ನಡೆಸುವ ಸಾಮಾನ್ಯ ಪ್ರವೇಶ ಪರೀಕ್ಷೆಯ ಮೂಲಕ, ನಿಯಮಿಸಬಹುದಾದಂಥ ನಿಯಮಗಳಿಗೆ ಒಳಪಟ್ಟು ಸಮ್ಮತಾಭಿಪ್ರಾಯದ ಒಪ್ಪಂದಕ್ಕೆ ಅನುಸಾರವಾಗಿ ನ್ಯಾಯ ಸಮ್ಮತವಾದ, ಪಾರದರ್ಶಕವಾದ ಮತ್ತು ಶೋಷಣೆಯಾಗದ ರೀತಿಯಲ್ಲಿ ಕೇಂದ್ರಿಕೃತ ಕೌನ್ಸಿಲಿಂಗ್ ಮಾಡಿ ಅರ್ಹತೆಯ ಆಧಾರದ ಮೇಲೆ, ತುಂಬತಕ್ಕದ್ದು. ಸಮ್ಮತಾಭಿಪ್ರಾಯದ ವ್ಯವಸ್ಥೆ ಅಥವಾ ಒಪ್ಪಂದಕ್ಕೆ ಒಳಪಟ್ಟು, ರಾಜ್ಯ ಸರ್ಕಾರವು, ಅಧಿಸೂಚನೆಯ ಮೂಲಕ, ಈ ಕೆಳಗೆ ನಿರ್ದಿಷ್ಟಪಡಿಸಿದ ರೀತಿಯಲ್ಲಿ, ರಾಜ್ಯ ಸಾಮಾನ್ಯ ಪ್ರವೇಶ ಪರೀಕ್ಷೆ ಸಮಿತಿ ಮತ್ತು ಖಾಸಗಿ ಅನುದಾನಿತವಲ್ಲದ ವೃತ್ತಿ ಶಿಕ್ಷಣ ಸಂಸ್ಥೆಗಳ ಸಂಘಟನೆಯ ಮೂಲಕ ತುಂಬಬೇಕಾದ ಸೀಟು ಮ್ಯಾಟ್ರಿಕ್ಸ್ ಅನ್ನು, ಪ್ರಕಟಿಸತಕ್ಕದ್ದು, ಎಂದರೆ:–

(ಎ) ಅನುದಾನಿತವಲ್ಲದ ಅಲ್ಪಸಂಖ್ಯಾತೇತರ ವೃತ್ತಿ ಶಿಕ್ಷಣ ಸಂಸ್ಥೆಗಳಲ್ಲಿ, ವೈದ್ಯಕೀಯ ಅಥವಾ ದಂತವೈದ್ಯಕೀಯ ಪದವಿಗೆ ಪ್ರವೇಶಾವಕಾಶವಿರುವ ಒಟ್ಟು ಸೀಟುಗಳ ಪೈಕಿ,–

(i) ವೈದ್ಯಕೀಯ ಸೀಟುಗಳ ಸಂದರ್ಭದಲ್ಲಿ ಶೇಕಡಾ ನಲವತ್ತಕ್ಕೆ ಕಡಿಮೆಯಲ್ಲದಷ್ಟು ಸೀಟುಗಳನ್ನು ಮತ್ತು ದಂತವೈದ್ಯಕೀಯ ಸೀಟುಗಳ ಸಂದರ್ಭದಲ್ಲಿ ಶೇಕಡಾ ಮೂವತ್ತೈದಕ್ಕೆ ಕಡಿಮೆಯಲ್ಲದಷ್ಟು ಸೀಟುಗಳನ್ನು, ರಾಜ್ಯ ಸಾಮಾನ್ಯ ಪ್ರವೇಶ ಪರೀಕ್ಷಾ ಸಮಿತಿಯು ನಡೆಸುವ ಸಾಮಾನ್ಯ ಪ್ರವೇಶ ಪರೀಕ್ಷೆಯ ಮೂಲಕ ತುಂಬತಕ್ಕದ್ದು.

(ii) ವೈದ್ಯಕೀಯ ಸೀಟುಗಳ ಸಂದರ್ಭದಲ್ಲಿ ಶೇಕಡಾ ನಲವತ್ತಕ್ಕಿಂತ ಹೆಚ್ಚಲ್ಲದಷ್ಟು ಸೀಟುಗಳನ್ನು ಮತ್ತು ದಂತ ವೈದ್ಯಕೀಯ ಸೀಟುಗಳ ಸಂದರ್ಭದಲ್ಲಿ ಶೇಕಡ ನಲವತ್ತೈದಕ್ಕಿಂತ ಹೆಚ್ಚಲ್ಲದಷ್ಟು ಸೀಟುಗಳನ್ನು,

ಅಲ್ಪಸಂಖ್ಯಾತೇತರ ಅನುದಾನಿತವಲ್ಲದ ವೃತ್ತಿ ಶಿಕ್ಷಣ ಸಂಸ್ಥೆಗಳ ಸಂಘಟನೆಯು ನಡೆಸುವ ಸಾಮಾನ್ಯ ಪ್ರವೇಶ ಪರೀಕ್ಷೆಯ ಅರ್ಹತಾ ಪಟ್ಟಿಯ ಮೂಲಕ ತುಂಬತಕ್ಕದ್ದು.

(iii) ಶೇಕಡಾ ಇಪ್ಪತ್ತಕ್ಕಿಂತ ಹೆಚ್ಚಲ್ಲದಷ್ಟು ಸೀಟುಗಳನ್ನು ಅನಿವಾಸಿ ಭಾರತೀಯರು/ಮ್ಯಾನೇಜ್‌ಮೆಂಟ್ ಕೋಟಾ ಅಭ್ಯರ್ಥಿಗಳ ಮೂಲಕ ತುಂಬತಕ್ಕದ್ದು.

(ಬಿ) ಅನುದಾನಿತವಲ್ಲದ ಅಲ್ಪಸಂಖ್ಯಾತೇತರ ವೃತ್ತಿ ಶಿಕ್ಷಣ ಸಂಸ್ಥೆಗಳಲ್ಲಿ, ವೈದ್ಯಕೀಯ/ದಂತವೈದ್ಯಕೀಯ ಸ್ನಾತಕೋತ್ತರದ ಪ್ರವೇಶಾವಕಾಶವಿರುವ ಒಟ್ಟು ಸೀಟುಗಳ ಪೈಕಿ, ಪ್ರಿ–ಕ್ಲಿನಿಕಲ್, ಪ್ಯಾರಾಕ್ಲಿನಿಕಲ್ ಮತ್ತು ಕ್ಲಿನಿಕಲ್ ವ್ಯಾಸಂಗ ವಿಷಯದ ಮೇಲೆ, ವ್ಯಾಸಂಗ ವಿಷಯಗಳ ಸರದಿಯ ಮೂಲಕ, ಈ ಮುಂದಿನ ರೀತಿಯಲ್ಲಿ ಪ್ರತಿ ವರ್ಷವು ಮಾಡತಕ್ಕದ್ದು, ಎಂದರೆ:–

(i) ಶೇಕಡಾ ಮೂವತ್ತೂರ್‍ರಕ್ಕಿಂತ ಕಡಿಮೆಯಲ್ಲದಷ್ಟು ಸೀಟುಗಳನ್ನು, ರಾಜ್ಯ ಸಾಮಾನ್ಯ ಪ್ರವೇಶ ಪರೀಕ್ಷಾ ಸಮಿತಿಯು ನಡೆಸುವ ಸಾಮಾನ್ಯ ಪ್ರವೇಶ ಪರೀಕ್ಷೆಯ ಮೂಲಕ ತುಂಬತಕ್ಕದ್ದು;

(ii) ಶೇಕಡಾ ನಲವತ್ತೆರಡಕ್ಕಿಂತ ಹೆಚ್ಚಲ್ಲದಷ್ಟು ಸೀಟುಗಳನ್ನು, ಅಲ್ಪಸಂಖ್ಯಾತೇತರ ಅನುದಾನಿತವಲ್ಲದ ವೃತ್ತಿಶಿಕ್ಷಣ ಸಂಸ್ಥೆಗಳ ಸಂಘಟನೆಯು ನಡೆಸುವ ಸಾಮಾನ್ಯ ಪ್ರವೇಶ ಪರೀಕ್ಷೆಯ ಅರ್ಹತಾ ಪಟ್ಟಿಯ ಮೂಲಕ ತುಂಬತಕ್ಕದ್ದು; ಮತ್ತು

(iii) ಶೇಕಡಾ ಇಪ್ಪತ್ತೈದಕ್ಕಿಂತ ಹೆಚ್ಚಲ್ಲದಷ್ಟು ಸೀಟುಗಳನ್ನು ಅನಿವಾಸಿ ಭಾರತೀಯರು/ ಮ್ಯಾನೇಜ್‌ಮೆಂಟ್ ಕೋಟಾ ಅಭ್ಯರ್ಥಿಗಳ ಮೂಲಕ ತುಂಬತಕ್ಕದ್ದು.

(ಸಿ) ಅನುದಾನಿತವಲ್ಲದ ಅಲ್ಪಸಂಖ್ಯಾತ ಶೈಕ್ಷಣಿಕ ಸಂಸ್ಥೆಗಳಲ್ಲಿ ವೈದ್ಯಕೀಯ/ದಂತ ವೈದ್ಯಕೀಯ ಪದವಿಗೆ ಪ್ರವೇಶಾವಕಾಶವಿರುವ ಒಟ್ಟು ಸೀಟುಗಳ ಪೈಕಿ:–

(i) ಶೇಕಡಾ ಇಪ್ಪತ್ತೈದಕ್ಕಿಂತ ಕಡಿಮೆಯಲ್ಲದಷ್ಟು ಸೀಟುಗಳನ್ನು ರಾಜ್ಯ ಸಾಮಾನ್ಯ ಪ್ರವೇಶ ಪರೀಕ್ಷಾ ಸಮಿತಿಯು ನಡೆಸುವ ಸಾಮಾನ್ಯ ಪ್ರವೇಶ ಪರೀಕ್ಷೆಯ ಮೂಲಕ ತುಂಬತಕ್ಕದ್ದು;

(ii) ಶೇಕಡಾ ಐವತ್ತೈದಕ್ಕಿಂತ ಹೆಚ್ಚಲ್ಲದಷ್ಟು ಸೀಟುಗಳನ್ನು, ಅಲ್ಪಸಂಖ್ಯಾತ ಅನುದಾನಿತವಲ್ಲದ ವೃತ್ತಿ ಶಿಕ್ಷಣ ಸಂಸ್ಥೆಗಳ ಸಂಘಟನೆಯು ನಡೆಸುವ ಸಾಮಾನ್ಯ ಪ್ರವೇಶ ಪರೀಕ್ಷೆಯ ಅರ್ಹತಾ ಪಟ್ಟಿಯ ಮೂಲಕ ತುಂಬತಕ್ಕದ್ದು; ಮತ್ತು

(iii) ಶೇಕಡಾ ಇಪ್ಪತ್ತಕ್ಕಿಂತ ಹೆಚ್ಚಲ್ಲದಷ್ಟು ಸೀಟುಗಳನ್ನು ಅನಿವಾಸಿ ಭಾರತೀಯರು/ ಮ್ಯಾನೇಜ್‌ಮೆಂಟ್ ಕೋಟಾ ಅಭ್ಯರ್ಥಿಗಳ ಮೂಲಕ ತುಂಬತಕ್ಕದ್ದು.

(ಡಿ) ಅನುದಾನಿತವಲ್ಲದ ಅಲ್ಪಸಂಖ್ಯಾತ ಶೈಕ್ಷಣಿಕ ಸಂಸ್ಥೆಗಳಲ್ಲಿ ಸ್ನಾತಕೋತ್ತರ ವೈದ್ಯಕೀಯ/ದಂತ ವೈದ್ಯಕೀಯಕ್ಕೆ ಪ್ರವೇಶಾವಕಾಶವಿರುವ ಒಟ್ಟು ಸೀಟುಗಳ ಪೈಕಿ, ಪ್ರಿ–ಕ್ಲಿನಿಕಲ್, ಪ್ಯಾರಾ–ಕ್ಲಿನಿಕಲ್ ಮತ್ತು ಕ್ಲಿನಿಕಲ್ ವ್ಯಾಸಂಗ ವಿಷಯಗಳ ಮೇಲೆ, ವ್ಯಾಸಂಗ ವಿಷಯಗಳ ಸರದಿಯ ಮೂಲಕ, ಪ್ರತಿ ವರ್ಷವೂ,–

(i) ಶೇಕಡಾ ಇಪ್ಪತ್ತಕ್ಕಿಂತ ಕಡಿಮೆಯಿಲ್ಲದಷ್ಟು ಸೀಟುಗಳನ್ನು ರಾಜ್ಯ ಸಾಮಾನ್ಯ ಪ್ರವೇಶ ಪರೀಕ್ಷೆ ಸಮಿತಿಯು ನಡೆಸುವ ಸಾಮಾನ್ಯ ಪ್ರವೇಶ ಪರೀಕ್ಷೆಯ ಮೂಲಕ ತುಂಬತಕ್ಕದ್ದು.

(ii) [2][ಶೇಕಡಾ ಐವತ್ತೈದಕ್ಕಿಂತ][2] ಹೆಚ್ಚಲ್ಲದಷ್ಟು ಸೀಟುಗಳನ್ನು, ಅಲ್ಪಸಂಖ್ಯಾತ ಅನುದಾನಿತವಲ್ಲದ ವೃತ್ತಿ ಶಿಕ್ಷಣ ಸಂಸ್ಥೆಗಳ ಸಂಘಟನೆಯು ನಡೆಸುವ ಸಾಮಾನ್ಯ ಪ್ರವೇಶ ಪರೀಕ್ಷೆಯ ಅರ್ಹತಾ ಪಟ್ಟಿಯ ಮೂಲಕ ತುಂಬತಕ್ಕದ್ದು; ಮತ್ತು

(iii) [2][ಶೇಕಡಾ ಇಪ್ಪತ್ತೈದಕ್ಕಿಂತ][2] ಹೆಚ್ಚಲ್ಲದಷ್ಟು ಸೀಟುಗಳನ್ನು ಅನಿವಾಸಿ ಭಾರತೀಯರು/ ಮ್ಯಾನೇಜ್‌ಮೆಂಟ್ ಕೋಟಾ ಅಭ್ಯರ್ಥಿಗಳ ಮೂಲಕ ತುಂಬತಕ್ಕದ್ದು.

(ಇ) ಅನುದಾನಿತವಲ್ಲದ ಅಲ್ಪಸಂಖ್ಯಾತೇತರ ವೃತ್ತಿ ಶಿಕ್ಷಣ ಸಂಸ್ಥೆಗಳಲ್ಲಿನ ಇಂಜಿನಿಯರಿಂಗ್ ಪದವಿಗೆ ಪ್ರವೇಶಾವಕಾಶವಿರುವ ಒಟ್ಟು ಸೀಟುಗಳ ಪೈಕಿ,–

(i) ಶೇಕಡಾ ನಲವತ್ತೈದಕ್ಕಿಂತ ಕಡಿಮೆಯಲ್ಲದಷ್ಟು ಸೀಟುಗಳನ್ನು ರಾಜ್ಯ ಸಾಮಾನ್ಯ ಪ್ರವೇಶ ಪರೀಕ್ಷೆ ಸಮಿತಿಯು ನಡೆಸುವ ಸಾಮಾನ್ಯ ಪ್ರವೇಶ ಪರೀಕ್ಷೆಯ ಮೂಲಕ ತುಂಬತಕ್ಕದ್ದು.

(ii) ಶೇಕಡಾ ಮೂವತ್ತಕ್ಕಿಂತ ಹೆಚ್ಚಲ್ಲದಷ್ಟು ಸೀಟುಗಳನ್ನು, ಅಲ್ಪ ಸಂಖ್ಯಾತೇತರ ಅನುದಾನಿತವಲ್ಲದ ವೃತ್ತಿ ಶಿಕ್ಷಣ ಸಂಸ್ಥೆಗಳ ಸಂಘಟನೆಯು ನಡೆಸುವ ಸಾಮಾನ್ಯ ಪ್ರವೇಶ ಪರೀಕ್ಷೆಯ ಅರ್ಹತಾ ಪಟ್ಟಿಯ ಮೂಲಕ ತುಂಬತಕ್ಕದ್ದು;

(iii) ಶೇಕಡಾ ಇಪ್ಪತ್ತೈದಕ್ಕಿಂತ ಹೆಚ್ಚಲ್ಲದಷ್ಟು ಸೀಟುಗಳನ್ನು ಅನಿವಾಸಿ ಭಾರತೀಯರು/ ಮ್ಯಾನೇಜ್‌ಮೆಂಟ್ ಕೋಟಾ ಅಭ್ಯರ್ಥಿಗಳ ಮೂಲಕ ತುಂಬತಕ್ಕದ್ದು.

(ಎಫ್) ಅನುದಾನಿತವಲ್ಲದ ಅಲ್ಪಸಂಖ್ಯಾತ ವೃತ್ತಿ ಶಿಕ್ಷಣ ಸಂಸ್ಥೆಗಳಲ್ಲಿ ಇಂಜಿನಿಯರಿಂಗ್ ಪದವಿಗೆ ಪ್ರವೇಶಾವಕಾಶವಿರುವ ಒಟ್ಟು ಸೀಟುಗಳ ಪೈಕಿ,-

(i) ಶೇಕಡಾ ನಲವತ್ತಕ್ಕಿಂತ ಕಡಿಮೆಯಲ್ಲದಷ್ಟು ಸೀಟುಗಳನ್ನು ರಾಜ್ಯ ಸರ್ಕಾರವು ನಡೆಸುವ ಸಾಮಾನ್ಯ ಪ್ರವೇಶ ಪರೀಕ್ಷೆಯ ಮೂಲಕ ತುಂಬತಕ್ಕದ್ದು.

(ii) ಶೇಕಡಾ ಮೂವತ್ತಕ್ಕಿಂತ ಹೆಚ್ಚಲ್ಲದಷ್ಟು ಸೀಟುಗಳನ್ನು, ಅಲ್ಪಸಂಖ್ಯಾತ ಅನುದಾನಿತವಲ್ಲದ ವೃತ್ತಿ ಶಿಕ್ಷಣ ಸಂಸ್ಥೆಗಳ ಸಂಘಟನೆಯು ನಡೆಸುವ ಸಾಮಾನ್ಯ ಪ್ರವೇಶ ಪರೀಕ್ಷೆಯ ಅರ್ಹತಾ ಪಟ್ಟಿಯ ಮೂಲಕ ತುಂಬತಕ್ಕದ್ದು; ಮತ್ತು

(iii) ಶೇಕಡಾ ಮೂವತ್ತಕ್ಕಿಂತ ಹೆಚ್ಚಲ್ಲದಷ್ಟು ಸೀಟುಗಳನ್ನು ಅನಿವಾಸಿ ಭಾರತೀಯರು/ ಮ್ಯಾನೇಜ್‌ಮೆಂಟ್ ಕೋಟಾ ಅಭ್ಯರ್ಥಿಗಳ ಮೂಲಕ ತುಂಬತಕ್ಕದ್ದು:

ಪರಂತು, ಅಲ್ಪಸಂಖ್ಯಾತ ಅನುದಾನಿತವಲ್ಲದ ವೃತ್ತಿ ಶಿಕ್ಷಣ ಸಂಸ್ಥೆಗಳಲ್ಲಿ (ಸಿ), (ಡಿ) ಮತ್ತು (ಎಫ್) ಖಂಡಗಳ ಅಡಿಯಲ್ಲಿ ಸಂಸ್ಥೆಯ ಸೀಟುಗಳನ್ನು ತುಂಬುವಾಗ, ಶೇಕಡಾ ಅರವತ್ತಾರಕ್ಕಿಂತ ಕಡಿಮೆಯಲ್ಲದಷ್ಟು ಸೀಟುಗಳನ್ನು, ಸಾಮಾನ್ಯ ಪ್ರವೇಶ ಪರೀಕ್ಷೆಯ ಅರ್ಹತಾ ಪಟ್ಟಿಯಲ್ಲಿ ಪರಸ್ಪರ ಅರ್ಹತೆಯ ಮೇಲೆ, ಯಾವ ಅಲ್ಪಸಂಖ್ಯಾತ ಸಂಸ್ಥೆಗೆ ಸೇರುವುದೋ, ರಾಜ್ಯದೊಳಗಿನ ಆ ಅಲ್ಪಸಂಖ್ಯಾತ ವಿದ್ಯಾರ್ಥಿಗಳ ಮೂಲಕ ತುಂಬತಕ್ಕದ್ದು.

[3][ಮತ್ತು ಪರಂತು, ಭಾರತ ಸರ್ಕಾರ ಅಥವಾ ಅದರ ಏಜೆನ್ಸಿಯು ಯಾವುದೇ ವೃತ್ತಿಪರ ಶಿಕ್ಷಣ ಕೋರ್ಸಿಗೆ ಸಾಮಾನ್ಯ ಪ್ರವೇಶ ಪರೀಕ್ಷೆಯನ್ನು ನಡೆಸಿದ ಸಂದರ್ಭದಲ್ಲಿ, ಸೀಟುಗಳ ಹಂಚಿಕೆಗಾಗಿ ಕೇಂದ್ರಿಕೃತ ಕೌನ್ಸಿಲಿಂಗ್‌ಅನ್ನು ನಿಯಮಿಸಬಹುದಾದ ಅಂಥ ಏಜೆನ್ಸಿಯು ನಡೆಸತಕ್ಕದ್ದು:

ಅಲ್ಲದೆ ಪರಂತು, ಶೇಕಡಾ ಮೂವತ್ತಕ್ಕಿಂತ ಕಡಿಮೆಯಲ್ಲದಷ್ಟು ಸಂಸ್ಥೆಗಳ ಸೀಟುಗಳನ್ನು ಕರ್ನಾಟಕದ ವಿದ್ಯಾರ್ಥಿಗಳ ಮೂಲಕ ತುಂಬತಕ್ಕದ್ದು ಮತ್ತು ಕರ್ನಾಟಕ ವಿದ್ಯಾರ್ಥಿಗಳು ಸಾಕಷ್ಟು ಸಂಖ್ಯೆಯಲ್ಲಿ ಲಭ್ಯವಿರದಿದ್ದಲ್ಲಿ ಅಂಥ ಸೀಟುಗಳನ್ನು ಇತರರ ಮೂಲಕ ತುಂಬತಕ್ಕದ್ದು.][3]

(2) ಈ ಅಧಿನಿಯಮದಲ್ಲಿ ಏನೇ ಒಳಗೊಂಡಿದ್ದರೂ, (2)ನೇ ಉಪಪ್ರಕರಣದ ಅಡಿಯಲ್ಲಿ ಸಮ್ಮತಾಭಿಪ್ರಾಯದ ಒಪ್ಪಂದಕ್ಕೆ ಪ್ರವೇಶಿಸುವ ರಾಜ್ಯ ಸರ್ಕಾರದ ಸಂದರ್ಭದಲ್ಲಿ, ಸರ್ಕಾರಿ ಸೀಟುಗಳ ಮತ್ತು ಖಾಸಗಿ ಅನುದಾನಿತವಲ್ಲದ ವೃತ್ತಿ ಶಿಕ್ಷಣ ಸಂಸ್ಥೆಗಳಲ್ಲಿನ ಸೀಟುಗಳ ಪ್ರವೇಶಕ್ಕಾಗಿನ ಶುಲ್ಕವು, ಸಮ್ಮತಾಭಿಪ್ರಾಯದ ಒಪ್ಪಂದದಲ್ಲಿ ಅಂಥ ಸಂಸ್ಥೆಗಳು ಮತ್ತು ಸರ್ಕಾರವು ಒಪ್ಪಿದಂತೆ ಸಂಸ್ಥೆಗಳು ನೀಡುವ ಅಂಥ ರಿಯಾಯಿತಿ ಅಥವಾ ವಿದ್ಯಾರ್ಥಿ ವೇತನದೊಂದಿಗೆ ಅಂಥ ದರದಲ್ಲಿ ಇರತಕ್ಕದ್ದು:

ಪರಂತು, ರಾಜ್ಯ ಸರ್ಕಾರ ಮತ್ತು ಪ್ರತ್ಯೇಕ ಸಂಸ್ಥೆಯು ಕೂಡಾ, ಪರಸ್ಪರ ಅಂಗೀಕರಿಸುವ ಷರತ್ತುಗಳೊಂದಿಗೆ ಸಮ್ಮತಾಭಿಪ್ರಾಯದ ಒಪ್ಪಂದಕ್ಕೆ ಸೇರಬಹುದು.

ಮತ್ತು ಪರಂತು, ಕರ್ನಾಟಕ ವೃತ್ತಿ ಶಿಕ್ಷಣ ಸಂಸ್ಥೆಗಳ (ಪ್ರವೇಶ ನಿಯಂತ್ರಣ ಮತ್ತು ಶುಲ್ಕ ನಿಗದಿ) (ತಿದ್ದುಪಡಿ) ಅಧಿನಿಯಮ, 2015ರ ಪ್ರಾರಂಭಕ್ಕೆ ಮೊದಲು ರಾಜ್ಯ ಸರ್ಕಾರ ಮತ್ತು ಖಾಸಗಿ ವೃತ್ತಿ ಶಿಕ್ಷಣ ಸಂಸ್ಥೆಗಳ ನಡುವೆ ನಡೆದ ಯಾವುದೇ ಸಮ್ಮತಾಭಿಪ್ರಾಯ ಒಪ್ಪಂದ ಮತ್ತು ಹೊರಡಿಸಿದ ಯಾವುದೇ ಅಧಿಸೂಚನೆ ಅಥವಾ 2015-16ನೇ ಶೈಕ್ಷಣಿಕ ವರ್ಷಕ್ಕಾಗಿ ರಾಜ್ಯ ಸರ್ಕಾರದಿಂದ ತೆಗೆದುಕೊಳ್ಳಲಾದ ಯಾವುದೇ ಅನುಷಂಗಿಕ ಕ್ರಮವು ಸಿಂಧುವೆಂದು ಮತ್ತು ಜಾರಿಗೊಳಿಸಲಾಗಿದೆ ಎಂದು ಹಾಗೂ ರಾಜ್ಯ ಸರ್ಕಾರದಿಂದ ಈ ಅಧಿನಿಯಮಕ್ಕೆ ಅನುಗುಣವಾಗಿಯೇ ಕೈಗೊಳ್ಳಲಾಗಿದೆ ಅಥವಾ ಮಾಡಲಾಗಿದೆ ಎಂದು ಭಾವಿಸತಕ್ಕದ್ದು.][1]

1. 2017ರ ಅಧಿನಿಯಮ ಸಂಖ್ಯೆ 39ರ ಮೂಲಕ ದಿನಾಂಕ: 11.09.2015ರಿಂದ ಸೇರಿಸಲಾಗಿದೆ.

2. 2017ರ ಅಧಿನಿಯಮ ಸಂಖ್ಯೆ 22ರ ಮೂಲಕ ದಿನಾಂಕ: 06.04.2017ರಿಂದ ಪ್ರತಿಯೋಜಿಸಲಾಗಿದೆ.

3. 2017ರ ಅಧಿನಿಯಮ ಸಂಖ್ಯೆ 22ರ ಮೂಲಕ ದಿನಾಂಕ: 06.04.2017ರಿಂದ ಸೇರಿಸಲಾಗಿದೆ.

[1][**4ಬಿ. ಡೀಮ್ಡ್ ವಿಶ್ವವಿದ್ಯಾಲಯ ಸಂಸ್ಥೆಗಳಲ್ಲಿ ಪ್ರವೇಶ ವಿಧಾನ.-** (1) ವೃತ್ತಿ ಶಿಕ್ಷಣ ವ್ಯಾಸಂಗ ಕ್ರಮಗಳಿಗೆ ಪ್ರವೇಶವನ್ನು ನೀಡುವಲ್ಲಿ ವಿಶ್ವವಿದ್ಯಾಲಯ ಅನುದಾನ ಆಯೋಗದ ವಿನಿಯಮಗಳನ್ನು ಅನುಸರಿಸುವುದಕ್ಕೆ ತಪ್ಪಿದ ಡೀಮ್ಡ್ ವಿಶ್ವವಿದ್ಯಾಲಯದ ಸಂಸ್ಥೆಯ ಸಂದರ್ಭದಲ್ಲಿ, ಡೀಮ್ಡ್ ವಿಶ್ವವಿದ್ಯಾಲಯದ ಸಂಸ್ಥೆಗಳು ಅವರಲ್ಲಿನ ಸೀಟುಗಳಿಗೆ ಪ್ರವೇಶಕ್ಕಾಗಿ ಸಾಮಾನ್ಯ ಪ್ರವೇಶ ಪರೀಕ್ಷೆಯನ್ನು ನಡೆಸುವುದಕ್ಕಾಗಿ ಸಂಘಟನೆಯೊಂದನ್ನು ರಚಿಸತಕ್ಕದ್ದು ಮತ್ತು ಅಂಥ ಡೀಮ್ಡ್ ವಿಶ್ವವಿದ್ಯಾಲಯದ ಸಂಸ್ಥೆಗಳು ತಮ್ಮಲ್ಲಿನ ವೃತ್ತಿ ಶಿಕ್ಷಣ ವ್ಯಾಸಂಗ ಕ್ರಮಗಳಿಗಾಗಿ ಸಾಮಾನ್ಯ ಪ್ರವೇಶ ಪರೀಕ್ಷೆಯ ಮೂಲಕ ಪ್ರವೇಶ ನೀಡತಕ್ಕದ್ದು:

ಪರಂತು, ಡೀಮ್ಡ್ ವಿಶ್ವವಿದ್ಯಾಲಯದ ಸಂಸ್ಥೆಗಳ ಸಂಘಟನೆಯು ಇಲ್ಲದಿದ್ದಾಗ, ಡೀಮ್ಡ್ ವಿಶ್ವವಿದ್ಯಾಲಯದ ಸಂಸ್ಥೆಗಳು, ಸರ್ಕಾರಿ ಸೀಟುಗಳು, ಯಾವುದಾದರೂ ಇದ್ದಲ್ಲಿ, ಅದನ್ನು ಹೊರತುಪಡಿಸಿ, ಉಳಿದವನ್ನು ಸಾಮಾನ್ಯ ಪ್ರವೇಶ ಪರೀಕ್ಷೆಯ ಮೂಲಕ ಅಥವಾ ಅನುದಾನಿತವಲ್ಲದ ವೃತ್ತಿ ಶಿಕ್ಷಣ ಸಂಸ್ಥೆಗಳ ಸಂಘಟನೆಯ ಮೂಲಕ ತುಂಬುವ ಆಯ್ಕೆಯನ್ನು ಮಾಡಬಹುದು. ಡೀಮ್ಡ್ ವಿಶ್ವವಿದ್ಯಾಲಯ ಸಂಸ್ಥೆಯು ಅಲ್ಪಸಂಖ್ಯಾತ ಸಂಸ್ಥೆಯಾಗಿದ್ದಲ್ಲಿ, ಅದು ಅಲ್ಪಸಂಖ್ಯಾತ ಶಿಕ್ಷಣ ಸಂಸ್ಥೆಗಳ ಸಂಘಟನೆಯನ್ನು ಸೇರುವ ಆಯ್ಕೆಯನ್ನು ಮಾಡಬಹುದು ಅಥವಾ ಸಾಮಾನ್ಯ ಪ್ರವೇಶ ಪರೀಕ್ಷಾ ಸಮಿತಿಯ ಮೂಲಕ ಸೀಟುಗಳನ್ನು ತುಂಬಲು ಆಯ್ಕೆ ಮಾಡಬಹುದು.

(2) ವಿಶ್ವವಿದ್ಯಾಲಯ ಅನುದಾನ ಆಯೋಗದ ಮಾರ್ಗಸೂಚಿಗಳನ್ನು ಅನುಸರಿಸದಿರುವ ಡೀಮ್ಡ್ ವಿಶ್ವವಿದ್ಯಾಲಯದ ಅಲ್ಪಸಂಖ್ಯಾತ ಅಥವಾ ಸಂದರ್ಭಾನುಸಾರವಾಗಿ ಅಲ್ಪಸಂಖ್ಯಾತೇತರ ಸಂಸ್ಥೆಗಳು, ತಮ್ಮ ಸಂಸ್ಥೆಯ ಅಂಥ ಸಂಖ್ಯೆಯ ಸೀಟುಗಳನ್ನು, ಸಾಮಾನ್ಯ ಪ್ರವೇಶ ಪರೀಕ್ಷೆಯ ಮೂಲಕ ಮತ್ತು ಸಂಘಟನೆಯು ನಡೆಸುವ ಸಾಮಾನ್ಯ ಪ್ರವೇಶ ಪರೀಕ್ಷೆಯ ಮೂಲಕ ಹಾಗೂ ರಾಜ್ಯ ಸರ್ಕಾರವು ಅಧಿಸೂಚಿಸಬಹುದಾದಂತೆ ತುಂಬತಕ್ಕದ್ದು.

[2][ಪರಂತು, ಯಾವುದೇ ವೃತ್ತಿ ಶಿಕ್ಷಣ ಕೋರ್ಸ್‌ಗಳಿಗಾಗಿ ಭಾರತ ಸರ್ಕಾರ ಅಥವಾ ಅದರ ಏಜೆನ್ಸಿಯು ಸಾಮಾನ್ಯ ಪ್ರವೇಶ ಪರೀಕ್ಷೆಯನ್ನು ನಡೆಸಿದ ಸಂದರ್ಭದಲ್ಲಿ, ಅಂಥ ವೃತ್ತಿ ಶಿಕ್ಷಣ ಕೋರ್ಸ್‌ಗಳಿಗಾಗಿ, ಡೀಮ್ಡ್ ವಿಶ್ವವಿದ್ಯಾಲಯಗಳು ಆ ಪರೀಕ್ಷೆಯಲ್ಲಿ ಗಳಿಸಿದ ರ್‍ಯಾಂಕುಗಳ ಮೇಲೆ ಪ್ರವೇಶವನ್ನು ನೀಡತಕ್ಕದ್ದು ಆದರೆ ಅಂಥ ಡೀಮ್ಡ್ ವಿಶ್ವವಿದ್ಯಾಲಯ ಸಂಸ್ಥೆಗಳ ಪ್ರವೇಶಕ್ಕಾಗಿ ನಿಯಮಿಸಬಹುದಾದ ಅಂಥ ಏಜೆನ್ಸಿಯ ಮೂಲಕ ಮತ್ತು ಅಂಥ ವಿಧಾನದಲ್ಲಿ ಕೇಂದ್ರೀಕೃತ ಕೌನ್ಸಿಲಿಂಗ್ ಅನ್ನು ನಡೆಸತಕ್ಕದ್ದು.][2]

(3) ಡೀಮ್ಡ್ ವಿಶ್ವವಿದ್ಯಾಲಯ ಸಂಸ್ಥೆಗಳು ವಿಶ್ವವಿದ್ಯಾಲಯ ಅನುದಾನ ಆಯೋಗದ ವಿನಿಯಮಗಳನ್ನು ಅನುಸರಿಸುತ್ತಿದ್ದು ಆದರೆ ರಾಜ್ಯ ಸರ್ಕಾರದೊಂದಿಗೆ ಸಮ್ಮತಾಭಿಪ್ರಾಯದ ಒಪ್ಪಂದಕ್ಕೆ ಒಪ್ಪಿಕೊಂಡಿದ್ದಲ್ಲಿ, ಅಂಥ ಸಮ್ಮತಾಭಿಪ್ರಾಯದ ಒಪ್ಪಂದದಲ್ಲಿ ಒಪ್ಪಬಹುದಾದುದಕ್ಕೆ ಒಳಪಟ್ಟು ಅಂಥ ಸಂಸ್ಥೆಗಳು ನೀಡುವ ಅಂಥ ರಿಯಾಯಿತಿ ಮತ್ತು ವಿದ್ಯಾರ್ಥಿವೇತನದೊಂದಿಗೆ ಅಂಥ ಶುಲ್ಕದ ದರದಲ್ಲಿ ರಾಜ್ಯ ಸರ್ಕಾರವು ನಡೆಸುವ ಸಾಮಾನ್ಯ ಪ್ರವೇಶ ಪರೀಕ್ಷಾ ಸಮಿತಿಯ ಮೂಲಕ ತುಂಬಬೇಕಾದ ಪದವಿ ಮತ್ತು ಸ್ನಾತಕೋತ್ತರ ವೈದ್ಯಕೀಯ ವ್ಯಾಸಂಗ ಕ್ರಮದಲ್ಲಿ ಎರಡರಲ್ಲೂ ಪ್ರವೇಶಾವಕಾಶವಿರುವ ಒಟ್ಟು ಸೀಟುಗಳ ಶೇಕಡ ಇಪ್ಪತ್ತೈದಕ್ಕಿಂತ ಕಡಿಮೆಯಾಗಿರತಕ್ಕದ್ದಲ್ಲ ಮತ್ತು ಸಂಬಂಧಪಟ್ಟ ಸಂಸ್ಥೆಗಳು ಅರ್ಹತೆಯನ್ನು ಅನುಸರಿಸುವ ಮೂಲಕ ಅನಿವಾಸಿ ಭಾರತೀಯರು/ಮ್ಯಾನೇಜ್‌ಮೆಂಟ್ ಕೋಟಾದಿಂದ ತುಂಬಬೇಕಾದ ಸೀಟುಗಳು ಪ್ರವೇಶಾವಕಾಶವಿರುವ ಒಟ್ಟು ಸೀಟುಗಳ ಶೇಕಡಾ ಇಪ್ಪತ್ತೈದಕ್ಕಿಂತ ಹೆಚ್ಚಿರತಕ್ಕದ್ದಲ್ಲ. ಉಳಿದ ಶೇಕಡಾ ಐವತ್ತು, ಡೀಮ್ಡ್ ವಿಶ್ವವಿದ್ಯಾಲಯ ಸಂಸ್ಥೆಗಳು ನಡೆಸುವ ಪ್ರವೇಶ ಪರೀಕ್ಷೆಯ ಮೂಲಕ (ಪ್ರಸ್ತುತ ಅನುಸರಿಸುತ್ತಿರುವಂತೆ) ತುಂಬಬೇಕಾದ ಸಂಸ್ಥೆಯ ಸೀಟುಗಳಾಗಿರತಕ್ಕದ್ದು.][1]

[2][ಮತ್ತು ಪರಂತು, ಭಾರತ ಸರ್ಕಾರ ಅಥವಾ ಅದರ ಏಜೆನ್ಸಿಯು ವೃತ್ತಿ ಶಿಕ್ಷಣದ ಯಾವುದೇ ಸಾಮಾನ್ಯ ಪ್ರವೇಶ ಪರೀಕ್ಷೆಯನ್ನು ನಡೆಸಿದಾಗ, ಸೀಟುಗಳ ಹಂಚಿಕೆಗಾಗಿ ಕೇಂದ್ರೀಕೃತ ಕೌನ್ಸಿಲಿಂಗ್ ಅನ್ನು ಸಾಮಾನ್ಯ ಪ್ರವೇಶ ಪರೀಕ್ಷೆಯಲ್ಲಿ ಪಡೆದ ಮೆರಿಟ್ ಆಧಾರದ ಮೇಲೆ ನಿಯಮಿಸಬಹುದಾದ ಅಂಥ ಏಜೆನ್ಸಿಯು ನಡೆಸತಕ್ಕದ್ದು. ಡೀಮ್ಡ್ ವಿಶ್ವವಿದ್ಯಾಲಯಗಳ ಸಂಘವನ್ನು ರಚಿಸಲು ಡೀಮ್ಡ್ ವಿಶ್ವವಿದ್ಯಾಲಯಗಳು ವಿಫಲವಾದ ಸಂದರ್ಭದಲ್ಲಿ, ನಿಯಮಿಸಬಹುದಾದ ಅಂಥ ಏಜೆನ್ಸಿಯ ಮೂಲಕ ಮತ್ತು ಅಂಥ ವಿಧಾನದಲ್ಲಿ ಕೌನ್ಸಿಲಿಂಗ್ ಅನ್ನು ನಡೆಸತಕ್ಕದ್ದು][2]

1. 2015ರ ಅಧಿನಿಯಮ ಸಂಖ್ಯೆ 39ರ ಮೂಲಕ ದಿನಾಂಕ: 11.09.2015ರಿಂದ ಸೇರಿಸಲಾಗಿದೆ.
2. 2017ರ ಅಧಿನಿಯಮ ಸಂಖ್ಯೆ 22ರ ಮೂಲಕ ದಿನಾಂಕ: 20.04.2017ರಿಂದ ಸೇರಿಸಲಾಗಿದೆ.

**5. ಪ್ರವೇಶ ಮೇಲ್ವಿಚಾರಣಾ ಸಮಿತಿ.–** (1) ಈ ಮುಂದಿನವರನ್ನು ಒಳಗೊಂಡ ಒಂದು ಪ್ರವೇಶ ಮೇಲ್ವಿಚಾರಣಾ ಸಮಿತಿಯು ಇರತಕ್ಕದ್ದು,–

| | | |
|---|---|---|
| (ಎ) | ಕರ್ನಾಟಕ ಉಚ್ಚ ನ್ಯಾಯಾಲಯದ ಮುಖ್ಯನ್ಯಾಯಾಧೀಶರು ನಾಮನಿರ್ದೇಶಿಸಿದ, ಕರ್ನಾಟಕ ಉಚ್ಚನ್ಯಾಯಾಲಯದ ನಿವೃತ್ತ ನ್ಯಾಯಾಧೀಶರು | ಅಧ್ಯಕ್ಷರು |
| (ಬಿ) | ವ್ಯಾಸಂಗ ವಿಷಯಗಳನ್ನು ಅವಲಂಬಿಸಿ ಸಂದರ್ಭಾನುಸಾರ ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾನಿಲಯದ ಅಥವಾ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾನಿಲಯದ ಕುಲಪತಿ | ಸದಸ್ಯರು |
| (ಸಿ) | ಅಧ್ಯಕ್ಷರು ನಾಮನಿರ್ದೇಶಿಸಿದ, ಸಂಬಂಧಪಟ್ಟ ಶಿಕ್ಷಣ ಕ್ಷೇತ್ರದಲ್ಲಿ ಪ್ರಸಿದ್ಧರಾದ ಒಬ್ಬ ವ್ಯಕ್ತಿ | ಸದಸ್ಯರು |
| (ಡಿ) | ಅಧ್ಯಕ್ಷರು ನಾಮನಿರ್ದೇಶಿಸಿದ, ಸಂದರ್ಭಾನುಸಾರ ಖ್ಯಾತ ವೈದ್ಯರಾಗಿರುವ ಅಥವಾ ಖ್ಯಾತ ಇಂಜಿನಿಯರ್ ಆಗಿರುವ ಒಬ್ಬ ವ್ಯಕ್ತಿ (ವ್ಯಾಸಂಗ ವಿಷಯ ಅವಲಂಬಿಸಿ) | ಸದಸ್ಯರು |
| (ಇ) | ವೈದ್ಯಶಿಕ್ಷಣ ಅಥವಾ ಸಂದರ್ಭಾನುಸಾರ ಉನ್ನತ ಶಿಕ್ಷಣದ ಪ್ರಭಾರದಲ್ಲಿರುವ ಸರ್ಕಾರದ ಕಾರ್ಯದರ್ಶಿ (ವ್ಯಾಸಂಗ ವಿಷಯವನ್ನು ಅವಲಂಬಿಸಿ) | ಸದಸ್ಯ ಕಾರ್ಯದರ್ಶಿ |

(2) ಯಾವುದೇ ಖಾಸಗಿಯಾದ ಅನುದಾನಿತ ಅಥವಾ ಅನುದಾನಿತವಲ್ಲದ ವೃತ್ತಿಶಿಕ್ಷಣ ಸಂಸ್ಥೆಯೊಡನೆ ಸಂಬಂಧಹೊಂದಿರುವ ಯಾವ ವ್ಯಕ್ತಿಯೂ, ಪ್ರವೇಶ ಮೇಲ್ವಿಚಾರಣಾ ಸಮಿತಿಯ ಸದಸ್ಯನಾಗಿರುವುದಕ್ಕೆ ಅರ್ಹನಾಗಿರತಕ್ಕದ್ದಲ್ಲ.

(3) ನಾಮನಿರ್ದೇಶಿಸಲು ಸಕ್ಷಮವಾಗಿರುವ ಪ್ರಾಧಿಕಾರದ ಇಚ್ಛೆಗೊಳಪಟ್ಟು ಸಮಿತಿಯ ನಾಮನಿರ್ದೇಶಿತ ಸದಸ್ಯರು ತಮ್ಮ ನಾಮನಿರ್ದೇಶನದ ದಿನಾಂಕದಿಂದ ಎರಡು ವರ್ಷಗಳ ಅವಧಿಯವರೆಗೆ ಅಧಿಕಾರ ಸ್ಥಾನದಲ್ಲಿರತಕ್ಕದ್ದು ಮತ್ತು ಯಾವುದೇ ಕಾರಣಕ್ಕಾಗಿ ಅದಕ್ಕೆ ಮೊದಲೇ ಯಾವುದೇ ಖಾಲಿಸ್ಥಾನ ಉಂಟಾದ ಸಂದರ್ಭದಲ್ಲಿ, ಅಂಥ ಖಾಲಿಸ್ಥಾನವನ್ನು ಉಳಿದ ಅವಧಿಗಾಗಿ, ಮೇಲೆ ನಿರ್ದಿಷ್ಟಪಡಿಸಿದ ವಿಧಾನದಲ್ಲಿ ತುಂಬತಕ್ಕದ್ದು. ಅಧಿಕಾರೇತರ ಸದಸ್ಯರು, ನಿಯಮಿಸಬಹುದಾದಂಥ ದರದಲ್ಲಿ ಉಪವೇಶನ ಶುಲ್ಕ ಮತ್ತು ಪ್ರಯಾಣ ಭತ್ಯೆಗಳನ್ನು ಪಡೆಯಲು ಅರ್ಹರಾಗಿರತಕ್ಕದ್ದು.

(4) ಪ್ರವೇಶ ಮೇಲ್ವಿಚಾರಣಾ ಸಮಿತಿಯ ಯಾವುದೇ ಕಾರ್ಯ ಅಥವಾ ವ್ಯವಹರಣೆಯು, ಸಮಿತಿಯಲ್ಲಿ ಯಾವುದೇ ಖಾಲಿ ಸ್ಥಾನ ಉಂಟಾದ ಕಾರಣ ಮಾತ್ರದಿಂದಲೇ ಅಥವಾ ಅದರ ರಚನೆಯಲ್ಲಿಯ ಯಾವುದೇ ದೋಷದಿಂದಲೇ ಅಸಿಂಧುವಾಗುತ್ತದೆಂದು ಭಾವಿಸತಕ್ಕದ್ದಲ್ಲ.

(5) ಪ್ರವೇಶ ಮೇಲ್ವಿಚಾರಣಾ ಸಮಿತಿಯ ಒಬ್ಬ ಸದಸ್ಯನು, ರಾಜ್ಯ ಸರ್ಕಾರದ ಅಭಿಪ್ರಾಯದಲ್ಲಿ ಅಂಥ ಸದಸ್ಯನಾದವನಿಗೆ ತಕ್ಕದಾಗಿರದಂಥ ಯಾವುದೇ ಕೃತ್ಯವನ್ನು ಮಾಡಿದರೆ ಅವನ ಸದಸ್ಯತ್ವ ನಿಂತುಹೋಗತಕ್ಕದ್ದು:

ಪರಂತು, ಅಂಥ ಯಾವೊಬ್ಬ ಸದಸ್ಯನಿಗೂ, ಆತನು ತನ್ನ ಅಹವಾಲನ್ನು ಹೇಳಿಕೊಳ್ಳಲು ಅವಕಾಶವನ್ನು ಕೊಟ್ಟಹೊರತು ಆತನನ್ನು ತೆಗೆದುಹಾಕತಕ್ಕದ್ದಲ್ಲ.

(6) ಅಧ್ಯಕ್ಷರು, ಪ್ರವೇಶ ಮೇಲ್ವಿಚಾರಣಾ ಸಮಿತಿಯ ಸಭೆಯ ಅಧ್ಯಕ್ಷತೆ ವಹಿಸತಕ್ಕದ್ದು ಮತ್ತು ಸಮಿತಿಯು, ತಾನು ಸೂಕ್ತವೆಂದು ಭಾವಿಸುವಂಥ ತನ್ನದೇ ಆದ ಕಾರ್ಯವಿಧಾನವನ್ನು ಅಳವಡಿಸಿಕೊಳ್ಳಬಹುದು.

(7) [1][ಅಲ್ಪಸಂಖ್ಯಾತೇತರ ಅಥವಾ ಸಂದರ್ಭಾನುಸಾರವಾಗಿ ಅಲ್ಪಸಂಖ್ಯಾತ][1] ಅನುದಾನಿತವಲ್ಲದ ಖಾಸಗಿ ವೃತ್ತಿ ಶಿಕ್ಷಣ ಸಂಸ್ಥೆಗಳ ಸಂಘವು ಸಾಮಾನ್ಯ ಪ್ರವೇಶ ಪರೀಕ್ಷೆಯನ್ನು ನಡೆಸಲು [2][ಅನುಸರಿಸಬೇಕಾದ ಗುಣಮಟ್ಟಗಳನ್ನು ಮತ್ತು ಕಾರ್ಯವಿಧಾನವನ್ನು ರಾಜ್ಯ ಸರ್ಕಾರವು ನಿಯಮಿಸಬಹುದಾದಂತೆ ಪ್ರವೇಶ ಮೇಲ್ವಿಚಾರಣಾ ಸಮಿತಿಯು ಜಾರಿಗೊಳಿಸತಕ್ಕದ್ದು.][2] ಹಾಗೂ ಸಾಮಾನ್ಯ ಪ್ರವೇಶ ಪರೀಕ್ಷೆಯ ಅಧೀಕ್ಷಣೆ ಮತ್ತು ಮೇಲ್ವಿಚಾರಣೆಯನ್ನು ಮಾಡತಕ್ಕದ್ದು. [1][ಅಲ್ಪಸಂಖ್ಯಾತೇತರ ಅಥವಾ ಸಂದರ್ಭಾನುಸಾರವಾಗಿ ಅಲ್ಪಸಂಖ್ಯಾತ][1] ಅನುದಾನಿತವಲ್ಲದ ಖಾಸಗಿ ವೃತ್ತಿ ಶಿಕ್ಷಣ ಸಂಸ್ಥೆಗಳ ಸಂಘವು ಕೇಂದ್ರೀಯ ಕೌನ್ಸಿಲಿಂಗ್ ಮತ್ತು ಪ್ರವೇಶಗಳನ್ನು ಮಾಡುವಾಗ ಅವನ್ನು ನ್ಯಾಯಯುತವಾಗಿ, ಪಾರದರ್ಶಕವಾಗಿ ಮತ್ತು ಶೋಷಣೆಯಾಗದಂಥ ರೀತಿಯಲ್ಲಿ ನಡೆಸುವಂತೆ ನೋಡಿಕೊಳ್ಳುವ ಉದ್ದೇಶದಿಂದ ಪ್ರವೇಶ ಮೇಲ್ವಿಚಾರಣಾ ಸಮಿತಿಯು ಅವುಗಳ ಅಧೀಕ್ಷಣೆ ಮತ್ತು ಮೇಲ್ವಿಚಾರಣೆಯನ್ನೂ ಮಾಡತಕ್ಕದ್ದು. ಇದು ಸುಗಮವಾಗಿ ಆಗುವಂತೆ ನೋಡಿಕೊಳ್ಳುವ ಸಲುವಾಗಿ ರಾಜ್ಯ

ಸರ್ಕಾರವು ಪ್ರವೇಶ ಮೇಲ್ವಿಚಾರಣಾ ಸಮಿತಿಗೆ ಅವಶ್ಯವಿರುವಷ್ಟು ಸಂಖ್ಯೆಯಲ್ಲಿ ಅಧಿಕಾರಿಗಳನ್ನು ಮತ್ತು ನೌಕರರುಗಳನ್ನು ಒದಗಿಸತಕ್ಕದ್ದು.

(8) ಪ್ರವೇಶ ಮೇಲ್ವಿಚಾರಣಾ ಸಮಿತಿಯು ರೂಪಿಸಿದ ಕಾರ್ಯವಿಧಾನವನ್ನು ಉಲ್ಲಂಘಿಸಿ ಮಾಡಿದ ಪ್ರವೇಶಗಳ ಸಂಬಂಧದಲ್ಲಿ ಬಂದ ದೂರುಗಳ ವಿಚಾರಣೆಯನ್ನು ಸಹ ಪ್ರವೇಶ ಮೇಲ್ವಿಚಾರಣಾ ಸಮಿತಿಯು ನಡೆಸಬಹುದು. ಪ್ರವೇಶ ಮೇಲ್ವಿಚಾರಣಾ ಸಮಿತಿಯು, ಸಂಬಂಧಪಟ್ಟ ಆಡಳಿತ ಮಂಡಳಿಯಿಂದ ಸಾಕ್ಷ್ಯವನ್ನು ಮತ್ತು ವಿವರಣೆಯನ್ನು ಪಡೆದುಕೊಂಡ ತರುವಾಯ, ಪ್ರವೇಶಕ್ಕಾಗಿ ನಿಯಮಿಸಲಾದ ಕಾರ್ಯವಿಧಾನವನ್ನು ಉಲ್ಲಂಘಿಸಲಾಗಿದೆ ಎಂಬ ಅಥವಾ ಅನುದಾನಿತವಲ್ಲದ ಕಾಲೇಜುಗಳಿಂದ ಲೋಪದೋಷಗಳಾಗಿವೆ ಎಂಬ ತೀರ್ಮಾನಕ್ಕೆ ಬಂದರೆ, ಅದು ಸರ್ಕಾರಕ್ಕೆ ಸೂಕ್ತ ಶಿಫಾರಸ್ಸುಗಳನ್ನು ಮಾಡತಕ್ಕದ್ದು – ಮತ್ತು ರಾಜ್ಯ ಸರ್ಕಾರವು, ಪ್ರತಿಯೊಂದು ಉಲ್ಲಂಘನೆಯ ಸಂದರ್ಭದಲ್ಲಿ 10 ಲಕ್ಷ ರೂಪಾಯಿಗಳ ವರೆಗೆ ಜುಲ್ಮಾನೆಯನ್ನು ವಿಧಿಸಲು ಮತ್ತು ಸಂಗ್ರಹಿಸಲು ಮತ್ತು ತಾನು ಸೂಕ್ತವೆಂದು ಭಾವಿಸಬಹುದಾದಂಥ ಇತರ ಯಾವುದೇ ಕ್ರಮವನ್ನು ಕೈಗೊಳ್ಳಲು ಸಂಬಂಧಪಟ್ಟ ವಿಶ್ವವಿದ್ಯಾನಿಲಯಕ್ಕೆ ನಿರ್ದೇಶಿಸಬಹುದು. ಅಂಥ ಜುಲ್ಮಾನೆಯನ್ನು ವಿಧಿಸುವುದು ವಿಶ್ವವಿದ್ಯಾನಿಲಯಕ್ಕೆ ಕಾನೂನು ಬದ್ಧವಾಗಿರತಕ್ಕದ್ದು. ಪ್ರವೇಶ ಮೇಲ್ವಿಚಾರಣಾ ಸಮಿತಿಯು ಅಂಥ ಪ್ರವೇಶಗಳನ್ನು, ಮೆರಿಟ್ ಅನ್ನು ಕಡೆಗಣಿಸಿ ಮಾಡಲಾಗಿರುವುದರಿಂದ ಅಸಿಂಧುವೆಂದು ಸಹ ಘೋಷಿಸಬಹುದು ಮತ್ತು ಅಂಥ ಪ್ರಕರಣದಲ್ಲಿ ಸಂಬಂಧಪಟ್ಟ ವಿಶ್ವವಿದ್ಯಾನಿಲಯವು, ಅಂಥ ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಲು ಅನುಮತಿ ನೀಡತಕ್ಕದ್ದಲ್ಲ. ವಿಶ್ವವಿದ್ಯಾನಿಲಯವು, ಈ ಅಧಿನಿಯಮದ ಉಪಬಂಧಗಳನ್ನು ಉಲ್ಲಂಘಿಸಿ ಅಂಥ ಸಂಸ್ಥೆಗಳಿಗೆ ಮಾಡಲಾದ ಎಲ್ಲ ಅಥವಾ ಯಾವುವೇ ಪ್ರವೇಶಗಳನ್ನು ಅನುಮೋದಿಸತಕ್ಕದ್ದಲ್ಲ.

(9) ಪ್ರವೇಶ ಮೇಲ್ವಿಚಾರಣಾ ಸಮಿತಿಯು, ತನ್ನ ಪ್ರಕಾರ್ಯಗಳನ್ನು ನಿರ್ವಹಿಸುವಲ್ಲಿ ಉದ್ಭವಿಸಬಹುದಾದ ಎಲ್ಲಾ ವಿಷಯಗಳ ಬಗ್ಗೆ ತನ್ನದೇ ಆದ ಪ್ರಕ್ರಿಯೆಯನ್ನು ವಿನಿಯಮಿಸಿಕೊಳ್ಳುವ ಅಧಿಕಾರ ಹೊಂದಿರುತ್ತದೆ ಮತ್ತು ಈ ಅಧಿನಿಯಮದ ಅಡಿಯಲ್ಲಿ ಯಾವುದೇ ವಿಚಾರಣೆ ಮಾಡುವ ಉದ್ದೇಶಕ್ಕಾಗಿ, ಈ ಮುಂದಿನ ವಿಷಯಗಳಿಗೆ ಸಂಬಂಧಿಸಿದಂತೆ, ಸಿವಿಲ್ ಪ್ರಕ್ರಿಯಾ ಸಂಹಿತೆ, 1908ರ ಅಡಿಯಲ್ಲಿ ಒಂದು ಸಿವಿಲ್ ನ್ಯಾಯಾಲಯವು ದಾವೆಯ ಅಧಿವಿಚಾರಣೆಗೆ ಹೊಂದಿರುವ ಎಲ್ಲಾ ಅಧಿಕಾರಗಳನ್ನು ಹೊಂದಿರತಕ್ಕದ್ದು, ಎಂದರೆ:–

(ಎ) ಸಾಕ್ಷಿದಾರನಿಗೆ ಸಮನು ನೀಡುವುದು ಮತ್ತು ಹಾಜರಾತಿಗೆ ಒತ್ತಾಯಿಸುವುದು ಮತ್ತು ಪ್ರಮಾಣವಚನದ ಮೇಲೆ ಅವನ ವಿಚಾರಣೆ ನಡೆಸುವುದು;

(ಬಿ) ಯಾವುದೇ ದಸ್ತಾವೇಜನ್ನು ಪತ್ತೆಮಾಡುವುದು ಮತ್ತು ಹಾಜರುಪಡಿಸುವುದು;

(ಸಿ) ಅಫೀದಾವಿತ್ತಿನ ಮೇಲೆ ಸಾಕ್ಷ್ಯಗಳನ್ನು ಸ್ವೀಕರಿಸುವುದು;

(ಡಿ) ಸಾಕ್ಷಿದಾರರನ್ನು ವಿಚಾರಣೆ ಮಾಡುವುದಕ್ಕಾಗಿ ಯಾವುದೇ ಕಮೀಷನನ್ನು ಹೊರಡಿಸುವುದು.

(10) ಪ್ರವೇಶ ಮೇಲ್ವಿಚಾರಣಾ ಸಮಿತಿಯು, ಈ ಅಧಿನಿಯಮದ ಯಾವುದೇ ಉಪಬಂಧಗಳನ್ನು ಯಾವುದೇ ಸಂಸ್ಥೆಯು ಉಲ್ಲಂಘಿಸಿದೆ ಎಂದು ಮನಗಂಡರೆ ಅದು ಯುಕ್ತ ವಿಶ್ವವಿದ್ಯಾನಿಲಯಕ್ಕೆ ಅಥವಾ ಶಾಸನಬದ್ಧ ನಿಕಾಯಕ್ಕೆ, ಅಂಥ ಸಂಸ್ಥೆಯ ಸಂಯೋಜನೆ ಅಥವಾ ಮನ್ನಣೆಯನ್ನು ಹಿಂತೆಗೆದುಕೊಳ್ಳಬೇಕೆಂದು ಅಥವಾ ತಾನು ಸೂಕ್ತವೆಂದು ಭಾವಿಸಬಹುದಾದಂಥ ಯಾವುದೇ ಇತರೆ ಕ್ರಮವನ್ನು ಕೈಗೊಳ್ಳಲು ಶಿಫಾರಸ್ಸು ಮಾಡಬಹುದು.

(11) ಪ್ರವೇಶ ಮೇಲ್ವಿಚಾರಣಾ ಸಮಿತಿ ಅಥವಾ ಅದರಿಂದ ಅಧಿಕಾರ ಪಡೆದ ಯಾವೊಬ್ಬ ಅಧಿಕಾರಿಯು, [1][ಅಲ್ಪಸಂಖ್ಯಾತೇತರ ಅಥವಾ ಸಂದರ್ಭಾನುಸಾರವಾಗಿ ಅಲ್ಪಸಂಖ್ಯಾತ ಅನುದಾನಿತವಲ್ಲದ][1] ಖಾಸಗಿ ವೃತ್ತಿಶಿಕ್ಷಣ ಸಂಸ್ಥೆಗಳ, ಸಂಘಗಳ ಮೂಲಕ ನಡೆಸಲಾಗುವ ಪ್ರವೇಶ ಪ್ರಕ್ರಿಯೆಗಳನ್ನು ಯಾವುದೇ ಹಂತದಲ್ಲಿ ಪರಿಶೀಲಿಸುವ ಅಧಿಕಾರ ಹೊಂದಿರತಕ್ಕದ್ದು. ಅಂಥ ಪರಿಶೀಲನೆ ನಡೆಸಿದಾಗಲೆಲ್ಲಾ, ಪ್ರವೇಶಗಳ ಮೇಲ್ವಿಚಾರಣಾ ಸಮಿತಿಯು, [1][ಅಲ್ಪಸಂಖ್ಯಾತೇತರ ಅಥವಾ ಸಂದರ್ಭಾನುಸಾರವಾಗಿ ಅಲ್ಪಸಂಖ್ಯಾತ ಅನುದಾನಿತವಲ್ಲದ][1] ಖಾಸಗಿ ವೃತ್ತಿಶಿಕ್ಷಣ ಸಂಸ್ಥೆಗಳ ಸಂಘವು ನಡೆಸಿದ ಪ್ರವೇಶ ಪ್ರಕ್ರಿಯೆಯು ಅನ್ಯಾಯವಾದದ್ದು, ಪಾರದರ್ಶಕವಲ್ಲದ್ದು ಮತ್ತು ಶೋಷಕವಾದದ್ದು ಅಥವಾ ಪ್ರವೇಶ ಮೇಲ್ವಿಚಾರಣಾ ಸಮಿತಿಯು ನಿರ್ದಿಷ್ಟಪಡಿಸಿದ ಪ್ರಕಾರ್ಯದ ಉಲ್ಲಂಘನೆ ಮಾಡಿರುವಂಥದ್ದು ಎಂಬ ಅಭಿಪ್ರಾಯಕ್ಕೆ ಬಂದರೆ ಅದು, ಅಹವಾಲನ್ನು ಹೇಳಿಕೊಳ್ಳಲು ಸೂಕ್ತ ಅವಕಾಶವನ್ನು ಕೊಟ್ಟ ತರುವಾಯ ಅಂಥ ಕ್ರಮವು ಅನ್ಯಾಯವಾದದ್ದು ಅಥವಾ ಪಾರದರ್ಶಕವಲ್ಲದ್ದು ಅಥವಾ ಶೋಷಕವಾದದ್ದು ಹಾಗಾಗಿ ಅಸಿಂಧುವಾಗಿರುವುದಾಗಿ ಘೋಷಿಸಬಹುದು.

[1][ಪರಂತು, ಸರ್ಕಾರವು, ದೂರುಗಳನ್ನು ಸ್ವೀಕರಿಸಿದಾಗ ಅಥವಾ ಯಾವುದೇ ಇತರ ಏಜೆನ್ಸಿಯ ಮೂಲಕ ತನಿಖೆಯನ್ನು ನಡೆಸಿದಾಗ, ಖಾಸಗಿ ವೃತ್ತಿ ಶಿಕ್ಷಣ ಸಂಸ್ಥೆಗಳು ಅಥವಾ ಪ್ರತ್ಯೇಕ ಸಂಸ್ಥೆಯು ನ್ಯಾಯ ಸಮ್ಮತ, ಪಾರದರ್ಶಕತೆ ಮತ್ತು ಶೋಷಣೆ ಮಾಡದಿರುವ ತ್ರಿವಿಧ ಪರೀಕ್ಷೆಯನ್ನು ಉಲ್ಲಂಘಿಸಿ ಪ್ರವೇಶವನ್ನು ನೀಡುತ್ತಿದೆ ಎಂದು ಅಭಿಪ್ರಾಯಪಟ್ಟಲ್ಲಿ ಮತ್ತು ಅದು ಮೊದಲನೋಟಕ್ಕೆ ಸರಿ ಎಂದೆನಿಸಿದರೆ, ಅಧಿಸೂಚನೆಯ ಮೂಲಕ, ಖಾಸಗಿ ಶೈಕ್ಷಣಿಕ ಸಂಸ್ಥೆಗಳ ಸಂಘವು ಅಥವಾ ಅಂಥ ಪ್ರತ್ಯೇಕ ಸಂಸ್ಥೆಯು ಅನುಸರಿಸುತ್ತಿರುವ ಪ್ರಕ್ರಿಯೆಯು ನ್ಯಾಯಸಮ್ಮತವಾದುದಲ್ಲ, ಪಾರದರ್ಶಕತೆಯಿಂದ ಕೂಡಿರುವುದಿಲ್ಲ ಅಥವಾ ಶೋಷಣೆ ಮಾಡುತ್ತಿದೆ ಆದ್ದರಿಂದ ಇದು ಅಸಿಂಧು ಎಂದು ಘೋಷಿಸಬಹುದು ಮತ್ತು ಅಂಥ ಸಂಘದ ಅಥವಾ ಪ್ರತ್ಯೇಕ ಸಂಸ್ಥೆಯ ಎಲ್ಲಾ ಸೀಟುಗಳನ್ನು, ಸಾಮಾನ್ಯ ಪ್ರವೇಶ ಪರೀಕ್ಷಾ ಸಮಿತಿಯ ಮೂಲಕ, ಪಾರದರ್ಶಕವಾದ ರೀತಿಯಲ್ಲಿ, ಖಾಸಗಿ ವೃತ್ತಿ ಶಿಕ್ಷಣ ಸಂಸ್ಥೆಗಳ ಸಂಘಗಳು, ಖಾಸಗಿ ವಿಶ್ವವಿದ್ಯಾಲಯಗಳು ಅಥವಾ ಸಂದರ್ಭಾನುಸಾರವಾಗಿ ಡೀಮ್ಡ್ ವಿಶ್ವವಿದ್ಯಾಲಯಗಳ ಪ್ರತಿನಿಧಿಗಳೊಂದಿಗೆ, ನಿಕಟ ಮೇಲ್ವಿಚಾರಣೆಯಲ್ಲಿ ತುಂಬತಕ್ಕದ್ದೆಂದು ನಿರ್ದೇಶಿಸಬಹುದು:

ಮತ್ತು ಪರಂತು, ಅಂಥ ಯಾವುದೇ ಘೋಷಣೆಯನ್ನು ಅಂಥ ಸಂಘ ಅಥವಾ ಸಂಸ್ಥೆಗೆ ಪೂರ್ವನೋಟಿಸನ್ನು ನೀಡದೇ ಮಾಡತಕ್ಕದ್ದಲ್ಲ.][1]

(12) (11)ನೇ ಉಪ-ಪ್ರಕರಣದ ಅಡಿಯಲ್ಲಿ ಅಂಥ ಘೋಷಣೆ ಮಾಡಿದ ಮೇಲೆ ಖಾಸಗಿ ಅನುದಾನಿತವಲ್ಲದ ಸಂಸ್ಥೆಗಳಿಗಾಗಿ ಪ್ರವೇಶ ಪ್ರಕ್ರಿಯೆಯನ್ನು ಅದೇ ಅರ್ಜಿದಾರರಿಗಾಗಿ ರಾಜ್ಯ ಸಾಮಾನ್ಯ ಪ್ರವೇಶ ಪರೀಕ್ಷಾ ಸಮಿತಿಯು ನಡೆಸತಕ್ಕದ್ದು. ಈ ಸಂಬಂಧದಲ್ಲಿ ರಾಜ್ಯ ಸಾಮಾನ್ಯ ಪ್ರವೇಶ ಪರೀಕ್ಷಾ ಸಮಿತಿಯು ಭರಿಸಿದ ವೆಚ್ಚವನ್ನು ಕೌನ್ಸಿಲಿಂಗ್ ಮೂಲಕ ಸೀಟುಗಳ ಹಂಚಿಕೆ ಸಂದರ್ಭದಲ್ಲಿ ಆ ಸಂಘದಿಂದ ಅಥವಾ ಭೂ-ಕಂದಾಯದ ಬಾಕಿಗಳೆಂಬಂತೆ ವಸೂಲಿ ಮಾಡತಕ್ಕದ್ದು.

1. 2015ರ ಅಧಿನಿಯಮ ಸಂಖ್ಯೆ 39ರ ಮೂಲಕ ದಿನಾಂಕ: 11.09.2015ರಿಂದ, ಸೇರಿಸಲಾಗಿದೆ.
2. 2017ರ ಅಧಿನಿಯಮ ಸಂಖ್ಯೆ 22ರ ಮೂಲಕ ದಿನಾಂಕ: 20.04.2017ರಿಂದ ಪ್ರತಿಯೋಜಿಸಲಾಗಿದೆ.

**6. ಶುಲ್ಕ ನಿಯಂತ್ರಣ ಸಮಿತಿ.-** (1) ಖಾಸಗಿ ಅನುದಾನರಹಿತ ಸಂಸ್ಥೆಗಳಲ್ಲಿ ವೃತ್ತಿಶಿಕ್ಷಣ ವ್ಯಾಸಂಗ ಕ್ರಮಗಳಿಗೆ ಪ್ರವೇಶಕ್ಕಾಗಿ ಶುಲ್ಕ ನಿಗದಿಪಡಿಸುವುದಕ್ಕಾಗಿ 'ಶುಲ್ಕ ನಿಯಂತ್ರಣ ಸಮಿತಿ' ಎಂದು ಕರೆಯಲಾಗುವ ಸಮಿತಿಯೊಂದು ಇರತಕ್ಕದ್ದು. ಅದು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು,-

| | | |
|---|---|---|
| (ಎ) | ಕರ್ನಾಟಕ ಉಚ್ಚ ನ್ಯಾಯಾಲಯದ ಮುಖ್ಯ ನ್ಯಾಯಾಧೀಶರಿಂದ ನಾಮನಿರ್ದೇಶಿತರಾದ ಕರ್ನಾಟಕ ಉಚ್ಚನ್ಯಾಯಾಲಯದ ಒಬ್ಬ ನಿವೃತ್ತ ನ್ಯಾಯಾಧೀಶರು | ಅಧ್ಯಕ್ಷರು |
| (ಬಿ) | ವ್ಯಾಸಂಗಕ್ರಮಕ್ಕನುಸಾರವಾಗಿ ಸಂದರ್ಭಾನುಸಾರ ಭಾರತದ ವೈದ್ಯಕೀಯ ಪರಿಷತ್ತಿನ ಅಥವಾ ಅಖಿಲ ಭಾರತ ತಾಂತ್ರಿಕ ಶಿಕ್ಷಣ ಪರಿಷತ್ತಿನ ಒಬ್ಬ ಪ್ರತಿನಿಧಿ | ಸದಸ್ಯ |
| (ಸಿ) | ಅಧ್ಯಕ್ಷರಿಂದ ನಾಮ ನಿರ್ದೇಶಿತನಾದ ಒಬ್ಬ ಖ್ಯಾತ ವ್ಯಕ್ತಿ | ಸದಸ್ಯ |
| (ಡಿ) | ಅಧ್ಯಕ್ಷರಿಂದ ನಾಮನಿರ್ದೇಶಿತನಾದ ಒಬ್ಬ ಖ್ಯಾತ ಚಾರ್ಟರ್ಡ್ ಅಕೌಂಟೆಂಟ್ | ಸದಸ್ಯ |
| (ಇ) | ವ್ಯಾಸಂಗಕ್ರಮಕ್ಕನುಸಾರವಾಗಿ ಸಂದರ್ಭಾನುಸಾರ ವೈದ್ಯಕೀಯ ಶಿಕ್ಷಣ ಅಥವಾ ಉನ್ನತ ಶಿಕ್ಷಣದ ಪ್ರಭಾರದಲ್ಲಿರುವ ಸರ್ಕಾರದ ಕಾರ್ಯದರ್ಶಿ | ಸದಸ್ಯ ಕಾರ್ಯದರ್ಶಿ |

(2) ಶುಲ್ಕ ನಿಯಂತ್ರಣ ಸಮಿತಿಯು,-

(i) ಶೈಕ್ಷಣಿಕ ವರ್ಷದ ಪ್ರಾರಂಭದ ಬಹುಮುಂಚಿತವಾಗಿಯೇ ಅಂದರೆ, ಹಿಂದಿನ ಶೈಕ್ಷಣಿಕ ವರ್ಷದ ಡಿಸೆಂಬರ್ 31 ರೊಳಗೆ ಸಂಬಂಧಪಟ್ಟ ಎಲ್ಲಾ ದಸ್ತಾವೇಜುಗಳನ್ನು ಮತ್ತು ಲೆಕ್ಕಪತ್ರಗಳ ಪುಸ್ತಕಗಳೊಂದಿಗೆ, ಅಂಥ ಸಂಸ್ಥೆಯ ಪ್ರಸ್ತಾವಿತ ಶುಲ್ಕ ರಚನೆಯನ್ನು ಪರಿಶೋಧನೆಗಾಗಿ ಸಮಿತಿಯ ಮುಂದೆ ಇಡಲು ಪ್ರತಿಯೊಂದು ವೃತ್ತಿ ಶಿಕ್ಷಣ ಸಂಸ್ಥೆಯನ್ನು ಅಗತ್ಯಪಡಿಸುವ;

(ii) ಪ್ರತಿಯೊಂದು ಸಂಸ್ಥೆಯು ಪ್ರಸ್ತಾವ ಸಲ್ಲಿಸಿದ ಶುಲ್ಕವು ಸಮರ್ಥನೀಯವಾಗಿದೆ ಮತ್ತು ಅದರ ಅನುಷ್ಠಾನ ಲಾಭಕೋರತನ ಆಗುವುದಿಲ್ಲ ಅಥವಾ ಕ್ಯಾಪಿಟೇಷನ್ ಶುಲ್ಕವನ್ನು ವಿಧಿಸಿದಂತೆ ಆಗುವುದಿಲ್ಲ ಎಂಬುದನ್ನು ಪರಿಶೀಲಿಸಿ ನೋಡುವ;

(iii) ಶುಲ್ಕ ರಚನೆ ಅನುಮೋದಿಸುವುದಕ್ಕೆ ಅಥವಾ ಸಂಸ್ಥೆ ವಿಧಿಸಬಹುದಾದ ಬೇರೊಂದು ಶುಲ್ಕವನ್ನು ನಿರ್ಧರಿಸುವುದಕ್ಕೆ,

– ಅಧಿಕಾರ ಹೊಂದಿರತಕ್ಕದ್ದು.

(3) ಶುಲ್ಕ ನಿಯಂತ್ರಣ ಸಮಿತಿಯು, ತನ್ನ ಪ್ರಕಾರ್ಯಗಳನ್ನು ನೆರವೇರಿಸುವಲ್ಲಿ ಉದ್ಭವಿಸಬಹುದಾದ ಎಲ್ಲಾ ವಿಷಯಗಳ ಬಗ್ಗೆ ತನ್ನದೇ ಆದ ಕಾರ್ಯವಿಧಾನವನ್ನು ವಿನಿಯಮಿಸಿಕೊಳ್ಳುವ ಅಧಿಕಾರ ಹೊಂದಿರತಕ್ಕದ್ದು ಮತ್ತು ಈ ಅಧಿನಿಯಮದ ಅಡಿಯಲ್ಲಿ ಯಾವುದೇ ವಿಚಾರಣೆಯನ್ನು ನಡೆಸುವ ಉದ್ದೇಶಕ್ಕಾಗಿ, ಅದು ಈ ಮುಂದಿನ ವಿಷಯಗಳಿಗೆ ಸಂಬಂಧಪಟ್ಟಂತೆ ಸಿವಿಲ್ ಪ್ರಕ್ರಿಯಾ ಸಂಹಿತೆ, 1908ರ ಅಡಿಯಲ್ಲಿ ಒಂದು ಸಿವಿಲ್ ನ್ಯಾಯಾಲಯವು ದಾವೆಯ ಅಧಿವಿಚಾರಣೆ ಮಾಡುವಾಗ ಹೊಂದಿರುವ ಎಲ್ಲಾ ಅಧಿಕಾರಗಳನ್ನು ಹೊಂದಿರತಕ್ಕದ್ದು, ಎಂದರೆ:–

(ಎ) ಸಾಕ್ಷಿದಾರನಿಗೆ ಸಮನುನೀಡುವುದು ಮತ್ತು ಹಾಜರಾಗುವಂತೆ ಒತ್ತಾಯಿಸುವುದು ಮತ್ತು ಅವನನ್ನು ಪ್ರಮಾಣ ವಚನದ ಮೇಲೆ ವಿಚಾರಣೆ ನಡೆಸುವುದು;

(ಬಿ) ಯಾವುದೇ ದಸ್ತಾವೇಜನ್ನು ಹುಡುಕುವುದು ಮತ್ತು ಹಾಜರುಪಡಿಸುವುದು;

(ಸಿ) ಅಫೀದಾವಿತ್ತುಗಳ ಮೇಲೆ ಸಾಕ್ಷ್ಯವನ್ನು ಸ್ವೀಕರಿಸುವುದು;

(ಡಿ) ಸಾಕ್ಷಿದಾರರನ್ನು ವಿಚಾರಣೆ ಮಾಡುವುದಕ್ಕಾಗಿ ಯಾವುದೇ ಕಮೀಷನನ್ನು ಹೊರಡಿಸುವುದು.

(4) ಸಮಿತಿಯು ನಿರ್ಧರಿಸಿದ ಶುಲ್ಕಕ್ಕೆ ಮೂರುವರ್ಷಗಳ ಅವಧಿವರೆಗೆ ಆ ವೃತ್ತಿ ಶಿಕ್ಷಣ ಸಂಸ್ಥೆಯು ಬದ್ಧವಾಗಿರತಕ್ಕದ್ದು. ಸದರಿ ಅವಧಿಯ ಕೊನೆಯಲ್ಲಿ ಪರಿಷ್ಕರಣೆಗಾಗಿ ಅರ್ಜಿಸಲ್ಲಿಸಲು ಆ ಸಂಸ್ಥೆಗೆ ಮುಕ್ತ ಅವಕಾಶವಿದೆ. ಹಾಗೆ ನಿರ್ಧರಿಸಲಾದ ಶುಲ್ಕವು, ಆ ಶೈಕ್ಷಣಿಕ ವರ್ಷದಲ್ಲಿ ಒಂದು ಸಂಸ್ಥೆಗೆ ಪ್ರವೇಶ ಪಡೆಯುವ ವಿದ್ಯಾರ್ಥಿಗೆ ಅನ್ವಯವಾಗತಕ್ಕದ್ದು ಮತ್ತು ಸದರಿ ಕಾಲೇಜಿನಲ್ಲಿ ಅವನ ವ್ಯಾಸಂಗವು ಮುಕ್ತಾಯವಾಗುವವರೆಗೆ ಅದು ಪರಿಷ್ಕರಣೆಯಾಗತಕ್ಕದ್ದಲ್ಲ. ಯಾವ ವೃತ್ತಿ ಶಿಕ್ಷಣ ಸಂಸ್ಥೆಯೂ, ಅಭ್ಯರ್ಥಿಯಿಂದ ಒಂದು ವರ್ಷದ ಶುಲ್ಕಕ್ಕಿಂತ ಹೆಚ್ಚಿನ ಶುಲ್ಕವನ್ನು ಸಂಗ್ರಹಿಸತಕ್ಕದ್ದಲ್ಲ. ಒಂದು ವರ್ಷದ ಶುಲ್ಕಕ್ಕಿಂತ ಹೆಚ್ಚಿನ ಶುಲ್ಕವನ್ನು ಸಂಗ್ರಹಿಸಿದರೆ ಅದನ್ನು ಕ್ಯಾಪಿಟೇಷನ್ ಶುಲ್ಕವನ್ನು ಸಂಗ್ರಹಿಸಿದಂತೆ ಎಂಬುದಾಗಿ ಪರಿಗಣಿಸಲಾಗುವುದು ಮತ್ತು ಕರ್ನಾಟಕ ಶಿಕ್ಷಣ ಸಂಸ್ಥೆಗಳ (ಕ್ಯಾಪಿಟೇಷನ್ ಶುಲ್ಕದ ನಿಷೇಧ) ಅಧಿನಿಯಮ, 1984ರ (1984ರ ಕರ್ನಾಟಕ ಅಧಿನಿಯಮ 37) ಅಡಿಯಲ್ಲಿ ದಂಡ ವಿಧಿಸುವಿಕೆಗೆ ಗುರಿಯಾಗತಕ್ಕದ್ದು.

(5) ಯಾವುದೇ ಖಾಸಗಿ ಅನುದಾನಿತ ಅಥವಾ ಅನುದಾನಿತವಲ್ಲದ ವೃತ್ತಿ ಶಿಕ್ಷಣ ಸಂಸ್ಥೆಯೊಂದಿಗೆ ಸಂಬಂಧವುಳ್ಳ ಯಾವ ವ್ಯಕ್ತಿಯೂ ಶುಲ್ಕ ನಿಯಂತ್ರಣ ಸಮಿತಿಯ ಸದಸ್ಯನಾಗುವುದಕ್ಕೆ ಅರ್ಹನಾಗಿರತಕ್ಕದ್ದಲ್ಲ.

(6) ನಾಮನಿರ್ದೇಶನ ಮಾಡಲು ಸಕ್ಷಮವಾದ ಪ್ರಾಧಿಕಾರದ ಇಷ್ಟಕ್ಕೆ ಒಳಪಟ್ಟು, ನಾಮನಿರ್ದೇಶಿತ ಸದಸ್ಯರ ಪದಾವಧಿಯು, ಅವರು, ನಾಮನಿರ್ದೇಶಿತರಾದ ದಿನಾಂಕದಿಂದ ಎರಡು ವರ್ಷಗಳಾಗಿರತಕ್ಕದ್ದು ಮತ್ತು ಯಾವುದೇ ಕಾರಣಕ್ಕಾಗಿ, ಅದಕ್ಕಿಂತ ಮುಂಚೆಯೇ ಸ್ಥಾನವು ಖಾಲಿಯಾದ ಸಂದರ್ಭದಲ್ಲಿ ಅಂಥ ಖಾಲಿ ಸ್ಥಾನವನ್ನು ಉಳಿದ ಅವಧಿಗಾಗಿ ಭರ್ತಿ ಮಾಡತಕ್ಕದ್ದು. ಸರ್ಕಾರೇತರ ಸದಸ್ಯರು, ನಿಯಮಿಸಬಹುದಾದಂಥ ಉಪವೇಶನ ಶುಲ್ಕ ಮತ್ತು ಭತ್ಯಗಳನ್ನು ಪ್ರಯಾಣ ಪಡೆಯಲು ಅರ್ಹರಾಗಿರತಕ್ಕದ್ದು.

(7) ಶುಲ್ಕ ನಿಯಂತ್ರಣ ಸಮಿತಿಯು ಕೈಗೊಂಡ ಯಾವುದೇ ಕಾರ್ಯ ಅಥವಾ ವ್ಯವಹರಣೆಯು, ಸಮಿತಿಯ ರಚನೆಯಲ್ಲಿ ಯಾವುದೇ ಖಾಲಿ ಸ್ಥಾನ ಇದೆ ಅಥವಾ ಯಾವುದೇ ದೋಷವಿದೆ ಎಂಬ ಕಾರಣ ಮಾತ್ರದಿಂದಲೇ ಅಸಿಂಧುವಾಗಿರುವುದಾಗಿ ಭಾವಿಸತಕ್ಕದ್ದಲ್ಲ.

(8) ಶುಲ್ಕ ನಿಯಂತ್ರಣ ಸಮಿತಿಯ ಒಬ್ಬ ಸದಸ್ಯನು, ರಾಜ್ಯ ಸರ್ಕಾರದ ಅಭಿಪ್ರಾಯದಲ್ಲಿ ಅಂಥ ಸದಸ್ಯನಾದವನಿಗೆ ತಕ್ಕದ್ದಾಗಿರದಂಥ ಯಾವುದೇ ಕಾರ್ಯವನ್ನು ಮಾಡಿದ್ದರೆ ಆತನ ಸದಸ್ಯತ್ವವು ನಿಂತುಹೋಗತಕ್ಕದ್ದು:

ಪರಂತು, ಅಂಥ ಯಾವೊಬ್ಬ ಸದಸ್ಯನಿಗೂ ಆತನು, ತನ್ನ ಅಹವಾಲು ಹೇಳಿಕೊಳ್ಳಲು ಅವಕಾಶ ನೀಡಿದ ಹೊರತು ಆತನನ್ನು ಸಮಿತಿಯಿಂದ ತೆಗೆದುಹಾಕತಕ್ಕದ್ದಲ್ಲ.

(9) ಅಧ್ಯಕ್ಷರು, ಶುಲ್ಕ ನಿಯಂತ್ರಣ ಸಮಿತಿಯ ಸಭೆಯ ಅಧ್ಯಕ್ಷತೆಯನ್ನು ವಹಿಸತಕ್ಕದ್ದು ಮತ್ತು ಸಮಿತಿಯು, ಅದು ತಾನು ಯುಕ್ತವೆಂದು ಭಾವಿಸಿದಂಥ ತನ್ನದೇ ಕ್ರಮಗಳನ್ನು ಅನುಸರಿಸಬಹುದು.

**7. ಶುಲ್ಕ ನಿಗದಿಗೆ ಪರಿಗಣನೆಯ ಅಂಶಗಳು.–** (1) ಶುಲ್ಕ ನಿಯಂತ್ರಣ ಸಮಿತಿಯು, ಈ ಮುಂದಿನ ಅಂಶಗಳನ್ನು ಪರಿಗಣಿಸಿ, ವಿಶ್ವವಿದ್ಯಾಲಯಕ್ಕೆ ಸಂಯೋಜನೆಗೊಂಡ ಖಾಸಗಿ ಅನುದಾನಿತ ಅಥವಾ ಅನುದಾನಿತವಲ್ಲದ ವೃತ್ತಿ ಶಿಕ್ಷಣ ಸಂಸ್ಥೆಗಳು ವಿಧಿಸತಕ್ಕ ಶುಲ್ಕ ಅಥವಾ ಶುಲ್ಕಗಳನ್ನು ನಿಗದಿಪಡಿಸತಕ್ಕದ್ದು, ಎಂದರೆ,–

(ಎ) ವೃತ್ತಿ ಶಿಕ್ಷಣ ಸಂಸ್ಥೆಯು ಇರುವ ಸ್ಥಳ;

(ಬಿ) ವೃತ್ತಿ ಶಿಕ್ಷಣ ವ್ಯಾಸಂಗ ಕ್ರಮದ ಸ್ವರೂಪ;

(ಸಿ) ದೊರೆಯಬಹುದಾದ ಮೂಲ ಸೌಕರ್ಯಗಳು;

(ಡಿ) ಆಡಳಿತದ ಮತ್ತು ನಿರ್ವಹಣೆಯ ವೆಚ್ಚ;

(ಇ) [1][ಶೇಕಡಾ ಎಂಟಕ್ಕಿಂತ ಹೆಚ್ಚಲ್ಲದಂತೆ][1] ಸಂಸ್ಥೆಯ ಬೆಳವಣಿಗೆಗೆ ಮತ್ತು ಅಭಿವೃದ್ಧಿಗಾಗಿ ಅಗತ್ಯವಿರುವ ಯುಕ್ತ ಹೆಚ್ಚುವರಿಗಳು;

(ಎಫ್) ಸಮಿತಿಯು, ತಾನು ಸೂಕ್ತವೆಂದು ಭಾವಿಸಬಹುದಾದಂಥ ಯಾವುದೇ ಇತರ ಅಂಶಗಳು.

(2) ಯಾವ ವೃತ್ತಿಶಿಕ್ಷಣ ಸಂಸ್ಥೆಯೂ, ವೃತ್ತಿಶಿಕ್ಷಣ ವ್ಯಾಸಂಗ ಕ್ರಮಗಳಿಗೆ ಪ್ರವೇಶದ ಸಂದರ್ಭದಲ್ಲಿ ವಿದ್ಯಾರ್ಥಿಗಳಿಂದ ಯಾವುದೇ ಹೆಸರಿನಿಂದ ಅಥವಾ ಯಾವುದೇ ರೂಪದಲ್ಲಿ ಯಾವುದೇ ಶುಲ್ಕವನ್ನು ಶುಲ್ಕ ನಿಯಂತ್ರಣ ಸಮಿತಿಯು ನಿಗದಿಪಡಿಸಿದ ಮತ್ತು ಸಂಬಂಧಪಟ್ಟ ವಿಶ್ವವಿದ್ಯಾನಿಲಯವು ನಿಯಮಿಸಿದ ಶುಲ್ಕಕ್ಕಿಂತಲೂ ಹೆಚ್ಚುವರಿಯಾಗಿ ಸಂಗ್ರಹಿಸತಕ್ಕದ್ದಲ್ಲ.

(3) ಶುಲ್ಕ ನಿಯಂತ್ರಣ ಸಮಿತಿಯು, ವಿವಿಧ ಸಂಸ್ಥೆಗಳಲ್ಲಿ ಒದಗಿಸುತ್ತಿರುವ ವಿವಿಧ ಬಗೆಯ ವೃತ್ತಿ ವ್ಯಾಸಂಗ ಕ್ರಮಗಳ ಸಂಬಂಧದಲ್ಲಿ ಅಲ್ಲಿ ಲಭ್ಯವಿರುವ ಸೌಲಭ್ಯಗಳ ಆಧಾರದ ಮೇಲೆ ಬೇರೆ ಬೇರೆ ಶುಲ್ಕವನ್ನು ನಿಗದಿಪಡಿಸಬಹುದು ಮತ್ತು ಈ ಉದ್ದೇಶಕ್ಕಾಗಿ ಅದು, ಸಮಾನ ಸ್ಥಿತಿಗತಿಯ ಸಂಸ್ಥೆಗಳನ್ನು ಸ್ಥೂಲ ಗುಂಪುಗಳಾಗಿ ಸೇರಿಸಬಹುದು:

ಪರಂತು, ಶುಲ್ಕ ನಿಯಂತ್ರಣ ಸಮಿತಿಯು, ವೃತ್ತಿ ಶಿಕ್ಷಣ ಸಂಸ್ಥೆಗಳಿಗೆ ಅನಿವಾಸಿ ಭಾರತೀಯರ ಪ್ರವೇಶಕ್ಕಾಗಿ, ಹೆಚ್ಚಿನ ಶುಲ್ಕವನ್ನು ಸಂಗ್ರಹಿಸಲು ಅವಕಾಶ ನೀಡಬಹುದಾಗಿದೆ. ರಾಜ್ಯಸರ್ಕಾರವು, ಅನಿವಾಸಿ ಭಾರತೀಯ ವಿದ್ಯಾರ್ಥಿಗಳಿಂದ ಸಂಗ್ರಹಿಸತಕ್ಕ ಕನಿಷ್ಠ ಶುಲ್ಕವನ್ನು ನಿಗದಿಪಡಿಸಬಹುದು ಮತ್ತು ಆ ಸಂಸ್ಥೆಯಲ್ಲಿ ಇತರೆ ವಿದ್ಯಾರ್ಥಿಗಳಿಗೆ ನಿಗದಿಪಡಿಸಲಾದ ಶುಲ್ಕಕ್ಕಿಂತ ಹೆಚ್ಚುವರಿಯಾಗಿ ಸಂಗ್ರಹಿಸಲಾದ ಶುಲ್ಕವನ್ನು, ಅನುಸೂಚಿತ ಜಾತಿಗಳು, ಅನುಸೂಚಿತ ಬುಡಕಟ್ಟುಗಳು ಮತ್ತು ಇತರೆ ಹಿಂದುಳಿದ ವರ್ಗಗಳಿಗೆ ಸೇರಿದ ವಿದ್ಯಾರ್ಥಿಗಳಿಗೆ ಶುಲ್ಕದಲ್ಲಿ ರಿಯಾಯಿತಿ ನೀಡಲು ಬಳಸತಕ್ಕದ್ದು.

(4) ಯಾವುದೇ ಸಂಸ್ಥೆಯು, ಕ್ಯಾಪಿಟೇಷನ್ ಶುಲ್ಕವನ್ನು ಅಥವಾ ನಿಗದಿಪಡಿಸಲಾದ ಶುಲ್ಕಕ್ಕಿಂತ ಹೆಚ್ಚಿನ ಶುಲ್ಕವನ್ನು ಸಂಗ್ರಹಿಸುತ್ತಿರುವುದಾಗಿ ಅಥವಾ ಲಾಭಕೋರತನದಿಂದ ಶುಲ್ಕವನ್ನು ಸಂಗ್ರಹಿಸುತ್ತಿರುವುದಾಗಿ ಯಾವುದೇ ದೂರು ಬಂದಲ್ಲಿ, ಶುಲ್ಕ ನಿಯಂತ್ರಣ ಸಮಿತಿಯು, ಸಾಕ್ಷ್ಯಗಳನ್ನು ಮತ್ತು ಸಂಬಂಧಪಟ್ಟ ಆಡಳಿತ ಮಂಡಳಿಯಿಂದ ವಿವರಣೆಗಳನ್ನು ಪಡೆದ ತರುವಾಯ, ಸಂಬಂಧಪಟ್ಟ ವಿಶ್ವವಿದ್ಯಾನಿಲಯಕ್ಕೆ ಅಥವಾ ರಾಜ್ಯಸರ್ಕಾರಕ್ಕೆ ಅವಶ್ಯಕ ಕ್ರಮ ಕೈಗೊಳ್ಳುವಂತೆ ಸೂಕ್ತ ಶಿಫಾರಸ್ಸು ಕಳುಹಿಸತಕ್ಕದ್ದು. ಅಂಥ ಶಿಫಾರಸ್ಸಿನ ಮೇಲೆ, ರಾಜ್ಯ ಸರ್ಕಾರವು ಸಂಬಂಧಪಟ್ಟ ವಿಶ್ವವಿದ್ಯಾನಿಲಯಕ್ಕೆ, ಅಂಥ ವೃತ್ತಿಶಿಕ್ಷಣ ಸಂಸ್ಥೆಯ ಆಡಳಿತ ಮಂಡಳಿಯ ಮೇಲೆ ಹತ್ತು ಲಕ್ಷ ರೂಪಾಯಿಗಳವರೆಗೆ [1][ಅಥವಾ ಸರ್ಕಾರವು ನಿಗದಿಪಡಿಸಿದ ಶುಲ್ಕಕ್ಕಿಂತ ಹೆಚ್ಚಿಗೆ ಸಂಗ್ರಹಿಸಿದ ಮೊತ್ತಕ್ಕೆ ಎರಡರಷ್ಟು ಇದರಲ್ಲಿ ಯಾವುದು ಹೆಚ್ಚೋ ಅಷ್ಟು][1] ಜುಲ್ಮಾನೆಯನ್ನು ವಿಧಿಸುವಂತೆ ಮತ್ತು ವಸೂಲು ಮಾಡುವಂತೆ ನಿರ್ದೇಶಿಸಬಹುದು. ಮತ್ತು ಹಾಗೆ ವಿಶ್ವವಿದ್ಯಾನಿಲಯವು ಜುಲ್ಮಾನೆ ವಿಧಿಸುವುದು ಕಾನೂನು ಸಮ್ಮತವಾಗಿರತಕ್ಕದ್ದು. ವಿಶ್ವವಿದ್ಯಾನಿಲಯವು, ಈ ಅಧಿನಿಯಮದ ಉಪಬಂಧಗಳನ್ನು ಉಲ್ಲಂಘಿಸಿ, ಅಂಥ ಸಂಸ್ಥೆಯು ನೀಡಿದ ಎಲ್ಲಾ ಅಥವಾ ಯಾವುವೇ ಪ್ರವೇಶಗಳನ್ನು ಅನುಮೋದಿಸತಕ್ಕದ್ದಲ್ಲ ಅಥವಾ ರಾಜ್ಯಸರ್ಕಾರಕ್ಕೆ ತಿಳಿಸಿ ಅಂಥ ಸಂಸ್ಥೆಗಳಿಗೆ ನೀಡಿದ್ದ ಮನ್ನಣೆ ಅಥವಾ ಸಂಯೋಜನೆಯನ್ನು ಹಿಂದಕ್ಕೆ ಪಡೆಯಬಹುದು.

[1][(5) ಯಾವುದೇ ಖಾಸಗಿ ಅನುದಾನಿತವಲ್ಲದ ಶಿಕ್ಷಣ ಸಂಸ್ಥೆಯು,–

(ಎ) ಹಾಗೆ ಸಂಗ್ರಹಿಸಲಾದ ಶುಲ್ಕದಿಂದ ಸಂಚಯವಾದ ಮೊತ್ತವನ್ನು ತನ್ನ ಸೋದರ ಸಂಸ್ಥೆಗಳಿಗೆ ವರ್ಗಾಯಿಸತಕ್ಕದ್ದಲ್ಲ;

(ಬಿ) ಹಾಗೆ ಸಂಗ್ರಹಿಸಲಾದ ಶುಲ್ಕದಿಂದ ನಿರ್ಮಿಸಲಾದ ಸ್ಥಿರ ಸ್ವತ್ತನ್ನು ರಾಜ್ಯ ಸರ್ಕಾರದ ಪೂರ್ವಾನುಮತಿಯಿಲ್ಲದೇ ವರ್ಗಾಯಿಸತಕ್ಕದ್ದಲ್ಲ.

(6) ಪ್ರತಿಯೊಂದು ವೃತ್ತಿ ಖಾಸಗಿ ಶಿಕ್ಷಣ ಸಂಸ್ಥೆಯು, ಪ್ರತಿವರ್ಷವು, ಚಾರ್ಟರ್ಡ್ ಅಕೌಂಟೆಂಟ್‍ಗಳ ಮೂಲಕ, ಯುಕ್ತವಾಗಿ ಪರಿಶೋಧಿಸಲ್ಪಟ್ಟ ತನ್ನ ವಾರ್ಷಿಕ ಲೆಕ್ಕಪತ್ರದ ತಃಖ್ತೆ ಮತ್ತು ಆಸ್ತಿ ಹಾಗೂ ಹೊಣೆಗಾರಿಕೆಗಳ ತಃಖ್ತೆಯನ್ನು ನಿಯಮಿಸಲಾದ ಪ್ರಾಧಿಕಾರಕ್ಕೆ ಸಲ್ಲಿಸತಕ್ಕದ್ದು.][1]

1. 2015ರ ಅಧಿನಿಯಮ ಸಂಖ್ಯೆ 39ರ ಮೂಲಕ ದಿನಾಂಕ: 11.09.2015ರಿಂದ ಸೇರಿಸಲಾಗಿದೆ.

**8. ಅರ್ಹತೆ.–** ಯಾವ ವಿದ್ಯಾರ್ಥಿಗೂ ಆತನು ನಿಯಮಿಸಬಹುದಾದಂಥ ವಿದ್ಯಾರ್ಹತೆಯನ್ನು ಅಥವಾ ಅದಕ್ಕೆ ಸಮಾನ ವಿದ್ಯಾರ್ಹತೆಯನ್ನು ಹೊಂದಿದ್ದ ಹೊರತು ವೃತ್ತಿಶಿಕ್ಷಣ ಸಂಸ್ಥೆಗಳಿಗೆ, ಪ್ರವೇಶ ನೀಡತಕ್ಕದ್ದಲ್ಲ.

**9. ಸೀಟುಗಳ ಹಂಚಿಕೆ ಮತ್ತು ಮೀಸಲಾತಿ.–** ವೃತ್ತಿಶಿಕ್ಷಣ ಸಂಸ್ಥೆಗಳಲ್ಲಿ ಒಟ್ಟು ಮಂಜೂರಾದ ಸೀಟುಗಳಲ್ಲಿ,

(i) (ಎ) ಅನುದಾನಿತ ಸಂಸ್ಥೆಗಳಲ್ಲಿ, ಎಲ್ಲಾ ಸರ್ಕಾರಿ ಸೀಟುಗಳನ್ನು, ರಾಜ್ಯ ಸರ್ಕಾರದ ಮೀಸಲಾತಿ ನೀತಿಗೆ ಒಳಪಟ್ಟು 3(6)ನೇ ಪ್ರಕರಣಕ್ಕೆ ಅನುಸಾರವಾಗಿ ರಾಜ್ಯ ಸಾಮಾನ್ಯ ಪ್ರವೇಶ ಪರೀಕ್ಷಾ ಸಮಿತಿಯ ಮೂಲಕ ಭರ್ತಿಮಾಡಿಕೊಳ್ಳತಕ್ಕದ್ದು; ಮತ್ತು

(ಬಿ) ಉಳಿಕೆ ಸೀಟುಗಳು ಸಾಮಾನ್ಯ ಸೀಟುಗಳಾಗಿರತಕ್ಕದ್ದು.

(ii) (ಎ) ಅನುದಾನಿತವಲ್ಲದ ಅಲ್ಪಸಂಖ್ಯಾತವಲ್ಲದ ಸಂಸ್ಥೆಯಲ್ಲಿ ರಾಜ್ಯ ಸರ್ಕಾರವು ಅಧಿಸೂಚಿಸಿದಂತೆ ಶೇ.50 ಐವತ್ತರಷ್ಟು ಸೀಟುಗಳನ್ನು ರಾಜ್ಯದ ಅನುಸೂಚಿತ ಜಾತಿಗಳು, ಅನುಸೂಚಿತ ಬುಡಕಟ್ಟುಗಳು ಮತ್ತು ಇತರೆ ಹಿಂದುಳಿದ ವರ್ಗಗಳಿಗೆ ಸಂಬಂಧಪಟ್ಟ ವಿದ್ಯಾರ್ಥಿಗಳಿಗಾಗಿ ಮೀಸಲಿರಿಸತಕ್ಕದ್ದು; ಮತ್ತು

(ಬಿ) ಉಳಿದ ಸೀಟುಗಳು ಸಾಮಾನ್ಯ ಪ್ರವರ್ಗಕ್ಕೆ ಸೇರಿದವುಗಳಾಗಿರತಕ್ಕದ್ದು. ಸಾಮಾನ್ಯ ಪ್ರವರ್ಗದ ಸೀಟುಗಳ ಪೈಕಿ ಶೇಕಡಾ ಹದಿನೈದರಷ್ಟು ಸೀಟುಗಳನ್ನು ಅನಿವಾಸಿ ಭಾರತೀಯ ಕೋಟಾಕ್ಕೆ ಸಂಬಂಧಪಟ್ಟ ವಿದ್ಯಾರ್ಥಿಗಳಿಂದ ಭರ್ತಿಮಾಡಿಕೊಳ್ಳಬಹುದಾಗಿದೆ: [1][ಮತ್ತು ಉಳಿದ ಶೇಕಡಾ ಐವತ್ತರಷ್ಟು ಸೀಟುಗಳನ್ನು ಕರ್ನಾಟಕದ ವಿದ್ಯಾರ್ಥಿಗಳ ಮೂಲಕ ತುಂಬತಕ್ಕದ್ದು][1]

ಪರಂತು, ವಿದ್ಯಾರ್ಥಿಗಳು ದೊರೆಯದ ಕಾರಣಗಳಿಂದಾಗಿ, ಅನುದಾನಿತವಲ್ಲದ ಅಲ್ಪಸಂಖ್ಯಾತವಲ್ಲದ ಸಂಸ್ಥೆಗಳಲ್ಲಿ ಅನುಸೂಚಿತ ಜಾತಿಗಳು, ಅನುಸೂಚಿತ ಬುಡಕಟ್ಟುಗಳು ಮತ್ತು ಇತರೆ ಹಿಂದುಳಿದ ವರ್ಗಗಳ ಅಭ್ಯರ್ಥಿಗಳಿಗಾಗಿ ಮೀಸಲಿರಿಸಲಾದ ಸೀಟುಗಳು ಭರ್ತಿಯಾಗದೇ ಉಳಿದಲ್ಲಿ ಅಥವಾ ಮೀಸಲು ಪ್ರವರ್ಗದ ವಿದ್ಯಾರ್ಥಿಗಳು ತಮ್ಮ ಸೀಟುಗಳ ಆಯ್ಕೆ ಮಾಡಿಕೊಂಡ ನಂತರ ಬಿಟ್ಟುಹೋಗಿದ್ದಲ್ಲಿ, ಆ ಸೀಟುಗಳಿಗೆ, ರಾಜ್ಯದ ಸಾಮಾನ್ಯ ಪ್ರವೇಶ ಪರೀಕ್ಷಾ ಸಮಿತಿಯು ನಡೆಸಿದ ಸಾಮಾನ್ಯ ಪ್ರವೇಶ ಪರೀಕ್ಷೆಯ [1][ಅಥವಾ ಭಾರತ ಸರ್ಕಾರ ಅಥವಾ ಸಂದರ್ಭಾನುಸಾರವಾಗಿ ಅದರ ಏಜೆನ್ಸಿಯು ನಡೆಸುವ ಸಾಮಾನ್ಯ ಪ್ರವೇಶ ಪರೀಕ್ಷೆಯ][1] ಅರ್ಹತಾಪಟ್ಟಿಯಿಂದ ಅದೇ ಪ್ರವರ್ಗಕ್ಕೆ ಸೇರಿದ ವಿದ್ಯಾರ್ಥಿಗಳನ್ನು ಭರ್ತಿ ಮಾಡಿಕೊಳ್ಳತಕ್ಕದ್ದು:

ಮತ್ತು ಪರಂತು, ತದನಂತರವೂ ಸೀಟುಗಳು ಭರ್ತಿಯಾಗದೇ ಉಳಿದಲ್ಲಿ, ಅಂಥ ಉಳಿದ ಸೀಟುಗಳನ್ನು,[2][XXX][2] ಸಾಮಾನ್ಯ ಪ್ರವೇಶ ಪರೀಕ್ಷೆಯ ಮೂಲಕ ಮೆರಿಟ್ ಆಧಾರದ ಮೇಲೆ ಸಾಮಾನ್ಯ ಪ್ರವರ್ಗಕ್ಕೆ ಸೇರಿದ ವಿದ್ಯಾರ್ಥಿಗಳಿಂದ ಭರ್ತಿ ಮಾಡಿಕೊಳ್ಳತಕ್ಕದ್ದು.

(iii) (ಎ) ಅನುದಾನಿತವಲ್ಲದ ಅಲ್ಪಸಂಖ್ಯಾತ ವೃತ್ತಿಶಿಕ್ಷಣ ಸಂಸ್ಥೆಗಳಲ್ಲಿ, ಶೇಕಡಾ ಅರವತ್ತಾರಕ್ಕೆ ಕಡಿಮೆ ಇಲ್ಲದ ಸೀಟುಗಳನ್ನು, [2][XXX][2] ಸಾಮಾನ್ಯ ಪ್ರವೇಶ ಪರೀಕ್ಷೆಯ ಮೆರಿಟ್ ಪಟ್ಟಿಯಲ್ಲಿ ಪರಸ್ಪರ ಅರ್ಹತೆಯ ಆಧಾರದ ಮೇಲೆ, ಆ ಸಂಸ್ಥೆಯು ಯಾವ ಅಲ್ಪಸಂಖ್ಯಾತ ಸಮುದಾಯಕ್ಕೆ ಸೇರಿದೆಯೋ ಆ ರಾಜ್ಯದೊಳಗಿನ ಅಲ್ಪಸಂಖ್ಯಾತ ಸಮುದಾಯಕ್ಕೆ ಸೇರಿದ ವಿದ್ಯಾರ್ಥಿಗಳಿಂದ ಭರ್ತಿಮಾಡಿಕೊಳ್ಳತಕ್ಕದ್ದು; ಮತ್ತು

(ಬಿ) ಉಳಿದ ಸೀಟುಗಳು ಸಾಮಾನ್ಯ ಪ್ರವರ್ಗಕ್ಕೆ ಸೇರಿದವುಗಳಾಗಿರುತ್ತವೆ. ಸಾಮಾನ್ಯ ಪ್ರವರ್ಗದ ಸೀಟುಗಳ ಪೈಕಿ ಶೇಕಡಾ ಹದಿನೈದರ ವರೆಗೆ ಅನಿವಾಸಿ ಭಾರತೀಯರ ಕೋಟಾಕ್ಕೆ ಸೇರಿದ ವಿದ್ಯಾರ್ಥಿಗಳನ್ನು ಭರ್ತಿಮಾಡಿಕೊಳ್ಳಬಹುದು: [1][ಮತ್ತು ಉಳಿದ ಶೇಕಡಾ ಐವತ್ತರಷ್ಟು ಸೀಟುಗಳನ್ನು ಕರ್ನಾಟಕದ ವಿದ್ಯಾರ್ಥಿಗಳ ಮೂಲಕ ತುಂಬತಕ್ಕದ್ದು][1]

ಪರಂತು, ಅನುದಾನಿತವಲ್ಲದ ಸಂಸ್ಥೆಗಳಲ್ಲಿ ಅಲ್ಪಸಂಖ್ಯಾತ ಪ್ರವರ್ಗಕ್ಕಾಗಿ ಮೀಸಲಿಟ್ಟ ಯಾವುದೇ ಸೀಟುಗಳು ಭರ್ತಿಯಾಗದೇ ಉಳಿದಿದ್ದಲ್ಲಿ ಅಥವಾ ಸೀಟುಗಳನ್ನು ಆಯ್ಕೆ ಮಾಡಿಕೊಂಡ ನಂತರ ವಿದ್ಯಾರ್ಥಿಗಳು ಬಿಟ್ಟುಹೋದಲ್ಲಿ, ಅವುಗಳಿಗೆ ರಾಜ್ಯ ಸಾಮಾನ್ಯ ಪ್ರವೇಶ ಪರೀಕ್ಷಾ ಸಮಿತಿಯು ನಡೆಸಿದ ಸಾಮಾನ್ಯ ಪ್ರವೇಶ ಪರೀಕ್ಷೆಯ [1][ಅಥವಾ ಭಾರತ ಸರ್ಕಾರ ಅಥವಾ ಸಂದರ್ಭಾನುಸಾರವಾಗಿ ಅದರ ಏಜೆನ್ಸಿಯು ನಡೆಸುವ ಸಾಮಾನ್ಯ ಪ್ರವೇಶ ಪರೀಕ್ಷೆಯ][1] ಮೆರಿಟ್ ಪಟ್ಟಿಯಿಂದ ಅವೇ ಪ್ರವರ್ಗದ ಅಲ್ಪ ಸಂಖ್ಯಾತ ವಿದ್ಯಾರ್ಥಿಗಳನ್ನು ಭರ್ತಿಮಾಡಿಕೊಳ್ಳತಕ್ಕದ್ದು:

ಮತ್ತು ಪರಂತು, ಅದಾದ ನಂತರವೂ ಅಂಥ ಸೀಟುಗಳು ಭರ್ತಿಯಾಗದೇ ಉಳಿದಲ್ಲಿ ಅವುಗಳನ್ನು, [2][XXX][2] ಸಾಮಾನ್ಯ ಪ್ರವೇಶ ಪರೀಕ್ಷೆ ಮೂಲಕ ಮೆರಿಟ್ ಆಧಾರದ ಮೇಲೆ ಸಾಮಾನ್ಯ ಪ್ರವರ್ಗಕ್ಕೆ ಸೇರಿದ ವಿದ್ಯಾರ್ಥಿಗಳಿಂದ ಭರ್ತಿಮಾಡಿಕೊಳ್ಳತಕ್ಕದ್ದು.

(iv) ಅನಿವಾಸಿ ಭಾರತೀಯ ವಿದ್ಯಾರ್ಥಿಗಳಿಂದ ಭರ್ತಿಯಾಗಿರಬಹುದಾದ ಸೀಟುಗಳನ್ನು ಬಿಟ್ಟು ಮೀಸಲು ಅಥವಾ ಸಾಮಾನ್ಯ ಪ್ರವರ್ಗದ ಸೀಟುಗಳೂ ಸೇರಿದಂತೆ, ಖಾಸಗಿ ಅನುದಾನಿತವಲ್ಲದ ವೃತ್ತಿಶಿಕ್ಷಣ ಸಂಸ್ಥೆಗಳಲ್ಲಿನ ಎಲ್ಲಾ ಸೀಟುಗಳಿಗೆ ಪ್ರವೇಶವನ್ನು, [3][ನಿಯಮಿಸಬಹುದಾದ][3] ರೀತಿಯಲ್ಲಿ ನಡೆಸಲಾಗುವ ಸಾಮಾನ್ಯ ಪ್ರವೇಶ ಪರೀಕ್ಷೆಯ ತರುವಾಯ ಕೇಂದ್ರೀಯ ಕೌನ್ಸಿಲಿಂಗ್ ವಿಧಾನ ಅನುಸರಿಸಿ ಮೆರಿಟ್ ಆಧಾರದ ಮೇಲೆ ನೀಡತಕ್ಕದ್ದು.

1. 2017ರ ಅಧಿನಿಯಮ ಸಂಖ್ಯೆ 22ರ ಮೂಲಕ ದಿನಾಂಕ: 20.04.2017ರಿಂದ ಸೇರಿಸಲಾಗಿದೆ.

2. 2017ರ ಅಧಿನಿಯಮ ಸಂಖ್ಯೆ 22ರ ಮೂಲಕ ದಿನಾಂಕ: 20.04.2017ರಿಂದ ಬಿಟ್ಟುಬಿಡಲಾಗಿದೆ.

3. 2017ರ ಅಧಿನಿಯಮ ಸಂಖ್ಯೆ 22ರ ಮೂಲಕ ದಿನಾಂಕ: 20.04.2017ರಿಂದ ಪ್ರತಿಯೋಜಿಸಲಾಗಿದೆ.

**10. ಅಧಿನಿಯಮವನ್ನು ಉಲ್ಲಂಘಿಸಿ ಮಾಡಿದ ಪ್ರವೇಶಗಳನ್ನು ಅಸಿಂಧುಗೊಳಿಸುವುದು.–** ಈ ಅಧಿನಿಯಮದ ಅಥವಾ ಅದರಡಿಯಲ್ಲಿ ರಚಿಸಿದ ಯಾವುವೇ ನಿಯಮಗಳ ಉಪಬಂಧಗಳನ್ನು ಉಲ್ಲಂಘಿಸಿ ಮಾಡಿದ ಯಾವುದೇ ಪ್ರವೇಶವು ಅಸಿಂಧುವಾಗತಕ್ಕದ್ದು.

**11. ರಾಜ್ಯ ಸಾಮಾನ್ಯ ಪ್ರವೇಶ ಪರೀಕ್ಷಾ ಸಮಿತಿಯ ನಿಧಿ.–** (1) ಸಮಿತಿಯ ನಿಧಿ ಎಂದು ಕರೆಯಲಾಗುವ ರಾಜ್ಯ ಸಾಮಾನ್ಯ ಪ್ರವೇಶ ಪರೀಕ್ಷಾ ಸಮಿತಿಯ (ಇದರಲ್ಲಿ ಇನ್ನು ಮುಂದೆ ಸಮಿತಿ ಎಂದು ಕರೆಯಲಾಗಿದೆ) ಒಂದು ನಿಧಿ ಇರತಕ್ಕದ್ದು.

(2) ಈ ಮುಂದಿನವುಗಳು ಆ ನಿಧಿಯ ಭಾಗವಾಗಿರತಕ್ಕದ್ದು ಅಥವಾ ಅದಕ್ಕೆ ಸಂದಾಯಮಾಡತಕ್ಕದ್ದು, ಎಂದರೆ:–

(i) ಸಾಮಾನ್ಯ ಪ್ರವೇಶ ಪರೀಕ್ಷೆ ನಡೆಸುವುದಕ್ಕಾಗಿ ಸಮಿತಿಯು ಸಂಗ್ರಹಿಸಿದ ಶುಲ್ಕ;

(ii) ರಾಜ್ಯ ಸರ್ಕಾರವು ನೀಡಿದ ಅನುದಾನಗಳು;

(iii) [1][ಸಮಿತಿಯು][1] ಸಾಲವಾಗಿ ಪಡೆದ ಮೊಬಲಗು;

(iv) ಯಾವುದೇ ಮೂಲದಿಂದ ಸಮಿತಿಯು ಸ್ವೀಕರಿಸಿದ ಅಥವಾ ಅದರ ಪರವಾಗಿ ಸ್ವೀಕರಿಸಲಾದ ಎಲ್ಲ ಇತರ ಮೊತ್ತಗಳು.

1. 2015ರ ಅಧಿನಿಯಮ ಸಂಖ್ಯೆ 39ರ ಮೂಲಕ ದಿನಾಂಕ: 11.09.2015ರಿಂದ ಪ್ರತಿಯೋಜಿಲಾಗಿದೆ.

(3) ರಾಜ್ಯ ಸರ್ಕಾರವು ಅನ್ಯಥಾ, ನಿರ್ದೇಶಿಸಿದಂತೆ ಹೊರತು ನಿಧಿಗೆ ಜಮೆಯಾದ ಎಲ್ಲ ಮೊತ್ತವನ್ನು ಯಾವುದೇ ಅನುಸೂಚಿತ ಬ್ಯಾಂಕಿನಲ್ಲಿ ತೊಡಗಿಸತಕ್ಕದ್ದು.

**12. ರಾಜ್ಯ ಸರ್ಕಾರದಿಂದ ಅನುದಾನಗಳು.–** ರಾಜ್ಯ ಸರ್ಕಾರವು, ತಾನು ಸೂಕ್ತವೆಂದು ಭಾವಿಸುವಂಥ ಮೊತ್ತಕ್ಕೆ ಸಮನಾದ ಮೊಬಲಗನ್ನು ಅನುದಾನವಾಗಿ ಸಮಿತಿಗೆ ನೀಡಬಹುದು.

**13. ಸಾಲಪಡೆಯಲು ಅಧಿಕಾರ.–** (1) ಸಮಿತಿಯು ಕಾಲಕಾಲಕ್ಕೆ ರಾಜ್ಯ ಸರ್ಕಾರದ ಪೂರ್ವ ಮಂಜೂರಾತಿಯೊಡನೆ ಮತ್ತು ಈ ಸಂಬಂಧದಲ್ಲಿ ನಿಯಮಿಸಬಹುದಾದಂಥ ಷರತ್ತುಗಳಿಗೊಳಪಟ್ಟು, ಈ ಅಧಿನಿಯಮದ ಉದ್ದೇಶಕ್ಕೆ ಅಗತ್ಯವಾದ ಯಾವುದೇ ಮೊತ್ತವನ್ನು ಸಾಲವಾಗಿ ಪಡೆಯಬಹುದು.

**14. ಲೆಕ್ಕ ಪತ್ರಗಳು ಮತ್ತು ಲೆಕ್ಕ ಪರಿಶೋಧನೆ.–** (1) ಸಮಿತಿಯ ನಿಧಿಯ ವರಮಾನದ ಮತ್ತು ವೆಚ್ಚದ ಲೆಕ್ಕಪತ್ರಗಳನ್ನು ನಿಯಮಿಸಬಹುದಾದಂಥ ನಿಯಮಗಳಿಗನುಸಾರವಾಗಿ ಇಡತಕ್ಕದ್ದು.

(2) ಸಮಿತಿಯು, ನಿಯಮಿಸಬಹುದಾದಂಥ ನಮೂನೆಯಲ್ಲಿ ಲೆಕ್ಕಪತ್ರಗಳ ವಾರ್ಷಿಕ ವಿವರಣಾ ಪತ್ರವನ್ನು ಸಿದ್ಧಪಡಿಸತಕ್ಕದ್ದು.

(3) ಸಮಿತಿಯ ಲೆಕ್ಕಪತ್ರಗಳ ಲೆಕ್ಕ ಪರಿಶೋಧನೆಯನ್ನು ರಾಜ್ಯಸರ್ಕಾರವು ಗೊತ್ತುಪಡಿಸಬಹುದಾದಂಥ ಲೆಕ್ಕಪರಿಶೋಧಕನು ಮಾಡತಕ್ಕದ್ದು.

(4) ಲೆಕ್ಕ ಪರಿಶೋಧಕನಿಗೆ ಲೆಕ್ಕಪರಿಶೋಧನೆಯ ಉದ್ದೇಶಗಳಿಗಾಗಿ, ಸಮಿತಿಯ ಎಲ್ಲ ಲೆಕ್ಕಪತ್ರಗಳು ಮತ್ತು ಇತರ ದಾಖಲೆಗಳನ್ನು ನೋಡಲು ಅವಕಾಶವಿರತಕ್ಕದ್ದು.

(5) ಸಮಿತಿಯು, ಲೆಕ್ಕಪರಿಶೋಧನೆಗೆ ನಿಯಮಿಸಬಹುದಾದಂಥ ವೆಚ್ಚಗಳನ್ನು ತನ್ನ ನಿಧಿಯಿಂದ ಸಂದಾಯ ಮಾಡತಕ್ಕದ್ದು.

(6) ಸಮಿತಿಯು, ಲೆಕ್ಕಪರಿಶೋಧಕನಿಂದ ವರದಿಯನ್ನು ಸ್ವೀಕರಿಸಿದ ತರುವಾಯ, ಸಾಧ್ಯವಾದಷ್ಟು ಬೇಗನೆ, ಲೆಕ್ಕಪತ್ರಗಳ ವಾರ್ಷಿಕ ವಿವರಣಾ ಪತ್ರದ ಒಂದು ಪ್ರತಿಯನ್ನು ಲೆಕ್ಕ ಪರಿಶೋಧಕನ ವರದಿಯ ಒಂದು ಪ್ರತಿಯೊಂದಿಗೆ ರಾಜ್ಯ ಸರ್ಕಾರಕ್ಕೆ ಕಳುಹಿಸತಕ್ಕದ್ದು ಮತ್ತು ನಿಯಮಿಸಬಹುದಾದಂಥ ರೀತಿಯಲ್ಲಿ ಲೆಕ್ಕಪತ್ರಗಳ ವಾರ್ಷಿಕ ವಿವರಣಾ ಪತ್ರವು ಪ್ರಕಟವಾಗುವಂತೆ ಮಾಡತಕ್ಕದ್ದು.

(7) ರಾಜ್ಯ ಸರ್ಕಾರವು ಲೆಕ್ಕಪರಿಶೋಧಕನ ವರದಿಯನ್ನು ಪರಿಶೀಲಿಸಿದ ತರುವಾಯ, ಸಮಿತಿಗೆ ತಾನು ಸೂಕ್ತವೆಂದು ಯೋಚಿಸುವಂಥ ನಿರ್ದೇಶನಗಳನ್ನು ನೀಡಬಹುದು ಮತ್ತು ಸಮಿತಿಯು ಅಂಥ ನಿರ್ದೇಶನಗಳನ್ನು ಪಾಲಿಸತಕ್ಕದ್ದು.

**15. ಸಮಿತಿಯ ಆಯವ್ಯಯ ಪತ್ರ.–** ಸಮಿತಿಯು, ಪ್ರತಿ ವರ್ಷ ಮುಂಬರುವ ಏಪ್ರಿಲ್ ಮೊದಲನೇ ದಿನಾಂಕದಿಂದ ಪ್ರಾರಂಭವಾಗುವ ಹಣಕಾಸು ವರ್ಷಕ್ಕಾಗಿ ತನ್ನ ವರಮಾನ ಮತ್ತು ವೆಚ್ಚದ ಆಯವ್ಯಯ ಅಂದಾಜನ್ನು ನಿಯಮಿಸಬಹುದಾದಂಥ ದಿನಾಂಕಕ್ಕೆ ಮುಂಚೆ ಮತ್ತು ಅಂಥ ನಮೂನೆಯಲ್ಲಿ ಸಿದ್ದಪಡಿಸತಕ್ಕದ್ದು ಮತ್ತು ಅದನ್ನು ರಾಜ್ಯ ಸರ್ಕಾರಕ್ಕೆ ಕಳುಹಿಸತಕ್ಕದ್ದು.

**16. ವರದಿ.–** ಸಮಿತಿಯು, ನಿಯಮಿಸಬಹುದಾದಂಥ ದಿನಾಂಕಕ್ಕೆ ಮುಂಚೆ ಅಂಥ ನಮೂನೆಯಲ್ಲಿ ಅಂಥ ಅಂತರದಲ್ಲಿ ರಾಜ್ಯ ಸರ್ಕಾರಕ್ಕೆ ನಿಯಮಿಸಲಾದ ವರದಿಯನ್ನು ಸಲ್ಲಿಸತಕ್ಕದ್ದು ಮತ್ತು ರಾಜ್ಯ ಸರ್ಕಾರವು ರಾಜ್ಯ ವಿಧಾನಮಂಡಲದ ಉಭಯ ಸದನಗಳ ಮುಂದೆ ಅಂಥ ವರದಿಯ ಪ್ರತಿಯನ್ನು ಮಂಡಿಸುವಂತೆ ಮಾಡತಕ್ಕದ್ದು.

**17. ಸದ್ಭಾವನೆಯಿಂದ ಕೈಗೊಂಡ ಕ್ರಮಕ್ಕೆ ರಕ್ಷಣೆ.–** ಈ ಅಧಿನಿಯಮದ ಅಡಿಯಲ್ಲಿ ಸದ್ಭಾವನೆಯಿಂದ ಮಾಡಲಾದ ಅಥವಾ ಮಾಡಲು ಉದ್ದೇಶಿಸಲಾದ ಯಾವುದೇ ಕಾರ್ಯದ ಬಗ್ಗೆ ಯಾವೊಬ್ಬ ಸರ್ಕಾರದ ಅಧಿಕಾರಿಯ ವಿರುದ್ಧ ಯಾವುದೇ ದಾವೆ, ಪ್ರಾಸಿಕ್ಯೂಷನ್‌ನನ್ನು ಅಥವಾ ಇತರೆ ಕಾನೂನು ವ್ಯವಹರಣೆಗಳನ್ನು ಹೂಡಲು ಅವಕಾಶವಿರತಕ್ಕದ್ದಲ್ಲ.

**18. ನಿರ್ದೇಶನಗಳನ್ನು ನೀಡಲು ರಾಜ್ಯ ಸರ್ಕಾರದ ಅಧಿಕಾರ.–** (1) ರಾಜ್ಯಸರ್ಕಾರವು, ಈ ಅಧಿನಿಯಮದ ಉದ್ದೇಶಗಳನ್ನು ಈಡೇರಿಸುವುದಕ್ಕಾಗಿ ಅಥವಾ ಅದರಲ್ಲಿ ಇರುವ ಯಾವುವೇ ಉಪಬಂಧಗಳನ್ನು ಅಥವಾ ಅದರಡಿಯಲ್ಲಿ ರಚಿಸಿದ ಯಾವುವೇ ನಿಯಮಗಳು ಅಥವಾ ಆದೇಶಗಳನ್ನು ಕಾರ್ಯಗತಗೊಳಿಸುವುದಕ್ಕಾಗಿ ನಿರ್ದೇಶನ ನೀಡುವುದು ಅವಶ್ಯವೆಂದು ಅಥವಾ ಉಚಿತವೆಂದು ಅಭಿಪ್ರಾಯಪಟ್ಟಲ್ಲಿ ಅದು ಅಂಥ ನಿರ್ದೇಶನಗಳನ್ನು ನೀಡಬಹುದು ಮತ್ತು ಸಂದರ್ಭಾನುಸಾರ ಅಂಥ ಸಂಸ್ಥೆಯ ಆಡಳಿತ ಪರಿಷತ್ತು ಅಥವಾ ಆಡಳಿತ ಮಂಡಳಿ ಅಂಥ ಪ್ರತಿಯೊಂದು ನಿರ್ದೇಶನವನ್ನು ಪಾಲಿಸತಕ್ಕದ್ದು.

(2) ರಾಜ್ಯಸರ್ಕಾರವು, ತನ್ನ ನಿಯಂತ್ರಣದಲ್ಲಿರುವ ಅಧಿಕಾರಿಗಳಿಗೆ ಅಥವಾ ಪ್ರಾಧಿಕಾರಗಳಿಗೆ, ಈ ಅಧಿನಿಯಮದ ಉದ್ದೇಶಗಳನ್ನು ಈಡೇರಿಸಲು ತನ್ನ ಅಭಿಪ್ರಾಯದಲ್ಲಿ ಅವಶ್ಯಕ ಅಥವಾ ಯುಕ್ತವೆಂದು ಭಾವಿಸಬಹುದಾದಂಥ ನಿರ್ದೇಶನಗಳನ್ನು ಸಹ ನೀಡಬಹುದು ಮತ್ತು ಅಂಥ ನಿರ್ದೇಶನಗಳನ್ನು ಪಾಲಿಸುವುದು ಅಂಥ ಅಧಿಕಾರಿಯ ಅಥವಾ ಪ್ರಾಧಿಕಾರದ ಕರ್ತವ್ಯವಾಗಿರತಕ್ಕದ್ದು.

**19. ದಂಡಗಳು.–** (1) ಈ ಅಧಿನಿಯಮದ ಅಥವಾ ಅದರ ಅಡಿಯಲ್ಲಿ ರಚಿಸಿದ ನಿಯಮಗಳ ಉಪಬಂಧಗಳನ್ನು ಉಲ್ಲಂಘಿಸುವ ಯಾವೊಬ್ಬ ವ್ಯಕ್ತಿಯು, ಅಪರಾಧ ನಿರ್ಣಯವಾದ ಮೇಲೆ, ಹತ್ತು ಲಕ್ಷ ರೂಪಾಯಿಗಳವರೆಗೆ ವಿಸ್ತರಿಸಬಹುದಾದ ಜುಲ್ಮಾನೆಯಿಂದ ದಂಡಿತನಾಗತಕ್ಕದ್ದು.

(2) [1][ಈ ಅಧಿನಿಯಮದ ಅಡಿಯಲ್ಲಿನ][1] ದಂಡನೆಯನ್ನು ಇತರೆ ಯಾವುದೇ ಅಧಿನಿಯಮದಲ್ಲಿ ನಿರ್ದಿಷ್ಟಪಡಿಸಲಾದ ದಂಡನೆಗೆ ಬಾಧಕವಾಗದಂತೆ ವಿಧಿಸಬಹುದು.

1. 2015ರ ಅಧಿನಿಯಮ ಸಂಖ್ಯೆ 39ರ ಮೂಲಕ ದಿನಾಂಕ: 11.09.2015ರಿಂದ ಪ್ರತಿಯೋಜಿಸಲಾಗಿದೆ.

**20. ಪ್ರವೇಶಿಸುವ ಮತ್ತು ಪರಿಶೋಧಿಸುವ ಅಧಿಕಾರ.–** ಈ ಉದ್ದೇಶಕ್ಕಾಗಿ, ರಾಜ್ಯಸರ್ಕಾರದಿಂದ ಅಧಿಕೃತಗೊಂಡ 'ಬಿ' ಸಮೂಹದ ಅಧಿಕಾರಿ ದರ್ಜೆಗಿಂತ ಕಡಿಮೆಇಲ್ಲದ ದರ್ಜೆಯ ಯಾವೊಬ್ಬ ಅಧಿಕಾರಿಯು, ಕರ್ನಾಟಕ ಶೈಕ್ಷಣಿಕ ಸಂಸ್ಥೆಗಳ (ಕ್ಯಾಪಿಟೇಶನ್ ಶುಲ್ಕ ನಿಷೇಧ) ಅಧಿನಿಯಮ, 1984ರ (1984ರ 37ನೇ ಅಧಿನಿಯಮ) ಅಡಿಯಲ್ಲಿ ನಿರ್ದಿಷ್ಟಪಡಿಸಿರಬಹುದಾದಂಥ ಷರತ್ತುಗಳಿಗೆ ಒಳಪಟ್ಟು, ಈ ಅಧಿನಿಯಮದ ಉದ್ದೇಶಗಳಿಗಾಗಿ ಆ ಅಧಿನಿಯಮದ 9ನೇ ಪ್ರಕರಣದ ಅಡಿಯಲ್ಲಿ ಉಪಬಂಧಿಸಲಾದಂಥವೇ ಅಧಿಕಾರಗಳನ್ನು ಚಲಾಯಿಸಲು ಮತ್ತು ಪ್ರಕಾರ್ಯಗಳನ್ನು ನೆರವೇರಿಸಲು ಅಧಿಕೃತನಾದ ಅಧಿಕಾರಿ ಎಂಬುದಾಗಿ ಭಾವಿಸತಕ್ಕದ್ದು.

**21. ಇತರ ಕಾನೂನುಗಳ ಮೇಲೆ ಅಧಿನಿಯಮದ ಅಧ್ಯಾರೋಹಿ ಪರಿಣಾಮ.–** ಈ ಅಧಿನಿಯಮದ ಉಪಬಂಧಗಳು, ತತ್ಕಾಲದಲ್ಲಿ ಜಾರಿಯಲ್ಲಿರುವ ಇತರೆ ಯಾವುದೇ ಕಾನೂನಿನಲ್ಲಿ ಅವುಗಳಿಗೆ ಅಸಂಗತವಾಗಿ ಏನೇ ಇದ್ದರೂ ಪರಿಣಾಮಕಾರಿಯಾಗಿರತಕ್ಕದ್ದು.

**22. ತೊಂದರೆಗಳನ್ನು ನಿವಾರಿಸುವ ಅಧಿಕಾರ.–** ಈ ಅಧಿನಿಯಮದ ಉಪಬಂಧಗಳನ್ನು ಕಾರ್ಯರೂಪಕ್ಕೆ ತರುವಲ್ಲಿ ಯಾವುದೇ ತೊಂದರೆ ಉದ್ಭವಿಸಿದಲ್ಲಿ, ರಾಜ್ಯಸರ್ಕಾರವು ಸರ್ಕಾರಿ ರಾಜಪತ್ರದಲ್ಲಿ ಪ್ರಕಟಿಸಿದ ಆದೇಶದ ಮೂಲಕ, ತೊಂದರೆಗಳನ್ನು ನಿವಾರಿಸಲು ತನಗೆ ಅವಶ್ಯಕ ಅಥವಾ ಯುಕ್ತವೆಂದು ಕಂಡುಬರುವ ಮತ್ತು ಈ ಅಧಿನಿಯಮದ ಉದ್ದೇಶಗಳಿಗೆ ಅಸಂಗತವಾಗಿರದಂಥ ಉಪಬಂಧಗಳನ್ನು ರಚಿಸಬಹುದು:

ಪರಂತು, ಅಂಥ ಯಾವ ಆದೇಶವನ್ನು, ಈ ಅಧಿನಿಯಮವು ಪ್ರಾರಂಭವಾದ ದಿನಾಂಕದಿಂದ ಎರಡು ವರ್ಷಗಳ ಅವಧಿಯು ಪೂರ್ಣಗೊಂಡ ತರುವಾಯ ಮಾಡತಕ್ಕದ್ದಲ್ಲ.

**23. ನಿಯಮಗಳ ರಚನಾಧಿಕಾರ.–** (1) ರಾಜ್ಯ ಸರ್ಕಾರವು, ಈ ಅಧಿನಿಯಮದ ಉದ್ದೇಶಗಳನ್ನು ನೆರವೇರಿಸುವುದಕ್ಕಾಗಿ, ಅಧಿಸೂಚನೆಯ ಮೂಲಕ ಸರ್ಕಾರಿ ರಾಜ್ಯಪತ್ರದಲ್ಲಿ ಪೂರ್ವಪ್ರಕಟಣೆ ನೀಡಿದ ತರುವಾಯ ಪೂರ್ವಾನ್ವಯವಾಗಿ ಅಥವಾ ಉತ್ತರಾನ್ವಯವಾಗಿ ನಿಯಮಗಳನ್ನು ರಚಿಸಬಹುದು.

(2) (1)ನೇ ಉಪ-ಪ್ರಕರಣದ ಅಡಿಯಲ್ಲಿ ಮಾಡಿದ ನಿಯಮಗಳು, ಅವುಗಳಲ್ಲಿ ಯಾವುದನ್ನಾದರೂ ಉಲ್ಲಂಘಿಸಿದರೆ ದಂಡನೆಯಾಗಿ ಹತ್ತು ಲಕ್ಷ ರೂಪಾಯಿಗಳವರೆಗೆ ವಿಸ್ತರಿಸಬಹುದಾದ ಜುಲ್ಮಾನೆ ವಿಧಿಸಲು ಸಹ ಉಪಬಂಧಿಸಬಹುದು. ಈ ಅಧಿನಿಯಮದ ಅಡಿಯಲ್ಲಿ ಮಾಡಿದ ಪ್ರತಿಯೊಂದು ನಿಯಮವು, ಈ ಅಧಿನಿಯಮದಲ್ಲಿ ಅದು ಅಧಿನಿಯಮಿತವಾಗಿದ್ದರೆ ಹೇಗೋ ಹಾಗೆ ಪರಿಣಾಮಕಾರಿಯಾಗಿರತಕ್ಕದ್ದು.

(3) ಈ ಅಧಿನಿಯಮದ ಅಡಿಯಲ್ಲಿ ರಚಿಸಿದ ಪ್ರತಿಯೊಂದು ನಿಯಮವನ್ನು, ಅದನ್ನು ರಚಿಸಿದ ತರುವಾಯ ಸಾಧ್ಯವಾದಷ್ಟು ಬೇಗನೇ ರಾಜ್ಯ ವಿಧಾನಮಂಡಲದ ಪ್ರತಿಯೊಂದು ಸದನದ ಮುಂದೆ, ಅದು ಅಧಿವೇಶನದಲ್ಲಿರುವಾಗ, ಒಂದು ಅಧಿವೇಶನ ಅಥವಾ ಎರಡು ನಿರಂತರ ಅಧಿವೇಶನಗಳಲ್ಲಿ ಅಡಕವಾಗಬಹುದಾದ ಒಟ್ಟು ಮೂವತ್ತು ದಿನಗಳವರೆಗೆ ಮಂಡಿಸತಕ್ಕದ್ದು ಮತ್ತು ಅದನ್ನು ಹಾಗೆ ಮಂಡಿಸಿದ ಅಧಿವೇಶನ ಅಥವಾ ನಿಕಟೋತ್ತರ ಅಧಿವೇಶನಗಳು ಮುಕ್ತಾಯವಾಗುವ ಮೊದಲು, ವಿಧಾನಮಂಡಲದ ಉಭಯಸದನಗಳು ನಿಯಮದಲ್ಲಿ ಯಾವುದೇ ಮಾರ್ಪಾಟುಮಾಡಬೇಕೆಂದು ಒಪ್ಪಿದರೆ ಅಥವಾ ನಿಯಮವನ್ನು ರಚಿಸಬಾರದೆಂದು ತೀರ್ಮಾನಿಸಿದರೆ, ಆ ತರುವಾಯ ಅಂಥ ನಿಯಮವು ಸಂದರ್ಭಾನುಸಾರ ಹಾಗೆ ಮಾರ್ಪಾಟಾದ ರೀತಿಯಲ್ಲಿ ಮಾತ್ರ ಪರಿಣಾಮಕಾರಿಯಾಗಿರತಕ್ಕದ್ದು ಅಥವಾ ಪರಿಣಾಮಕಾರಿಯಾಗತಕ್ಕದ್ದಲ್ಲ. ಆದಾಗ್ಯೂ, ಅಂಥ ಮಾರ್ಪಾಟು ಅಥವಾ ರದ್ದತಿಯು ಆ ನಿಯಮದ ಅಥವಾ ಅಧಿಸೂಚನೆಯ ಅಡಿಯಲ್ಲಿ ಈ ಹಿಂದೆ ಮಾಡಿದ ಯಾವುದೇ ಕಾರ್ಯಕ್ಕೂ ಬಾಧಕವಾಗತಕ್ಕದ್ದಲ್ಲ.

**24. ತಾತ್ಕಾಲಿಕ ಉಪಬಂಧಗಳು.–** ಈ ಅಧಿನಿಯಮದ ಪ್ರಾರಂಭದ ದಿನಾಂಕದಂದು ಜಾರಿಯಲ್ಲಿರುವ ಹಾಗೂ ಯಾವ ವಿಷಯಗಳ ಪುರೋಭಿವೃದ್ಧಿಗಾಗಿ ಈ ಅಧಿನಿಯಮವನ್ನು ಜಾರಿಗೆ ತರಲಾಗಿದೆಯೋ ಅಥವಾ ಉಪಬಂಧ ಕಲ್ಪಿಸಲಾಗಿದೆಯೋ ಅದಕ್ಕೆ ಸಂಬಂಧಪಟ್ಟ ಕರ್ನಾಟಕ ಶೈಕ್ಷಣಿಕ ಸಂಸ್ಥೆಗಳ (ಕ್ಯಾಪಿಟೇಷನ್ ಶುಲ್ಕ ನಿಷೇಧ) ಅಧಿನಿಯಮ, 1984ರ (1984ರ ಕರ್ನಾಟಕ ಅಧಿನಿಯಮ ಸಂಖ್ಯೆ 37) ಅಡಿಯಲ್ಲಿ ಈ ಅಧಿನಿಯಮದ ಪ್ರಾರಂಭಕ್ಕೆ ಮುಂಚೆ ರಚಿಸಿದ ಅಥವಾ ಹೊರಡಿಸಿದ ಯಾವುದೇ ನಿಯಮ, ಅಧಿಸೂಚನೆ ಅಥವಾ ನೇಮಕಾತಿಗಳು ಅವು ಈ ಅಧಿನಿಯಮದ ಅಡಿಯಲ್ಲಿ ಮಾಡಿದ ಯಾವುದೇ ಕಾರ್ಯದಿಂದ ಅಥವಾ ತೆಗೆದುಕೊಂಡ ಯಾವುದೇ ಕ್ರಮದಿಂದ ಅಥವಾ ಯಾವುದೇ ನಿಯಮ, ಅಧಿಸೂಚನೆ ಅಥವಾ ನೇಮಕಾತಿಯಿಂದ ರದ್ದಾದ ಹೊರತು ಮತ್ತು ರದ್ದಾಗುವವರೆಗೆ, ಈ ಅಧಿನಿಯಮದ ಉಪಬಂಧಗಳಿಗೆ ಅಸಂಗತವಾಗದಿರುವ ಮಟ್ಟಿಗೆ, ಅವನ್ನು ಈ

ಅಧಿನಿಯಮದ ಸಂವಾದಿ ಉಪಬಂಧಗಳ ಅಡಿಯಲ್ಲಿ ರಚಿಸಿದ್ದರೆ ಅಥವಾ ಹೊರಡಿಸಿದ್ದರೆ ಅಥವಾ ನೇಮಿಸಿದ್ದರೆ, ಹೇಗೋ ಹಾಗೆ ಜಾರಿಯಲ್ಲಿ ಮುಂದುವರಿಯತಕ್ಕದ್ದು ಮತ್ತು ಪರಿಣಾಮಕಾರಿಯಾಗಿರತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ

**ಜಿ.ಕೆ. ಬೋರೇಗೌಡ**
ಸರ್ಕಾರದ ಕಾರ್ಯದರ್ಶಿ
ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಇಲಾಖೆ.

**ಶಿಕ್ಷಣ ಸಚಿವಾಲಯ**

**ಅಧಿಸೂಚನೆ**

ಸಂಖ್ಯೆ: ಇಡಿ 26 ಟಿಇಸಿ 2006(ಭಾಗ–2), ಬೆಂಗಳೂರು, ದಿನಾಂಕ:25.04.2006

ಕರ್ನಾಟಕ ವೃತ್ತಿ ಶಿಕ್ಷಣ ಸಂಸ್ಥೆಗಳ (ಪ್ರವೇಶ ನಿಯಂತ್ರಣ ಮತ್ತು ಶುಲ್ಕ ನಿಗದಿ) ಅಧಿನಿಯಮ, 2006 (2006ರ ಕರ್ನಾಟಕ ಅಧಿನಿಯಮ ಸಂಖ್ಯೆ 8)ರ ಪ್ರಕರಣ (1)ರ (2)ನೇ ಉಪ–ಪ್ರಕರಣದಲ್ಲಿನ ಅಧಿಕಾರವನ್ನು ಚಲಾಯಿಸಿ ರಾಜ್ಯ ಸರ್ಕಾರವು ದಿ:25.04.2006ರಿಂದ ಸದರಿ ಅಧಿನಿಯಮದ ಎಲ್ಲಾ ಉಪಬಂಧಗಳು ಜಾರಿಗೆ ಬರತಕ್ಕದ್ದು ಎಂದು ಗೊತ್ತುಪಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

**ಶೋಭ ನಂಬೀಶನ್**
ಸರ್ಕಾರದ ಪ್ರಧಾನ ಕಾರ್ಯದರ್ಶಿ
ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ)

# GOVERNMENT OF KARNATAKA

**No. ED 162 TEC 2013**

**Karnataka Government Secretariat**
**M.S.Buildings,**
**Banglore, Dt. 18.11.2013.**

## NOTIFICATION

The Karnataka Professional Educational Institutions (Regulation of Adimission and Determination of Fee) Act 2006 (Act No 8 of 2006) was Brought in to force w.e.f. 25.04.2006 vide Notification No. ED 26 TEC 2006 (Part-2).

The Above mentioned Act was kept in abeyance by Act No. 13 of 2006 for the year 2006-07 and Subsequently the Act No. 8 of 2006 was kept in Abeyance every year till 2013-14 by Act No. 28 of 2007 Act No. 23 of 2011, Act No.23 of 2012 and Act No. 50 of 2013 and admissions to Professionals cources were made in terms of consensual agreements entered into every year between the private managements and the Government from 2006-07 to 2013-14.

Government has decided to implement the karnataka Professional Educational Institutions (Regulation of Admission and Determination of Fee) Act 2006 (Act No. 8 of 2006) from year 2014-15 Onwords. Hence the Admission and fee of Professional Educational Institutions in the State of Karnataka Shall be regulelated as per the provisions of the Act, No.8of 2006 from the year 2014-15. Accordingly further necessary Actions Shall be taken for implemanation of the provisions of the said Act immediately

By Order and in the name of
The Governor of Karnataka

**(B.NAGABHUSHAN)**
Under Secretary to Government
Education Deprtment
(Technical Education)

**2015 ರ ಕರ್ನಾಟಕ ಅಧಿನಿಯಮ ಸಂಖ್ಯೆ: 39**

(2015 ರ ಸೆಪ್ಟೆಂಬರ್ ಹನ್ನೊಂದನೇ ದಿನಾಂಕದಂದು ಕರ್ನಾಟಕ ರಾಜ್ಯಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದೆ)

**ಕರ್ನಾಟಕ ವೃತ್ತಿ ಶಿಕ್ಷಣ ಸಂಸ್ಥೆಗಳ (ಪ್ರವೇಶ ನಿಯಂತ್ರಣ ಮತ್ತು ಶುಲ್ಕ ನಿಗದಿ) (ತಿದ್ದುಪಡಿ) ಅಧಿನಿಯಮ, 2015**

(2015 ರ ಸೆಪ್ಟೆಂಬರ್ ಐದನೇ ದಿನಾಂಕದಂದು ರಾಜ್ಯಪಾಲರ ಅನುಮತಿಯನ್ನು ಪಡೆಯಲಾಗಿದೆ)

ಕರ್ನಾಟಕ ವೃತ್ತಿ ಶಿಕ್ಷಣ ಸಂಸ್ಥೆಗಳ (ಪ್ರವೇಶ ನಿಯಂತ್ರಣ ಮತ್ತು ಶುಲ್ಕ ನಿಗದಿ) ಅಧಿನಿಯಮ, 2006ನ್ನು ತಿದ್ದುಪಡಿ ಮಾಡಲು ಒಂದು ಅಧಿನಿಯಮ.

ಈ ಮುಂದಿನವುಗಳಿಗಾಗಿ, ಎಂದರೆ:–

(1) ಅಲ್ಪಸಂಖ್ಯಾತೇತರ ಅಥವಾ ಅಲ್ಪಸಂಖ್ಯಾತ ಖಾಸಗಿ ಅನುದಾನಿತವಲ್ಲದ ವೃತ್ತಿ ಶಿಕ್ಷಣ ಸಂಸ್ಥೆಗಳ ಸಂಘಟನೆಯೊಂದಿಗೆ ಸಮ್ಮತಾಭಿಪ್ರಾಯದ ಒಪ್ಪಂದವನ್ನು ಮಾಡಿಕೊಳ್ಳಲು ರಾಜ್ಯ ಸರ್ಕಾರಕ್ಕೆ ಅಧಿಕಾರವನ್ನು ನೀಡುವುದಕ್ಕೆ ಹಾಗೂ ಬಹುಪಾಲು ವೃತ್ತಿ ಶಿಕ್ಷಣ ಸಂಸ್ಥೆಗಳು ಸ್ವೀಕರಿಸಬಹುದಾದ ಒಂದು ಕಾನೂನಾತ್ಮಕ ಚೌಕಟ್ಟನ್ನು ನೀಡಲು; ರಾಜ್ಯವು ರಚಿಸಿರುವ ಸಾಮಾನ್ಯ ಪ್ರವೇಶ ಪರೀಕ್ಷೆ ಸಮಿತಿಯ ಮೂಲಕ ಖಾಸಗಿ ಶೈಕ್ಷಣಿಕ ಸಂಸ್ಥೆಗಳಲ್ಲಿ ತುಂಬಬೇಕಾದ ಸರ್ಕಾರಿ ಸೀಟುಗಳ ಕೋಟಾವನ್ನು ಸಮ್ಮತಾಭಿಪ್ರಾಯದ ಒಪ್ಪಂದದ ಮೂಲಕ ಕಲ್ಪಿಸಿ ರಾಜ್ಯದ ಪ್ರತಿಭಾನ್ವಿತ ವಿದ್ಯಾರ್ಥಿಗಳ ಮತ್ತು ಸಂಸ್ಥೆಗಳ ಹಿತಾಸಕ್ತಿಯನ್ನು ಕಾಪಾಡುವುದಕ್ಕಾಗಿ; ಮತ್ತು ಖಾಸಗಿ ಶಿಕ್ಷಣ ಸಂಸ್ಥೆಗಳೊಂದಿಗೆ ಸಮ್ಮತಾಭಿಪ್ರಾಯದ ಒಪ್ಪಂದವನ್ನು ಮಾಡಿಕೊಳ್ಳುವಾಗ ಸಾಮಾನ್ಯ ಪ್ರವೇಶ ಪರೀಕ್ಷಾ ಸಮಿತಿಯ ಮೂಲಕ ಆಯ್ಕೆಯಾದ ಯಾವೊಬ್ಬ ವಿದ್ಯಾರ್ಥಿಗೂ ಹೆಚ್ಚಿನ ಹೊರೆ ಬೀಳದಂತೆ ನೋಡಿಕೊಳ್ಳುವುದು ಅಥವಾ ರಿಯಾಯಿತಿಗಳು ಮತ್ತು ವಿದ್ಯಾರ್ಥಿ ವೇತನವನ್ನು ಒದಗಿಸುವ ಮೂಲಕ ಕರ್ನಾಟಕ ವಿದ್ಯಾರ್ಥಿಯ ಹಿತಾಸಕ್ತಿಯನ್ನು ಕಾಪಾಡಲು; ಮತ್ತು

(2) ಯಾವೊಬ್ಬ ವಿದ್ಯಾರ್ಥಿಗೂ ಹೆಚ್ಚಿನ ಹೊರೆ ಬೀಳದಂತೆ ಸರ್ವೋಚ್ಚ ನ್ಯಾಯಾಲಯವು ಕಡ್ಡಾಯಪಡಿಸಿದಂತೆ ಕೈಗೆಟಕುವ ದರದಲ್ಲಿ ಯುಕ್ತ ಶುಲ್ಕವನ್ನು ನಿಗದಿಪಡಿಸಲು ಶುಲ್ಕ ನಿಯಂತ್ರಣ ಸಮಿತಿಗೆ ಮಾರ್ಗಸೂಚಿಗಳನ್ನು ನೀಡಲು ಹಾಗೂ ಪರಿಸ್ಥಿತಿಯ ಕಾರ್ಯಸಾಧ್ಯತೆಯನ್ನು ನಿರ್ವಹಿಸಲು ಅನುವಾಗುವಂತೆ ಮಾಡಲು,

–ಉಪಬಂಧಗಳನ್ನು ಕಲ್ಪಿಸುವುದಕ್ಕಾಗಿ ಕರ್ನಾಟಕ ವೃತ್ತಿ ಶಿಕ್ಷಣ ಸಂಸ್ಥೆಗಳ (ಪ್ರವೇಶ ನಿಯಂತ್ರಣ ಮತ್ತು ಶುಲ್ಕ ನಿಗದಿ) ಅಧಿನಿಯಮ, 2006ನ್ನು (2006ರ ಕರ್ನಾಟಕ ಅಧಿನಿಯಮ 8) ತಿದ್ದುಪಡಿ ಮಾಡುವುದು ಯುಕ್ತವಾಗಿರುವುದರಿಂದ,

ಇದು ಭಾರತ ಗಣರಾಜ್ಯದ ಅರವತ್ತಾರನೇ ವರ್ಷದಲ್ಲಿ ಕರ್ನಾಟಕ ವಿಧಾನಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ;

**1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ.–** (1) ಈ ಅಧಿನಿಯಮವನ್ನು ಕರ್ನಾಟಕ ವೃತ್ತಿ ಶಿಕ್ಷಣ ಸಂಸ್ಥೆಗಳ (ಪ್ರವೇಶ ನಿಯಂತ್ರಣ ಮತ್ತು ಶುಲ್ಕ ನಿಗದಿ) (ತಿದ್ದುಪಡಿ) ಅಧಿನಿಯಮ, 2015 ಎಂದು ಕರೆಯತಕ್ಕದ್ದು.

(2) ಇದು ಈ ಕೂಡಲೇ ಜಾರಿಗೆ ಬರತಕ್ಕದ್ದು.

(ಪ್ರಕರಣ 2, 3, 4, 4ಎ, 4ಬಿ, 5, 7, 11, 19ಗಳನ್ನು ಮೂಲ ಅಧೀನಿಯಮದಲ್ಲಿ ಇಂಧೀಕರಿಸಲಾಗಿದೆ.)

**2017ರ ಕರ್ನಾಟಕ ಅಧಿನಿಯಮ ಸಂಖ್ಯೆ: 22**

(2017ರ ಏಪ್ರಿಲ್ ತಿಂಗಳ ಆರನೇ ದಿನಾಂಕದಂದು ಕರ್ನಾಟಕ ರಾಜ್ಯ ಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದೆ)

**ಕರ್ನಾಟಕ ವೃತ್ತಿ ಶಿಕ್ಷಣ ಸಂಸ್ಥೆಗಳ (ಪ್ರವೇಶ ನಿಯಂತ್ರಣ ಮತ್ತು ಶುಲ್ಕ ನಿಗದಿ) (ತಿದ್ದುಪಡಿ) ಅಧಿನಿಯಮ 2017**

(2017ರ ಏಪ್ರಿಲ್ ತಿಂಗಳ ಮೂರನೇ ದಿನಾಂಕದಂದು ರಾಜ್ಯಪಾಲರಿಂದ ಒಪ್ಪಿಗೆಯನ್ನು ಪಡೆಯಲಾಗಿದೆ)

ಕರ್ನಾಟಕ ವೃತ್ತಿ ಶಿಕ್ಷಣ ಸಂಸ್ಥೆಗಳ (ಪ್ರವೇಶ ನಿಯಂತ್ರಣ ಮತ್ತು ಶುಲ್ಕ ನಿಗದಿ) ಅಧಿನಿಯಮ, 2006ನ್ನು ಮತ್ತಷ್ಟು ತಿದ್ದುಪಡಿ ಮಾಡಲು ಒಂದು ವಿಧೇಯಕ.

ಇಲ್ಲಿ ಇನ್ನು ಮುಂದೆ ಕಂಡುಬರುವ ಉದ್ದೇಶಗಳಿಗಾಗಿ ಕರ್ನಾಟಕ ವೃತ್ತಿ ಶಿಕ್ಷಣ ಸಂಸ್ಥೆಗಳ (ಪ್ರವೇಶ ನಿಯಂತ್ರಣ ಮತ್ತು ಶುಲ್ಕ ನಿಗದಿ) ಅಧಿನಿಯಮ, 2006ನ್ನು (2006ರ ಕರ್ನಾಟಕ ಅಧಿನಿಯಮ 8) ಮತ್ತಷ್ಟು ತಿದ್ದುಪಡಿ ಮಾಡುವುದು ಯುಕ್ತವಾಗಿರುವುದರಿಂದ;

ಇದು ಭಾರತ ಗಣರಾಜ್ಯದ ಅರವತ್ತೆಂಟನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ, ಎಂದರೆ:–

**1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ.–** (1) ಈ ಅಧಿನಿಯಮವನ್ನು ಕರ್ನಾಟಕ ವೃತ್ತಿ ಶಿಕ್ಷಣ ಸಂಸ್ಥೆಗಳ (ಪ್ರವೇಶ ನಿಯಂತ್ರಣ ಮತ್ತು ಶುಲ್ಕ ನಿಗದಿ) (ತಿದ್ದುಪಡಿ) ಅಧಿನಿಯಮ, ಅಧಿನಿಯಮ, 2017 ಎಂದು ಕರೆಯತಕ್ಕದ್ದು.

(2) 1 ಮತ್ತು 5 ನೇ ಪ್ರಕರಣಗಳು ಈ ಕೂಡಲೇ ಜಾರಿಗೆ ಬರತಕ್ಕದ್ದು ಮತ್ತು ಉಳಿದ ಉಪಬಂಧಗಳು ರಾಜ್ಯ ಸರ್ಕಾರವು ಸರ್ಕಾರಿ ರಾಜ್ಯಪತ್ರದಲ್ಲಿ ಅಧಿಸೂಚನೆಯ ಮೂಲಕ ಗೊತ್ತುಪಡಿಸಬಹುದಾದ ಅಂಥ ದಿನಾಂಕದಿಂದ ಜಾರಿಗೆ ಬರತಕ್ಕದ್ದು.

ಪ್ರಕರಣ 2, 3, 4, 4ಎ, 4ಬಿ, 5, ಮತ್ತು 9ನೇ ಯ ಮೂಲ ಅಧೀನಿಯಮದಲ್ಲಿ ಇಂಧೀಕರಿಸಲಾಗಿದೆ.

**ಕರ್ನಾಟಕ ಸರ್ಕಾರ**

ಸಂಖ್ಯೆ: ಇಡಿ 92 ಟಿಇಸಿ 2017

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ, 2ನೇ ಗೇಟ್, 6ನೇ ಮಹಡಿ,
ಬೆಂಗಳೂರು, ದಿನಾಂಕ: 20–04–2017

**ಅಧಿಸೂಚನೆ**

ಕರ್ನಾಟಕ ವೃತ್ತಿಪರ ಶೈಕ್ಷಣಿಕ ಸಂಸ್ಥೆಗಳು (ಪ್ರವೇಶಾತಿ ನಿಯಂತ್ರಣ ಮತ್ತು ಶುಲ್ಕ ನಿಗಧಿ) (ತಿದ್ದುಪಡಿ) ಅಧಿನಿಯಮ 2017ರ ಪ್ರಕರಣ 1(2)ರಲ್ಲಿನ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ವೃತ್ತಿಪರ ಶಿಕ್ಷಣ ಪ್ರವೇಶಾತಿಗೆ ಅರ್ಹತಾ ಪರೀಕ್ಷೆಗಳನ್ನು ನಡೆಸುವುದು, ಪ್ರವೇಶಾತಿಗಾಗಿ ಸಮಾಲೋಚನೆಯನ್ನು ನಡೆಸುವುದು, ಅನುದಾನಿತವಲ್ಲದ ವೃತ್ತಿಪರ ಶಿಕ್ಷಣ ಸಂಸ್ಥೆಗಳಲ್ಲಿನ ಪ್ರವೇಶ ಪ್ರಕ್ರಿಯೆ ಕೈಗೊಳ್ಳವುದು, ಪ್ರವೇಶಾತಿಯಲ್ಲಿ ಸೀಟುಗಳನ್ನು ಮೀಸಲಿರಿಸುವುದು ಇತ್ಯಾದಿಗಳ ಸಂಬಂಧವಾಗಿ ಡೀಮ್ಡ್ ವಿಶ್ವವಿದ್ಯಾಲಯಗಳೂ ಸೇರಿದಂತೆ ಕರ್ನಾಟಕ ರಾಜ್ಯದ ಎಲ್ಲಾ ವೃತ್ತಿಪರ ಶಿಕ್ಷಣ ಸಂಸ್ಥೆಗಳು (ಪ್ರವೇಶಾತಿ ನಿಯಂತ್ರಣ ಮತ್ತು ಶುಲ್ಕ ನಿಗಧಿ) (ತಿದ್ದುಪಡಿ) ಅಧಿನಿಯಮ, 2017ರಲ್ಲಿನ ಪ್ರಕರಣ 2,3,4,6,7 ಮತ್ತು 8 ತಕ್ಷಣದಿಂದ ಜಾರಿಗೆ ಬರತಕ್ಕದೆಂದು ಈ ಮೂಲಕ ಅಧಿಸೂಚಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

**(ಎಸ್. ವೆಂಕಟೇಶ್)**
ಸರ್ಕಾರದ ಅಧೀನ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ (ತಾಂತ್ರಿಕ ಶಿಕ್ಷಣ)